5 December 2025 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಒಂದೊಂದು ಸಮಯದಲ್ಲಿ, ಸ್ಥಳದಲ್ಲಿ ವ್ಯಕ್ತಿಗಳು ಮಾತನಾಡುವುದಿಲ್ಲ! ಅವರ ಶ್ರೀಮಂತಿಕೆ ಮಾತನಾಡುತ್ತದೆ!

ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಸುಖ ಸಂತೋಷದಲ್ಲಿ ಜೊತೆಯಾಗುವ ನೂರು ಜನರಿಗಿಂತ... ನೋವಲ್ಲಿ ಜೊತೆಯಾಗುವ ಒಂದು ಮನಸ್ಸೇ ಶ್ರೇಷ್ಠ

ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 46 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಪುಟಿನ್ ಭೇಟಿಗೆ ನಿರಾಕರಣೆ: ಸರ್ಕಾರದ ವಿರುದ್ಧ ರಾಗಾ ಕಿಡಿ

**ನವದೆಹಲಿ:** ರಷ್ಯಾ ಅಧ್ಯಕ್ಷ ಪುಟಿನ್ ಜೊತೆ ಸಭೆ ನಡೆಸಲು ನನಗೆ ಅವಕಾಶ ನೀಡಿಲ್ಲ ಎಂದು ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅಸಮಾಧಾನ ವ್ಯಕ್ತಪಡಿಸಿದರು.



ಮಾಧ್ಯಮಗಳ ಜೊತೆ ಗುರುವಾರ ಮಾತನಾಡಿದ ಅವರು, ಸಾಮಾನ್ಯವಾಗಿ ಭಾರತಕ್ಕೆ ಯಾರೇ ಭೇಟಿ ನೀಡಿದರೂ ಅವರ ಜೊತೆ ಪ್ರತಿಪಕ್ಷದ ನಾಯಕರು ಸಭೆ ನಡೆಸುವುದು ಶಿಷ್ಟಾಚಾರ. ಇದು ವಾಜಪೇಯಿ, ಮನಮೋಹನ್ ಸಿಂಗ್ ಸರ್ಕಾರದಲ್ಲಿಯೂ ನಡೆಯುತ್ತಿತ್ತು. ಆದರೆ ಈಗ ಈ ಶಿಷ್ಟಾಚಾರ ಪಾಲನೆಯಾಗುತ್ತಿಲ್ಲ ಎಂದು ಕಿಡಿಕಾರಿದರು.

ನಾನು ವಿದೇಶಕ್ಕೆ ಹೋದಾಗ ವಿಪಕ್ಷ ನಾಯಕರನ್ನು ಭೇಟಿ ಮಾಡಬಾರದು ಎಂದು ಅವರು ಸೂಚಿಸುತ್ತಾರೆ. ನಾವು ಭಾರತವನ್ನು ಪ್ರತಿನಿಧಿಸುತ್ತೇವೆ. ಆದರೆ ಈ ಸರ್ಕಾರ ನಾವು ವಿದೇಶಿ ಗಣ್ಯರನ್ನು ಭೇಟಿ ಮಾಡಲು ಬಯಸುವುದಿಲ್ಲ. ಅಭದ್ರತೆಯ ಕಾರಣದಿಂದ ಪ್ರಧಾನಿ ಮೋದಿ ಮತ್ತು ವಿದೇಶಾಂಗ ಸಚಿವಾಲಯ ಈ ಶಿಷ್ಟಾಚಾರವನ್ನು ಅನುಸರಿಸುತ್ತಿಲ್ಲ ಎಂದು ಹೇಳಿದರು. ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಎರಡು ದಿನಗಳ ಭಾರತ ಪ್ರವಾಸ ಕೈಗೊಂಡಿದ್ದು ಗುರುವಾರ ದೆಹಲಿಗೆ ಆಗಮಿಸಿದರು.

# ದ್ವೇಷ ಭಾಷಣಕ್ಕೆ ಕಡಿವಾಣ

## ಪ್ರತಿಬಂಧಕ ವಿಧೇಯಕಕ್ಕೆ ಸಚಿವ ಸಂಪುಟ ಸಭೆ ಅಸ್ತು

**ಬೆಂಗಳೂರು:** ರಾಜ್ಯದಲ್ಲಿ ದ್ವೇಷ ಭಾಷಣಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕಕ್ಕೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಯಿತು.



ವಿಧಾನಸೌಧದಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಟ್ಟು ಎಂಟು ಮಹತ್ವದ ವಿಧೇಯಕಕ್ಕೆ ಒಪ್ಪಿಗೆ ನೀಡಲಾಗಿದೆ. ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್ ಮಾಹಿತಿ ನೀಡಿದರು.

ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕ, ಬಯಲುಸೀಮೆ ತಿದ್ದುಪಡಿ ವಿಧೇಯಕ, ಮಲೆನಾಡು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, ಧಾರ್ಮಿಕ ದತ್ತಿ ವಿಧೇಯಕ, ಜಾನುವಾರು ಹತ್ಯೆ ಪ್ರತಿಬಂಧಕ ಹತ್ಯೆ ಸಂರಕ್ಷಣೆ ವಿಧೇಯಕ, ಸಾಮಾಜಿಕ ಬಹಿಷ್ಕಾರ ನಿಷೇಧ ವಿಧೇಯಕ, ಘಾಟಿ ಸುಬ್ರಮಣ್ಯ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, ಚಾಮುಂಡೇಶ್ವರಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ ಮತ್ತು ಇತರೆ ಕಾನೂನುಗಳ (ತಿದ್ದುಪಡಿ) ವಿಧೇಯಕ ಹಾಗೂ ಕರ್ನಾಟಕ ರಾಜ್ಯ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕಕ್ಕೆ ಸಂಪುಟ ಸಭೆ ಒಪ್ಪಿಗೆ ಸೂಚಿಸಿದೆ ಎಂದು ಅವರು ತಿಳಿಸಿದರು.



## 1777 ಎಕರೆ ಡಿನೋಟಿಫೈಗೆ ಒಪ್ಪಿಗೆ


ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯ 13 ಹಳ್ಳಿಗಳ ರೈತರ ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ, 1777 ಎಕರೆ ಡಿನೋಟಿಫೈ ಮಾಡಲು ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ. 2025 ಜುಲೈ 15ರಂದು ರೈತರೊಂದಿಗೆ ನಡೆದ ಸಭೆಯಲ್ಲಿ ಕೆಐಎಡಿಬಿ ಅಂತಿಮ ಅಧಿಸೂಚನೆ ರದ್ದು ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದರು. ಇಂದು ನಡೆದ ಪುಟ 2ಕ್ಕೆ

## 9ಕ್ಕೆ ಕೈ ಸಿಎಲ್‌ಪಿ ಸಭೆ

**ಬೆಂಗಳೂರು:** ಬೆಳಗಾವಿ ಅಧಿವೇಶನ ಹಿನ್ನೆಲೆ ಡಿಸೆಂಬರ್ 9ರ ಮಂಗಳವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. ಬೆಳಗಾವಿ ಖಾಸಗಿ ಹೋಟೆಲ್‌ನಲ್ಲಿ ಸಂಜೆ 7ಕ್ಕೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಿಎಲ್‌ಪಿ ಸಭೆ ನಡೆಯಲಿದೆ. ಈಗಾಗಲೇ ಬಣ ರಾಜಕೀಯದಿಂದ ಗೊಂದಲಕ್ಕೆ ಒಳಗಾಗಿರುವ ಕಾಂಗ್ರೆಸ್ ಶಾಸಕರು ಶಾಸಕಾಂಗ ಪಕ್ಷದ ಸಭೆಯಲ್ಲಿ ಮಾಹಿತಿ ಪಡೆಯುವ ಸಾಧ್ಯತೆ ಇದೆ. ಪವರ್ ಶೇರಿಂಗ್ ವಿಚಾರದಲ್ಲಿ ಗೊಂದಲ ಆರಂಭವಾದ ಪುಟ 2ಕ್ಕೆ

## ಬಿಜೆಪಿ ಭಿನ್ನರ ಗುಂಪಿಗೆ ಸಿಗದ ಅಮಿತ್ ಶಾ ಭೇಟಿ

**ನವದೆಹಲಿ:** ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಸಮರ ಸಾರಿರುವ ಬಿಜೆಪಿ ಭಿನ್ನ ನಾಯಕರು ದೆಹಲಿಯಲ್ಲಿ ಬೀಡು ಬಿಟ್ಟಿದ್ದಾರೆ.




ಶಾಸಕ ರಮೇಶ್ ಜಾರಕಿಹೊಳಿ ನೇತೃತ್ವದ ಭಿನ್ನರ ಗುಂಪು ರಾಜ್ಯ ಬಿಜೆಪಿ ಉಸ್ತುವಾರಿ ರಾಧ ಮೋಹನ್ ದಾಸ್ ಅಗರವಾಲ್, ಕೇಂದ್ರ ಸಚಿವರಾದ ಎಚ್.ಡಿ ಕುಮಾರಸ್ವಾಮಿ, ವಿ.ಸೋಮಣ್ಣ, ಸಂಸದ ಬಸವರಾಜ್ ಬೊಮ್ಮಾಯಿ ಅವರನ್ನು ಭೇಟಿ ಮಾಡಿದ್ದಾರೆ. ಆದರೆ ಅವರಿಗೆ ಇನ್ನೂ ಅಮಿತ್ ಶಾ ಭೇಟಿ ಸಾಧ್ಯವಾಗಿಲ್ಲ.

ಸರ್ಕಾರದ ವಿರುದ್ಧ ಬಿ.ವೈ. ವಿಜಯೇಂದ್ರ ಸಮರ್ಪಕವಾಗಿ ಹೋರಾಟ ನಡೆಸುತ್ತಿಲ್ಲ. ರಾಜ್ಯದ ಪ್ರಸಕ್ತ ಸಮಸ್ಯೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ಸಂಘಟನೆ ಬಲಪಡಿಸುವಲ್ಲಿ ವಿಫಲರಾಗಿದ್ದಾರೆ. ಮಾಧ್ಯಮ ಹೇಳಿಕೆಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿದ್ದಾರೆ ಎಂದು ರೆಬೆಲ್ ತಂಡ ಹೈಕಮಾಂಡ್ ನಾಯಕರ ಮುಂದೆ ಆಕ್ರೋಶ ವ್ಯಕ್ತಪಡಿಸಿದೆ ಎನ್ನಲಾಗಿದೆ.

## ದೆಹಲಿಗೆ ಬಂದಿಳಿದ ಪುಟಿನ್

### ಖುದ್ದು ಪಾಲಂ ಏರ್ಪೋರ್ಟ್‌ಗೆ ತೆರಳಿ ಸ್ವಾಗತಿಸಿದ ಪ್ರಧಾನಿ ಮೋದಿ

ನವದೆಹಲಿ: ಡಿಸೆಂಬರ್ 4– 5 ರಂದು 2 ದಿನಗಳ ಭಾರತ ಭೇಟಿಗಾಗಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ವಿಶೇಷ ವಿಮಾನದಲ್ಲಿ ಗುರುವಾರ ರಾತ್ರಿ ದೆಹಲಿಯ ಪಾಲಂ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದಾರೆ.



ಪುಟಿನ್ ಅವರು ಇಂದು ರಾತ್ರಿ ದೆಹಲಿಯ ಐಟಿಸಿ ಮೌರ್ಯದಲ್ಲಿ ಉಳಿದುಕೊಳ್ಳಲಿದ್ದಾರೆ. ಹೀಗಾಗಿ, ಅಲ್ಲಿ ಭಾರಿ ಬಿಗಿ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

**ಇಂದಿನ ಕಾರ್ಯಕ್ರಮಗಳು**

ರಷ್ಯಾ ಅಧ್ಯಕ್ಷ ಪುಟಿನ್ (ಡಿ5)ನಾಳೆ ಬೆಳಿಗ್ಗೆ ರಾಜ್ಘಾಟ್ಗೆ ಭೇಟಿ ನೀಡಿ ಮಹಾತ್ಮ ಗಾಂಧಿಯವರಿಗೆ ಗೌರವ ಸಲ್ಲಿಸಲಿದ್ದಾರೆ.

ಭಾರತ?ರಷ್ಯಾ 23ನೇ ವಾರ್ಷಿಕ ಶೃಂಗಸಭೆಯು ಶುಕ್ರವಾರ ನಡೆಯಲಿದ್ದು, ಅದಕ್ಕೂ ಮೊದಲು ರಾಷ್ಟ್ರಪತಿ ಭವನದಲ್ಲಿ ಔಪಚಾರಿಕ ಸ್ವಾಗತ, ನಂತರ ಭಾರತದ ಉನ್ನತ ಮಟ್ಟದ ದ್ವಿಪಕ್ಷೀಯ ಕಾರ್ಯಕ್ರಮಗಳಿಗೆ ಸಾಂಪ್ರದಾಯಿಕ ಸ್ಥಳವಾದ ಹೈದರಾಬಾದ್ ಹೌಸ್ನಲ್ಲಿ ಮಾತುಕತೆ ನಡೆಯಲಿದೆ. ಪುಟ 2ಕ್ಕೆ

## 33 ಇಂಡಿಗೊ ವಿಮಾನ ರದ್ದು

**ಬೆಂಗಳೂರು:** ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರ್ಯಾಚರಣೆ ಸವಾಲು ಮತ್ತು ತಾಂತ್ರಿಕ ಕಾರಣಗಳಿಂದ ಗುರುವಾರ 73 ಇಂಡಿಗೊ ವಿಮಾನಗಳ ಹಾರಾಟ ರದ್ದಾಗಿದೆ. ಗುರುವಾರ ಹೈದರಾಬಾದ್‌ನಿಂದ ಹೊರಡಬೇಕಿದ್ದ 33 ಇಂಡಿಗೊ ವಿಮಾನಗಳು ರದ್ದಾಗಿವೆ.

ವಿಮಾನಗಳ ಸಂಚಾರ ರದ್ದಾಗಿದ್ದರಿಂದ ಸಿಟ್ಟಿಗೆದ್ದ ಪ್ರಯಾಣಿಕರು ವಿವಿಧ ವಿಮಾನ ನಿಲ್ದಾಣಗಳಲ್ಲಿ ಇಂಡಿಗೊ ಕಂಪನಿಯ ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸಿದ್ದಾರೆ. ಸಿಬ್ಬಂದಿ ಮತ್ತು ಪ್ರಯಾಣಿಕರ ನಡುವೆ ಜಟಾಪಟಿ ನಡೆದಿರುವ ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ. ಪುಟ 2ಕ್ಕೆ

# ಖರ್ಗೆ ಭುಜಕ್ಕೆ ಮಸಾಜ್ ಮಾಡಿದ ರಾಹುಲ್ ಗಾಂಧಿ!

**ನವದೆಹಲಿ:** ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭುಜಕ್ಕೆ ಸಂಸತ್ತಿನಲ್ಲಿ ಮಸಾಜ್ ಮಾಡುತ್ತಿರುವ ದೃಶ್ಯ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ.



ಕುರ್ಚಿಯಲ್ಲಿ ಆಸೀನರಾಗಿರುವ ಖರ್ಗೆ ಅವರಿಗೆ ಹಿಂಬದಿಯಿಂದ ರಾಹುಲ್ ಗಾಂಧಿ ಮಸಾಜ್ ಮಾಡಿದ್ದಾರೆ. ಈ ಸಂದರ್ಭದಲ್ಲಿ ಸೋದರಿ ಪ್ರಿಯಾಂಕಾ ಗಾಂಧಿ ವಾದ್ರಾ ಪಕ್ಕದಲ್ಲೇ ಇದ್ದರು. ಕಾಂಗ್ರೆಸ್‌ನ ಮೂವರು ನಾಯಕರು ಪರಸ್ಪರ ನಗೆ ಚಟಾಕಿ ಹಾರಿಸುತ್ತಿರುವುದು ದೃಶ್ಯದಲ್ಲಿ ಕಂಡುಬಂದಿದೆ. ಚಳಿಗಾಲದ ಸಂಸತ್ ಅಧಿವೇಶನದಲ್ಲಿ ದೇಶದ ಪ್ರಥಮ ರಾಷ್ಟ್ರಪತಿ ಡಾ.ರಾಜೇಂದ್ರ ಪ್ರಸಾದ್ ಜನ್ಮ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದ ವೇಳೆ ಈ ದೃಶ್ಯ ಕಂಡುಬಂದಿದೆ.

# ಮುಟ್ಟಿನ ರಜೆ: ತಾರತಮ್ಯ ಆಗಲ್ಲ


### ಮಹಿಳೆಯರ ಸಬಲೀಕರಣಕ್ಕಾಗಿ ಆದೇಶ: ಡಿ.ಕೆ.ಶಿವಕುಮಾರ್

**ಬೆಂಗಳೂರು:** ಉದ್ಯೋಗಸ್ಥ ಮಹಿಳೆಯರಿಗೆ ಮುಟ್ಟಿನ ರಜೆ ನೀಡುವುದು ಪುರುಷ– ಮಹಿಳೆಯರ ನಡುವಿನ ತಾರತಮ್ಯ ಆಗುವುದಿಲ್ಲ. ಇದು ಸರ್ಕಾರದ ನೀತಿ. ಇಬ್ಬರೂ ಸಮಾಜದ ಭಾಗ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ವಿವಿಧ ವಲಯಗಳ 18 ರಿಂದ 52 ವರ್ಷ ವಯಸ್ಸಿನ ಉದ್ಯೋಗಸ್ಥ ಮಹಿಳೆಯರಿಗೆ ತಿಂಗಳಿಗೆ ಒಂದರಂತೆ ವರ್ಷಕ್ಕೆ 12 ಮುಟ್ಟಿನ ರಜೆ ಕಡ್ಡಾಯಗೊಳಿಸಿ ಸರ್ಕಾರ ಆದೇಶ ಹೊರಡಿಸಿರುವುದಕ್ಕೆ ಖಾಸಗಿ ವಲಯದಿಂದ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಡಿ.ಕೆ.ಶಿವಕುಮಾರ್ ಮಾತನಾಡಿದರು.

ಸರ್ಕಾರವು ಮಹಿಳೆಯರನ್ನು ಬೆಂಬಲಿಸುವ ಮತ್ತು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿದೆ. ನಾವು ಸಮಾನತೆಗೆ ಬದ್ಧರಾಗಿದ್ದೇವೆ. ಪುರುಷರು ಪುಟ 2ಕ್ಕೆ





## ಸರ್ಕಾರಿ ನೌಕರರಿಗೂ ಅನ್ವಯ

**ಬೆಂಗಳೂರು:** ಸರ್ಕಾರಿ ವಲಯದ ಮಹಿಳಾ ಉದ್ಯೋಗಿಗಳಿಗೂ ತಿಂಗಳಿಗೆ ಒಂದು ದಿನ ವೇತನ ಸಹಿತ ಮುಟ್ಟಿನ ರಜೆಯನ್ನು ವಿಸ್ತರಿಸಿ ರಾಜ್ಯ ಸರ್ಕಾರ ಆದೇಶಿಸಿದೆ. ವಿವಿಧ ವಲಯಗಳ 18 ರಿಂದ 52 ವರ್ಷ ವಯಸ್ಸಿನ ಉದ್ಯೋಗಸ್ಥ ಪುಟ 2ಕ್ಕೆ

## ಮೂಡಾ ಅಧ್ಯಕ್ಷರಾಗಿ ಬಿ.ಪಿ.ಪ್ರಕಾಶ್ ನೇಮಕ

**ಬೆಂಗಳೂರು:** ಮಂಡ್ಯ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರೂ ಹಿರಿಯ ಪತ್ರಕರ್ತ ಬಿಪಿ ಪ್ರಕಾಶ್ ರವರನ್ನು ಮಂಡ್ಯ ನಗರಾಭಿವೃದ್ಧಿಯ ಅಧ್ಯಕ್ಷರಾಗಿ (ಮೂಡಾ)ಗುರುವಾರ ಸರ್ಕಾರ ನೇಮಕ ಆದೇಶ ಹೊರಡಿಸಿದೆ.



ಪ್ರಾಧಿಕಾರದ ಸದಸ್ಯರಾಗಿ ಇದ್ರೀಸ್ ಖಾನ್, ಕಾರ್ತಿಕ್.ಕೆ.ಜಿ, ಎನ್.ಎಸ್.ಮಹೇಶ್, ಕಮಲಮ್ಮ ಅವರನ್ನು ನೇಮಕ ಮಾಡಲಾಗಿದೆ

## ವಿಚಾರಣೆ: ರೇಣುಕಾಸ್ವಾಮಿ ತಂದೆ, ತಾಯಿಗೆ ಸಮನ್ಸ್

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಡಿಸೆಂಬರ್ 17ರಿಂದ ಸಾಕ್ಷ್ಯ ವಿಚಾರಣೆ ಆರಂಭವಾಗಲಿದೆ. ಬೆಂಗಳೂರಿನ ಸ್ಥಳೀಯ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯ ನಂತರ ನ್ಯಾಯಾಧೀಶರು ಮೃತ ರೇಣುಕಾಸ್ವಾಮಿ ತಂದೆ ಹಾಗೂ ತಾಯಿಗೂ ಸಮನ್ಸ್ ಜಾರಿಗೊಳಿಸಿದ್ದಾರೆ. ಡಿಸೆಂಬರ್ 17ರಿಂದ ಪ್ರಕರಣದ ಸಾಕ್ಷಿಗಳ ವಿಚಾರಣೆ ಆರಂಭವಾಗುತ್ತಿದೆ. ಮೊದಲ ಹಂತದಲ್ಲಿ ರೇಣುಕಾಸ್ವಾಮಿಯವರ ತಂದೆ, ತಾಯಿ ಪುಟ 2ಕ್ಕೆ

## ರೂಪಾಯಿ ಮೌಲ್ಯ ಕುಸಿತ: ಮೋದಿಜೀ ಮಾಸ್ಟರ್ ಸ್ಟ್ರೋಕ್

**ಬೆಂಗಳೂರು:** ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯ ದಾಖಲೆ ಮಟ್ಟಕ್ಕೆ ಕುಸಿತ ಕಂಡಿದೆ. ಇದನ್ನೇ ಉಲ್ಲೇಖ ಮಾಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಈ ವೈಫಲ್ಯಗಳನ್ನು ಮೋದಿಜೀಯ ಮಾಸ್ಟರ್ ಸ್ಟ್ರೋಕ್ ಆಗಿ ಬಿಜೆಪಿ ಆಚರಿಸುತ್ತದೆಯೇ ಎಂದು ಲೇವಡಿ ಮಾಡಿದ್ದಾರೆ.



ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ರೂಪಾಯಿ ಮೌಲ್ಯ ಅಮೆರಿಕದ ಡಾಲರ್ ಎದುರು 90.15ಕ್ಕೆ ಕುಸಿದಿತ್ತು. ಇದರ ಬೆನ್ನಲ್ಲೇ ಸರ್ಕಾರದ ವಿರುದ್ಧ ಪ್ರಿಯಾಂಕ್ ವಾಗ್ದಾಳಿ ನಡೆಸಿದ್ದಾರೆ. ಇದೇ ಮೊದಲ ಬಾರಿಗೆ ಇಂಟರ್‌ನ್ಯಾಷನಲ್ ಮಾನಿಟರಿ ಫಂಡ್ ಭಾರತದ ಅಂಕಿಅಂಶಗಳಿಗೆ ಸಿ ಗ್ರೇಡ್ ನೀಡಿದೆ ಎಂದು ಪ್ರಿಯಾಂಕ್ ಉಲ್ಲೇಖಿಸಿದ್ದಾರೆ. ಕೇಂದ್ರ ಸರ್ಕಾರವೇ ನೀಡಿದ ಮಾಹಿತಿಯಂತೆ ಕಳೆದ

## ಬುರುಡೆ ಚಿನ್ನಯ್ಯನ ಜಾಮೀನು ಸಿಕ್ಕರೂ ಬಿಡುಗಡೆ ಭಾಗ್ಯವಿಲ್ಲ

**ಶಿವಮೊಗ್ಗ:** ಧರ್ಮಸ್ಥಳ ಬುರುಡೆ ಪ್ರಕರಣದ ಆರೋಪಿ ಚಿನ್ನಯ್ಯನಿಗೆ ಜಾಮೀನು ಮಂಜೂರಾದರೂ ಇನ್ನು ಬಿಡುಗಡೆ ಸಿಕ್ಕಿಲ್ಲ. ಚಿನ್ನಯ್ಯನಿಗೆ 1 ಲಕ್ಷ ರೂ. ಬಾಂಡ್, ಇಬ್ಬರ ಶ್ಯೂರಿಟಿಯೊಂದಿಗೆ 12 ಷರತ್ತು ವಿಧಿಸಿ ಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ಜಾಮೀನು ಸಿಕ್ಕಿದರೂ ಚಿನ್ನಯ್ಯನಿಗೆ ಶ್ಯೂರಿಟಿ ನೀಡಲು ಯಾರೂ ಮುಂದೆ ಬರುತ್ತಿಲ್ಲ.



ಮಂಗಳೂರಿನಲ್ಲಿರುವ ಜಿಲ್ಲಾ ನ್ಯಾಯಾಲಯ ಜಾಮೀನು ಸಿಕ್ಕಿ 9 ದಿನ ಕಳೆದರೂ ಶ್ಯೂರಿಟಿ ನೀಡಲು ಯಾರೂ ಮುಂದೆ ಬಾರದ ಕಾರಣ ಶಿವಮೊಗ್ಗ ಜಿಲ್ಲಾ ಕಾರಾಗೃಹದಲ್ಲೇ ಚಿನ್ನಯ್ಯ ಇರುವಂತಾಗಿದೆ.

ಧರ್ಮಸ್ಥಳ ಪ್ರಕರಣದಲ್ಲಿ ಚಿನ್ನಯ್ಯನನ್ನು ಬಳಸಿಕೊಂಡು ಬುರುಡೆ ಗ್ಯಾಂಗ್ ದೂರು ನೀಡಿತ್ತು. ಆದರೆ ಯಾವಾಗ ಬುರುಡೆ ಗ್ಯಾಂಗ್ ವಿರುದ್ಧವೇ ಚಿನ್ನಯ್ಯ ತಿರುಗಿ ಬಿದ್ದನೋ ಅಲ್ಲಿಂದ ಗ್ಯಾಂಗ್ ಸದಸ್ಯರು ಚಿನ್ನಯ್ಯನ ವಿರುದ್ಧವೇ ಮಾತನಾಡುತ್ತಿದ್ದಾರೆ.

ವಿಶೇಷ ತನಿಖಾ ತಂಡ ತನಿಖಾ ವರದಿಯನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿತ್ತು. ಅದರ ಬೆನ್ನಲ್ಲೇ ಚಿನ್ನಯ್ಯ ಜಾಮೀನಿಗೆ ಅರ್ಜಿ ಸಲ್ಲಿಸಿದ್ದ. ಅರ್ಜಿಯನ್ನು ಪುರಸ್ಕರಿಸಿದ ಮಂಗಳೂರಿನಲ್ಲಿರುವ ಜಿಲ್ಲಾ ನ್ಯಾಯಾಲಯ ಪುಟ 2ಕ್ಕೆ

## 10 ದಿನಗಳ ಅಧಿವೇಶನಕ್ಕೆ ಅಂದಾಜು 21 ಕೋಟಿ ವೆಚ್ಚ

**ಬೆಳಗಾವಿ:** ಡಿಸೆಂಬರ್ 8ರಿಂದ ಆರಂಭವಾಗುವ ಬೆಳಗಾವಿ ಚಳಿಗಾಲ ಅಧಿವೇಶನಕ್ಕೆ 21 ಕೋಟಿ ರೂ. ವೆಚ್ಚದ ಅಂದಾಜು ಪಟ್ಟಿಯನ್ನು ಜಿಲ್ಲಾಡಳಿತ ಸಲ್ಲಿಸಿದೆ. ಡಿಸೆಂಬರ್ 8 ರಿಂದ 19ರವರೆಗೆ ನಡೆಯಲಿರುವ ಹತ್ತು ದಿನಗಳ ಅಧಿವೇಶನಕ್ಕೆ ಜಿಲ್ಲಾಡಳಿತವು 21 ಕೋಟಿ ರೂ. ವೆಚ್ಚವನ್ನು ಅಂದಾಜಿಸಿದೆ.

ಕಳೆದ ವರ್ಷ ರಾಜ್ಯ ಸರ್ಕಾರ 15.30 ಕೋಟಿ ರೂ.ಗಳನ್ನು ಖರ್ಚು ಮಾಡಿತ್ತು. ಈ ವರ್ಷ 5.70 ಕೋಟಿ ರೂ.ಗಳ ಹೆಚ್ಚಳವಾಗಿದೆ. 2012 ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನಗಳಿಗಾಗಿ ರಾಜ್ಯ ಸರ್ಕಾರವು ಒಟ್ಟು 169.6 ಕೋಟಿ ರೂ.ಗಳನ್ನು ಖರ್ಚು ಮಾಡಿದೆ. ಈ ಖರ್ಚು ಮತ್ತು ವೆಚ್ಚಗಳು ಇದೀಗ ಸಾರ್ವಜನಿಕ, ರಾಜಕೀಯ ಚರ್ಚೆಗೆ ಕಾರಣವಾಗಿದೆ.

ವೆಚ್ಚವು ಪ್ರಯಾಣ, ವಸತಿ, ಭದ್ರತೆ, ಅತಿಥಿ ನಿರ್ವಹಣೆ, ತಾಂತ್ರಿಕ ಬೆಂಬಲ, ವಿಶೇಷ ಸಿಬ್ಬಂದಿಯ ನಿಯೋಜನೆ, ಸಾರಿಗೆ ಮತ್ತು ಸುವರ್ಣ ಸೌಧದ ನಿರ್ವಹಣೆ ಸೇರಿದಂತೆ ಇತರ ವೆಚ್ಚಗಳನ್ನು ಒಳಗೊಂಡಿದ್ದು, ಹೆಚ್ಚುವರಿಯಾಗಿ ಸಂಪುಟ ಸಭೆಗಳು, ವಿಶೇಷ

# ಬಂಡವಾಳ ಹೂಡಿಕೆಗೆ 'ವಿಷನ್ ಡಾಕ್ಯುಮೆಂಟ್'

## 150 ಬಿಲಿಯನ್ ಡಾಲರ್ ವಹಿವಾಟು ನಿರೀಕ್ಷೆ | ಸಚಿವ ಎಂ.ಬಿ.ಪಾಟೀಲ್ ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ಮೊಬೈಲ್ ಮತ್ತು ಎಲೆಕ್ಟ್ರಾನಿಕ್ ಉತ್ಪನ್ನಗಳ ಉತ್ಪಾದನೆ ಹಾಗೂ ವಿನ್ಯಾಸ ಕ್ಷೇತ್ರದ ವಿಸ್ತರಣೆ ಗುರಿಯಾಗಿ ಇಟ್ಟುಕೊಂಡು 150 ಬಿಲಿಯನ್ ಡಾಲರ್ ವಾರ್ಷಿಕ ವಹಿವಾಟು ಹಾಗೂ ಹೂಡಿಕೆಗೆ ಅನುಕೂಲ ಆಗುವಂತೆ ವಿಷನ್ ಡಾಕ್ಯುಮೆಂಟ್ ತಯಾರಿಸುವಂತೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಅಧಿಕಾರಿಗಳಿಗೆ ಸೂಚಿಸಿದರು.



ವಿಧಾನಸೌಧದ ಕಚೇರಿಯಲ್ಲಿ ತಮ್ಮನ್ನು ಭೇಟಿಯಾದ ಇಂಡಿಯನ್ ಸೆಲ್ಯುಲರ್ ಮತ್ತು ಎಲೆಕ್ಟ್ರಾನಿಕ್ಸ್ ಅಸೋಸಿಯೇಷನ್ (ಐಸಿಇಎ) ಅಧ್ಯಕ್ಷ ಪಂಕಜ್ ಮಹೀಂದ್ರ ನೇತೃತ್ವದ ಉನ್ನತ ಮಟ್ಟದ ನಿಯೋಗದ ಜೊತೆ ಅವರು ಮಾತುಕತೆ ನಂತರ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವಾಲಯ ಈ ವರ್ಷದ ಏಪ್ರಿಲ್ ತಿಂಗಳಲ್ಲಿ ಎಲೆಕ್ಟ್ರಾನಿಕ್ಸ್ ಬಿಡಿಭಾಗಗಳ ತಯಾರಿಕೆ ಯೋಜನೆಯನ್ನು ಘೋಷಿಸಿದೆ. ಇದಕ್ಕೆ ಸಮಾನಾಂತರವಾಗಿ ರಾಜ್ಯ ಸರ್ಕಾರ ಕೂಡ ಒಂದು ಯೋಜನೆಯನ್ನು ರೂಪಿಸಲು ಚಿಂತಿಸುತ್ತಿದೆ. ಇದರ ಕಾರ್ಯಸಾಧ್ಯತೆಯನ್ನು ಕುರಿತು ಅಧ್ಯಯನ ಮಾಡುತ್ತಿದೆ. ಇದು ಕರಡು ಹಂತದಲ್ಲಿದೆ. ಇದಕ್ಕೆ ಐಸಿಇಎ ನೀಡುವ ಸಲಹೆಗಳನ್ನು ಸ್ವಾಗತಿಸಲಾಗುವುದು ಎಂದು ತಿಳಿಸಿದರು.

ಮೊಬೈಲ್ ಫೋನ್ ಬಿಡಿಭಾಗಗಳು ಮಾತ್ರವಲ್ಲದೆ ಕೈಗಾರಿಕಾ ಎಲೆಕ್ಟ್ರಾನಿಕ್ಸ್, ಕಾರ್ಯತಂತ್ರ ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಕೂಡ ಅಪಾರ ಅವಕಾಶಗಳಿವೆ. ಅಧಿಕಾರಿಗಳಿಗೆ ಕೇಂದ್ರ ಸರ್ಕಾರದ ಯೋಜನೆ ಮತ್ತು ಇತರ ರಾಜ್ಯಗಳಲ್ಲಿ ಇರುವ ಇಂತಹ ಯೋಜನೆಗಳ ಅಧ್ಯಯನ ಮಾಡುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.


ಐಸಿಇಎ ಅಧ್ಯಕ್ಷ ಪಂಕಜ್ ಮಹೀಂ ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಯಡಿಯಲ್ಲಿ ಸಬ್–ಅಸೆಂಬ್ಲಿ (ಡಿಸ್–ಪ್ಲೇ, ಕ್ಯಾಮರಾ ಮಾಡ್ಯೂಲ್ಸ್), ಬೇರ್ ಕಾಂಪೊನೆಂಟ್ಸ್ ಮತ್ತು ತಯಾರಿಕೆಗೆ ಬೇಕಾಗುವ ಸಾಧನಗಳಿಗೆ ಒತ್ತು ಕೊಡಲಾಗಿದೆ. ಇದಲ್ಲದೆ ವಹಿವಾಟನ್ನು ಆಧರಿಸಿ ಪ್ರೋತ್ಸಾಹನಾ ಭತ್ಯೆಗಳು, ಶೇ. 25ರಷ್ಟು ಬಂಡವಾಳ ಸಬ್ಸಿಡಿ ಬೆಂಬಲ ನೀಡಲಾಗುತ್ತದೆ. ಈ ಯೋಜನೆಗೆ ಕೇಂದ್ರ ಸರ್ಕಾರ 22,900 ಕೋಟಿ ರೂ. ವಿನಿಯೋಗಿಸುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಈ ವರ್ಷದ ನವೆಂಬರ್ ತನಕ 7,172 ಕೋಟಿ ರೂ. ಮೊತ್ತದ 17 ಹೂಡಿಕೆ ಪುಟ 2ಕ್ಕೆ

# ಕಮಿಷನ್ ದಂಧೆಯಲ್ಲಿ ಮುಳುಗಿದ ಸರ್ಕಾರ

## ಉಪ ಲೋಕಾಯುಕ್ತರ ವರದಿ | ಆರ್.ಅಶೋಕ್ ಆರೋಪ

**ಬೆಂಗಳೂರು:** ರಾಜ್ಯ ಸರ್ಕಾರ ಸಂಪೂರ್ಣವಾಗಿ ಕಮಿಷನ್ ದಂಧೆಯಲ್ಲಿ ಮುಳುಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ.



ಬಿಜೆಪಿ ಸರ್ಕಾರದ ವಿರುದ್ಧ ಶೇ.40 ರಷ್ಟು ಕಮಿಷನ್ ಎಂದು ಇಲ್ಲಸಲ್ಲದ ಸುಳ್ಳು ಆರೋಪ, ಅಪಪ್ರಚಾರ ಮಾಡಿ ಕನ್ನಡಿಗರ ದಿಕ್ಕು ತಪ್ಪಿಸಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ ಈಗ ಸಂಪೂರ್ಣವಾಗಿ ಕಮಿಷನ್ ದಂಧೆಯಲ್ಲಿ ಮುಳುಗಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ವರದಿಯೊಂದನ್ನು ಅವರು ಪೋಸ್ಟ್ ಮಾಡಿ ಆರೋಪಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಅವರೇ, ಸರ್ಕಾರದ ಪ್ರತಿಯೊಂದು ಇಲಾಖೆಯಲ್ಲೂ ಭ್ರಷ್ಟಾಚಾರ ತುಂಬಿ ತುಳುಕಾಡುತ್ತಿದೆ. ಕರ್ನಾಟಕದಲ್ಲಿ ಶೇ.63 ಭ್ರಷ್ಟಾಚಾರ ಇದೆ. ಸ್ವತಃ ಉಪ ಲೋಕಾಯುಕ್ತರೇ ತಮ್ಮ ಘನ ಸರಕಾರಕ್ಕೆ ಸರ್ಟಿಫಿಕೇಟ್ ಪುಟ 2ಕ್ಕೆ

## ದೇಶದ 5 ಭ್ರಷ್ಟ ರಾಜ್ಯಗಳಲ್ಲಿ ಕರ್ನಾಟಕಕ್ಕೂ ಸ್ಥಾನ: ನ್ಯಾ.ವೀರಪ್ಪ

**ಬೆಂಗಳೂರು:** ದೇಶದ ಐದು ಅತ್ಯಂತ ಭ್ರಷ್ಟ ರಾಜ್ಯಗಳಲ್ಲಿ ಕರ್ನಾಟಕ ಸ್ಥಾನ ಪಡೆದಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದಲ್ಲಿ ಭ್ರಷ್ಟಾಚಾರವು ಆತಂಕಕಾರಿಯಾಗಿ ಶೇ.63ರಷ್ಟಿದೆ. ಆಡಳಿತ ಮತ್ತು ಅಭಿವೃದ್ಧಿಯ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಎಂದು ಅವರು ದೂರುಗಳು ಮತ್ತು ನಡೆಯುತ್ತಿರುವ ತನಿಖೆಗಳನ್ನು ಉಲ್ಲೇಖಿಸಿ ಹೇಳಿದರು.

ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸಾಮೂಹಿಕ ಪ್ರಯತ್ನಗಳು ಅಗತ್ಯ. ಕರ್ನಾಟಕವು ಶೇ.63 ರಷ್ಟು ಭ್ರಷ್ಟಾಚಾರವನ್ನು ಎದುರಿಸುತ್ತಿದೆ. ಪ್ರತಿ ಪ್ರಮುಖ ಸರ್ಕಾರಿ ಪುಟ 2ಕ್ಕೆ

# ಬಂಡೀಪುರ, ನಾಗರಹೊಳೆ ಸಫಾರಿ ಪುನರ್ ಆರಂಭಕ್ಕೆ ಒತ್ತಾಯ

ಮೈಸೂರು: ಸಂರಕ್ಷಿತ ಅರಣ್ಯ ಪ್ರದೇಶಗಳಾದ ಕಬಿನಿ, ಬಂಡೀಪುರ ಹಾಗೂ ನಾಗರಹೊಳೆಯಲ್ಲಿ ಜಂಗಲ್ ಸಫಾರಿ ಬಂದ್ ನಿಂದಾಗಿ ಮೈಸೂರು ಪ್ರವಾಸೋದ್ಯಮದ ಮೇಲೆ ಪರಿಣಾಮ ಬೀರಲಿದ್ದು, ಈ ಹಿನ್ನೆಲೆಯಲ್ಲಿ ಸಫಾರಿ ಪುನರಾರಂಭಿಸಬೇಕೆಂದು ಮೈಸೂರು ಟ್ರಾವಲ್ಸ್ ಅಸೋಸಿಯೇಶನ್ ಅಧ್ಯಕ್ಷ ಬಿ.ಎಸ್.ಪ್ರಶಾಂತ್ ತಿಳಿಸಿದರು.

ಗುರುವಾರ ನಗರದ ಸಂದೇಶ್ ದಿ ಪ್ರಿನ್ಸ್ ಹೋಟೆಲ್‌ನಲ್ಲಿ ಮೈಸೂರು ಟ್ರಾವಲ್ಸ್ ಅಸೋಸಿಯೇಶನ್, ಸ್ಕಾಲ್ ಇಂಟರ್‌ನ್ಯಾಷನಲ್ ಮೈಸೂರು, ಹೋಟೆಲ್ ಮಾಲೀಕರ ಸಂಘ ಸೇರಿದಂತೆ ಸಫಾರಿ ಅವಲಂಬಿತರಾದ ವಾಹನ ಚಾಲಕರು, ರೈತರು, ಸಣ್ಣ ವ್ಯಾಪಾರಿಗಳು, ಕಲಾವಿದರು ಮತ್ತು ಇತರರ ಸಂಯುಕ್ತಾಶ್ರಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಕರ್ನಾಟಕದ ಪ್ರವಾಸೋದ್ಯಮ ಕ್ಷೇತ್ರವು ಹಲವು ಗಂಭೀರ ಸವಾಲುಗಳನ್ನು ಎದುರಿಸುತ್ತಿದೆ. "ಮಾನವ?ವನ್ಯಜೀವಿ ಸಂಘರ್ಷ" ಎಂಬ ಕಾರಣದಿಂದ ಸಂರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಜಂಗಲ್ ಸಫಾರಿ ಹಾಗೂ ಸಂಬಂಧಿತ ಪ್ರವಾಸೋದ್ಯಮ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಲ್ಲಿಸಿರುವ ಇತ್ತೀಚಿನ ತೀರ್ಮಾನವು ಪ್ರವಾಸೋದ್ಯಮ ಕ್ಷೇತ್ರಕ್ಕೆ ಅಪಾರ ಹಾನಿಯನ್ನುಂಟು ಮಾಡಿದೆ. ಕೇವಲ ಬಂಡಿಪುರ, ನಾಗರಹೊಳೆಗೆ ಮಾತ್ರ ಪ್ರವಾಸಿಗರ ಕಡಿಮೆಯಾಗದೇ ಹೊರ ದೇಶ ಹಾಗೂ ಬೇರೆ ರಾಜ್ಯಗಳ ಪ್ರವಾಸಿಗರೂ ಮೈಸೂರಿಗೆ ಬರುವುದು ಕಡಿಮೆಯಾಗಿದೆ. ಇದು ಮೈಸೂರು ಪ್ರವಾಸೋದ್ಯಮದ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದರು.



ಬೇಸಿಗೆ ಅವಧಿಯಲ್ಲಿ ನೀರಿನ ಅಭಾವ, ತೀವ್ರ ಬಿಸಿಲು ಮತ್ತು ಕಾಡ್ಗಿಚ್ಚಿನ ಅಪಾಯದ ಹಿನ್ನೆಲೆಯಲ್ಲಿ ಕೆಲವೊಂದು ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯ. ಆದರೆ, ಪ್ರವಾಸೋದ್ಯಮಕ್ಕೆ ಅತೀ ಪ್ರಮುಖ ಹಾಗೂ ಲಾಭದಾಯಕವಾಗಿರುವ ಚಳಿಗಾಲದ ಸಮಯದಲ್ಲಿಯೇ ಸಫಾರಿಗೆ ಸಂಪೂರ್ಣ ನಿಷೇಧ ವಿಧಿಸಿರುವುದು ಈ ಉದ್ಯಮದ ಮೇಲೆ ಭಾರೀ ಆಘಾತ ತಂದಿದೆ. ಇದರಿಂದಾಗಿ ಈ ಕ್ಷೇತ್ರವನ್ನು ಅವಲಂಬಿಸಿರುವ ಸಾವಿರಾರು ಕುಟುಂಬಗಳ ಜೀವನೋಪಾಯ ಸಂಕಷ್ಟಕ್ಕೆ ಸಿಲುಕಿದೆ. ವಿದೇಶಗಳಲ್ಲಿ ಪ್ರಚಾರ ಮಾಡುವಾಗಲೆಲ್ಲಾ ನಾವು ಈ ಸಫಾರಿಯನ್ನೇ ಮುಖ್ಯ ಭೂಮಿಕೆಯಲ್ಲಿರಿಸಿಕೊಂಡಿದ್ದೇವೆ. ಇದನ್ನು ನೋಡಿ ಹಲವಾರು ವಿದೇಶಿಗರು ಸಫಾರಿಗೆಂದೇ ಇಲ್ಲಿಗೆ ಬರುತ್ತಾರೆ. ಕೆಲವು ವಿದೇಶಿ ಪ್ರವಾಸಿಗರು ಈಗಾಗಲೇ ಭಾರತಕ್ಕೆ ಬಂದು ಮುಂದಿನ ದಿನಗಳಲ್ಲಿ ಬಂಡೀಪುರ, ಕಬಿನಿ, ನಾಗರಹೊಳೆಗೆ ಬರಲಿದ್ದಾರೆ. ಅವರ ಇಡೀ ಪ್ರವಾಸ ಇದರ ಮೇಲೆ ಆಯೋಜನೆಯಾಗಿರುತ್ತದೆ. ಈಗ ಇದ್ದಕ್ಕಿದ್ದಂತೆ ಸಫಾರಿ ರದ್ದುಗೊಳಿಸಿದರೆ ಅವರ ಇಡೀ ಪ್ರಯಾಣ ತಲೆಕೆಳಗಾಗುತ್ತದೆಂದರು.

ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಮಾತನಾಡಿ, ಮೈಸೂರಿಗೆ ಬರುವ ಬಹುತೇಕ ಎಲ್ಲ ಪ್ರವಾಸಿಗರೂ ಇಲ್ಲಿಗೆ ಭೇಟಿ ಕೊಟ್ಟೇ ಕೊಡುತ್ತಾರೆ. ಇದರಿಂದಾಗಿ ನಮ್ಮ ನಾಡಿನ ಭವ್ಯ ಅರಣ್ಯ ಸಂಪತ್ತಿನ ಪರಿಚಯ ಜನರಿಗೆ ಆಗುವ ಜೊತೆಗೆ ನಮ್ಮ ಆರ್ಥಿಕತೆಯೂ ಪ್ರವಾಸೋದ್ಯಮದ ಮೂಲಕ ಉತ್ತಮಗೊಳ್ಳುತ್ತದೆ. ಸಫಾರಿಗೆಂದು ಕೆಲಸ ಮಾಡುವ ಸಾವಿರಾರು ಜನರ ಕುಟುಂಬಗಳು ಇದರ ಮೇಲೆ ಅವಂಬಿತವಾಗಿವೆ. ಈ ಭಾಗದಲ್ಲಿರುವ ಎಲ್ಲ ಹೋಟೆಲ್‌ಗಳು ಈ ಪ್ರವಾಸಿ ಆಕರ್ಷಣೆ ಇದೆ ಎಂಬ ಆಧಾರದ ಮೇಲೆ ಸಾವಿರಾರು ಕೋಟಿ ರೂಪಾಯಿಗಳನ್ನು ಹೂಡಿಕೆ ಮಾಡಿವೆ. ಇನ್ನು ಕೆಲವು ಹೋಟೆಲ್ ಮಾಲೀಕರು ಇಲ್ಲಿನ ಪ್ರವಾಸೋದ್ಯಮವನ್ನೇ ನಂಬಿ ಬ್ಯಾಂಕ್‌ಗಳಲ್ಲಿ ಕೋಟ್ಯಂತರ ರೂಪಾಯಿಗಳ ಲೋನ್ ಪಡೆದಿದ್ದು, ರೆಸಾರ್ಟ್‌ಗಳನ್ನು ನಡೆಸುತ್ತಿದ್ದಾರೆ. ಈಗಾಗಲೇ ಬುಕ್ ಆಗಿದ್ದ ರೂಂಗಳೂ ಕ್ಯಾನ್ಸಲ್ ಆಗುತ್ತಿದ್ದು, ಹೋಟೆಲ್ ಹಾಗೂ ರೆಸಾರ್ಟ್ ಮಾಲೀಕರು ಪರದಾಡುವಂತಾಗಿದೆ. ಸಫಾರಿಯ ನಿಯಮಗಳಲ್ಲಿ, ಅವುಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಏನಾದರೂ ಬದಲಾವಣೆಗಳು ಬೇಕಿದ್ದರೆ ಅದನ್ನು ಮಾತ್ರ ಮಾಡಿಕೊಂಡು, ಅವಶ್ಯ ರೂಪುರೇಷೆಗೆ ಅನುಗುಣವಾಗಿ ಸಫಾರಿ ಪುನಾರರಂಭಿಸಬೇಕು. ಈವರೆಗೂ ಎಲ್ಲ ಮುನ್ನೆಚ್ಚರಿಕೆ ಕ್ರಮಗಳೊಂದಿಗೆ ಸಫಾರಿ ನಡೆಸಲಾಗುತ್ತಿದ್ದು, ಯಾವುದೇ ದುರ್ಘಟನೆಗಳೂ ಸಫಾರಿ ಸಮಯದಲ್ಲಿ ನಡೆದಿಲ್ಲ. ಆದ್ದರಿಂದ, ದಯವಿಟ್ಟು ಸಂರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಸ್ಥಗಿತಗೊಂಡಿರುವ ಜಂಗಲ್ ಸಫಾರಿಗಳನ್ನು ಸೂಕ್ತ ಸುರಕ್ಷತಾ ಕ್ರಮಗಳು, ವೈಜ್ಞಾನಿಕ ಮಾರ್ಗಸೂಚಿಗಳು ಹಾಗೂ ನಿಯಂತ್ರಣ ವ್ಯವಸ್ಥೆಗಳೊಂದಿಗೆ ತಕ್ಷಣ ಪುನರಾರಂಭಿಸಲು ಅನುಮತಿ ನೀಡಬೇಕು ಎಂದು ಮನವಿ ಮಾಡಿದರು. ಸ್ಕಾಲ್ ಇಂಟರ್‌ನ್ಯಾಷನಲ್ ಮೈಸೂರು ಅಧ್ಯಕ್ಷ ಸಿ.ಎ.ಜಯಕುಮಾರ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

### ಸಹಸ್ರಾರು ಮಂದಿಯ ಬದುಕು

**ಕೇವಲ ಬಂಡೀಪುರ, ನಾಗರಹೊಳೆಯ ರೆಸಾರ್ಟ್, ಹೋಟೆಲ್ ಸಿಬ್ಬಂದಿಗಳು ಮಾತ್ರವಲ್ಲದೆ ಮೈಸೂರು, ಚಾಮರಾಜನಗರ ಭಾಗದ ರೆಸಾರ್ಟ್, ಹೋಟೆಲ್ ಉದ್ಯಮಗಳು ಹೊಸ ವರ್ಷದ ಸಂಭ್ರಮಾಚರಣೆಗೆ ತಯಾರಾಗುತ್ತಿರುವ ಈ ಹೊತ್ತಿನಲ್ಲಿ ಸಫಾರಿ ಬಂದ್ ಮಾಡಿರುವುದರಿಂದ ಈ ಭಾಗದಲ್ಲಿ ಪ್ರವಾಸೋದ್ಯಮ ನಂಬಿ ಬದುಕುತ್ತಿರುವ ಅನೇಕರಿಗೆ ಸಮಸ್ಯೆಯುಂಟಾಗಲಿದ್ದು, ಇದನ್ನು ಮನಗಂಡು ಶೀಘ್ರ ಸಫಾರಿ ಪುನರ್ ಆರಂಭಿಸಬೇಕೆಂದು ಕೋರಿದರು.**

## ಮೊದಲ ಪುಟದಿಂದ

### ದಂಧೆಯಲ್ಲಿ ಮುಳುಗಿದ ಸರ್ಕಾರ

ಕೊಟ್ಟಿದ್ದಾರೆ. ಈಗೇನು ಹೇಳುತ್ತೀರಿ? ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡು ತ್ತೀರಾ? ಅಥವಾ ಇದೇ ಭಂಡ ಬಾಳು ಮುಂದು ವರೆಸುತ್ತೀರಾ? ಎಂದು ಪ್ರಶ್ನಿಸಿದ್ದಾರೆ.

**ಭತ್ತ ಖರೀದಿ ಕೇಂದ್ರ ತೆರೆಯಿರಿ:** ಈ ಬಾರಿ ಉತ್ತಮ ಮಳೆಯಿಂದಾಗಿ ಮಂಡ್ಯ, ಮೈಸೂರು ಭಾಗದಲ್ಲಿ ಭತ್ತದ ಬೆಳೆಯಲ್ಲಿ ಉತ್ತಮ ಫಸಲು ಬಂದಿದೆ. ಆದರೆ ಸರ್ಕಾರ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿ ಸದೆ, ಸೂಕ್ತ ಬೆಲೆ ಕೊಡದೆ, ದಾಸ್ತಾನಿಗೆ ಜಾಗವಿಲ್ಲ, ತೇವಾಂಶ ಜಾಸ್ತಿ ಇದೆ ಎಂದು ಎಂದಿನಂತೆ ಅನ್ನದಾತರನ್ನು ಸತಾಯಿಸುತ್ತಿದೆ ಎಂದು ಆರೋಪಿಸಿದ್ದಾರೆ. ಕೇಂದ್ರ ಸರ್ಕಾರ ಕ್ವಿಂಟಲ್ ಭತ್ತಕ್ಕೆ 2,362 ಬೆಂಬಲ ಬೆಲೆ ಘೋಷಿಸಿದೆ. ಕೇರಳ, ಒಡಿಸ್ಸಾ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ನೀಡು ತ್ತಿರುವಂತೆ ರಾಜ್ಯ ಸರ್ಕಾರದ ವತಿಯಿಂದ ಕ್ವಿಂಟಲ್ ಭತ್ತಕ್ಕೆ 500 ಪ್ರೋತ್ಸಾಹ ಧನವಾಗಿ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿ ಕೇಂದ್ರಗಳ ಮೂಲಕ ಭತ್ತ ಖರೀದಿ ಮಾಡಿ ರೈತರ ನೆರವಿಗೆ ಬನ್ನಿ. ತೇವಾಂಶ ಕಡಿಮೆ ಮಾಡಿಕೊಂಡು ಬನ್ನಿ, ದಾಸ್ತಾನಿಗೆ ಸ್ಥಳವಿಲ್ಲ ಎನ್ನುವ ಕುಂಟು ನೆಪಗಳನ್ನು ಕೊಡುವುದು ಬಿಟ್ಟು, ಪಂಜಾಬ್ ಇನ್ನಿತರ ರಾಜ್ಯಗಳ ಮಾದರಿಯಲ್ಲಿ ಭತ್ತ ಖರೀದಿ ಕೇಂದ್ರಗಳಲ್ಲೇ ಒಣಗಿಸುವ ಯಂತ್ರ ಅಳವಡಿಸಿ ಖರೀದಿ ಪ್ರಕ್ರಿಯೆ ತ್ವರಿತಗೊಳಿಸಿ ಎಂದು ಒತ್ತಾಯಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಈ ರೈತ ವಿರೋಧಿ ಧೋರಣೆ ಭತ್ತ ಖರೀದಿಯಲ್ಲೂ ಮುಂದುವರೆದರೆ ಈ ಬಾರಿ ರೈತರ ಕೆಂಗಣ್ಣಿಗೆ ಗುರಿಯಾಗಿ ಸರ್ಕಾರ ಬೀಳುವುದು ಗ್ಯಾರೆಂಟಿ ಎಂದಿದ್ದಾರೆ.

### ಜಾಮೀನು ಸಿಕ್ಕರೂ ಬಿಡುಗಡೆ ಇಲ್ಲ

1 ಲಕ್ಷ ರೂ. ಬಾಂಡ್ ಸೇರಿ 12 ಷರತ್ತುಗಳನ್ನು ವಿಧಿಸಿ ನ.25ರಂದು ಜಾಮೀನು ಮಂಜೂರು ಮಾಡಿತ್ತು. ಆ.23ರಂದು ಸುದೀರ್ಘ ವಿಚಾ ರಣೆ ಬಳಿಕ ಬುರುಡೆ ಕೇಸ್‌ನಲ್ಲಿ ಅನಾಮಿಕ ದೂರುದಾರ ಚಿನ್ನಯ್ಯನನ್ನು ಬಂಧಿಸಲಾಗಿತ್ತು. ಸೆ.6ರಂದು ಕೋರ್ಟ್ ನ್ಯಾಯಾಂಗ ಬಂಧನ ವಿಧಿಸಿದ್ದರಿಂದ ಶಿವಮೊಗ್ಗ ಜೈಲಿಗೆ ಚಿನ್ನಯ್ಯನನ್ನು ಕರೆತರಲಾಗಿತ್ತು.

### ಅಧಿವೇಶನಕ್ಕೆ 21 ಕೋಟಿ ವೆಚ್ಚ

ಶಾಸಕಾಂಗ ಕಾರ್ಯಸ್ಥಳಗಳು, ಮಾಧ್ಯಮ ಸೌಲಭ್ಯಗಳು, ಪೊಲೀಸ್ ವ್ಯವಸ್ಥೆಗಳು, ಸಾರಿಗೆ ವ್ಯವಸ್ಥೆ ಮತ್ತು ಪ್ರೋಟೋಕಾಲ್ ನಿರ್ವಹಣೆಗೆ ಹಣ ವನ್ನು ಹಂಚಲಾಗುತ್ತದೆ. ಬೆಳಗಾವಿಯಲ್ಲಿ ಅಧಿವೇಶನವನ್ನು ನಡೆ ಸುವ ಪ್ರಮುಖ ಉದ್ದೇಶ ಉತ್ತರ ಕರ್ನಾಟಕದಲ್ಲಿ ಅಭಿವೃದ್ಧಿಯನ್ನು ಉತ್ತೇಜಿ ಸುವುದು, ಆಡಳಿತ ವಿಕೇಂದ್ರೀಕರಣ ಮತ್ತು ಇಲಾಖೆಗಳ ಸಮತೋಲನ ವನ್ನು ಖಚಿತಪಡಿಸಿಕೊಳ್ಳುವುದಾಗಿದ್ದರೂ, ಈ ಗುರಿಗಳನ್ನು ಎಷ್ಟು ಪರಿ ಣಾಮಕಾರಿಯಾಗಿ ಪೂರೈಸಲಾಗುತ್ತಿದೆ ಎಂಬ ಪ್ರಶ್ನೆಗಳು ಮೂಡುತ್ತಿವೆ.

### 'ವಿಷನ್ ಡಾಕ್ಯುಮೆಂಟ್'

ಯೋಜನೆಗಳಿಗೆ ಒಪ್ಪಿಗೆ ನೀಡಿದೆ. ಇದರಿಂದ 11,800 ನೇರ ಉದ್ಯೋಗಗಳು ಸೃಷ್ಟಿಯಾಗಲಿದೆ. 65 ಸಾವಿರ ಕೋಟಿ ರೂ.ಗಳಿಗೂ ಹೆಚ್ಚಿನ ಮೊತ್ತದ ಉತ್ಪನ್ನಗಳು ತಯಾರಾಗಲಿವೆ ಎಂದು ವಿವರಿಸಿದರು.

### 33 ಇಂಡಿಗೊ ವಿಮಾನ ರದ್ದು

ಇಂಡಿಗೊ ವಿಮಾನಗಳ ಸಂಚಾರ ರದ್ದುಗೊಂಡ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ತನಿಖೆಗೆ ನಿರ್ದೇಶಿಸಿದೆ. ಬುಧವಾರ ಬೆಂಗಳೂರು ಸೇರಿದಂತೆ ದೇಶದಾದ್ಯಂತ ಕನಿಷ್ಠ 150 ಇಂಡಿಗೊ ವಿಮಾನಗಳ ಹಾರಾಟ ರದ್ದಾಗಿತ್ತು. ಇದರಿಂದಾಗಿ ವಿವಿಧೆಡೆ ತೆರಳಲು ಸಿದ್ಧರಾಗಿದ್ದ ಸಾವಿರಾರು ಪ್ರಯಾಣಿಕರು ವಿಮಾನ ನಿಲ್ದಾಣಗಳಲ್ಲಿ ಗಂಟೆಗಟ್ಟಲೆ ಕಾಯುವ ಅನಿವಾರ್ಯತೆಗೆ ಸಿಲುಕಿದ್ದರು.

### ದೆಹಲಿಗೆ ಬಂದಿಳಿದ ಪುಟಿನ್

ಪ್ರಧಾನಿ ನರೇಂದ್ರ ಮೋದಿ ಅವರು ಖುದ್ದು ಪಾಲಂ ವಿಮಾನ ನಿಲ್ದಾಣಕ್ಕೆ ತೆರಳಿ ಭಾರತ?ರಷ್ಯಾ 23ನೇ ವಾರ್ಷಿಕ ಶೃಂಗಸಭೆಗಾಗಿ ದೆಹಲಿಗೆ ಆಗಮಿಸಿದ ಪುಟಿನ್ ಅವರನ್ನು ಸ್ವಾಗತಿಸಿದರು.

ಕಳೆದ ವರ್ಷ ಜುಲೈನಲ್ಲಿ ಪ್ರಧಾನಿ ಮೋದಿ ಅವರು ಮಾಸ್ಕೋಗೆ ಭೇಟಿ ನೀಡಿದ್ದಾಗ ರಷ್ಯಾ ಅಧ್ಯಕ್ಷ ಪುಟಿನ್ ಅವರು ನೀಡಿದ ಆತಿಥ್ಯಕ್ಕೆ ಪ್ರತಿಯಾಗಿ ಪ್ರಧಾನಿ ಮೋದಿ ಅವರು ಇಂದು ರಾತ್ರಿ ಅವರಿಗೆ ಖಾಸಗಿ ಭೋಜನ ಕೂಟ ಆಯೋಜಿಸಿದ್ದರು

# ಧರ್ಮಸ್ಥಳ ಸಂಸ್ಥೆಯಿಂದ ಹಲವರ ಬದುಕು ಹಸನು

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ವಿಜಯ ಕುಮಾರ್ ನಾಗನಳ ಅಭಿಪ್ರಾಯ

ಎಚ್.ಡಿ.ಕೋಟೆ: ಕೋಟೆ ತಾಲೂಕನ್ನು ಹಿಂದುಳಿದ ತಾಲೂಕು ಎನ್ನುತ್ತಾರೆ. ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ತಾಲೂಕು ಹಿಂದುಳಿದಿರಬಹುದು ಆದರೆ, ವ್ಯವಹಾರ ಹಾಗೂ ಜ್ಞಾನದ ವಿಚಾರದಲ್ಲಿ ಮುಂದಿರುವುದನ್ನು ಎಲ್ಲ ಕಡೆ ನೋಡಿದ್ದೇನೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ವಿಜಯ ಕುಮಾರ್ ನಾಗನಳ ಅಭಿಪ್ರಾಯಪಟ್ಟರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ವತಿಯಿಂದ ಪಟ್ಟಣದ ಶ್ರೀ ವರದರಾಜ ಸ್ವಾಮಿ ದೇವಸ್ಥಾನದಲ್ಲಿ ಒಕ್ಕೂಟದ ಪದಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿ, ಒಕ್ಕೂಟದ ಪದಾಧಿಕಾರಿಗಳು ಧರ್ಮಸ್ಥಳ ಸಂಘದಿಂದ ಜನರಿಗೆ ಕೇವಲ ಸಾಲ ಸೌಲಭ್ಯ ನೀಡುತ್ತಿಲ್ಲ. ಇದರ ಜೊತೆಗೆ ಅವರಿಗೆ ಬೇಕಾಗಿರುವ ಮೂಲ ಸೌಕರ್ಯ ಹಾಗೂ ಮಹಿಳೆಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವ ಬಗ್ಗೆ ಅರಿವು ಮೂಡಿಸುತ್ತಿದ್ದೇವೆ. ಗ್ರಾಮಾಭ್ಯುದಯ, ಆರ್ಥಿಕ, ಕೃಷಿ, ಸಾಮಾಜಿಕ ಕ್ಷೇತ್ರ, ಜನರ ಜೀವನಮಟ್ಟ ಸುಧಾರಣೆ ಸೇರಿದಂತೆ ಹತ್ತು ಹಲವು ಸಮಾಜಮುಖಿ ಚಿಂತನೆಗಳೊಂದಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೆಲಸ ಮಾಡುತ್ತಿದೆ ಎಂದರು.

ನಿವೃತ್ತಿ ಮುಖ್ಯ ಶಿಕ್ಷಕ ಸ್ವಾಮಿ, ಒಕ್ಕೂಟದ ಅಧ್ಯಕ್ಷ ಲೋಕೇಶ್, ಸಮಾಜ ಸೇವಕ ಹೆಬ್ಬಲಗುಪ್ಪೆ ಶಿವಪ್ಪ ಶೆಟ್ಟಿ, ನೋಡಲ್ ಅಧಿಕಾರಿ ದೇವರಾಜ, ಯುವರಾಜ್ ಜೈನ್, ರಾಜು, ಮೇಲ್ವಿಚಾರಕಿ ಭಾರತಿ, ಚೈತ್ರ, ರಾಘವೇಂದ್ರ, ಸೇವಾ ಪ್ರತಿನಿಧಿಗಳು ಮಂಜುಳಾ, ಜಯಲಕ್ಷ್ಮಿ, ಸ್ವಾಮಿ, ಕಾಳರಾಜು, ವಿನುತಾ,ಹಾಲಮ್ಮ, ಜಯಮ್ಮ, ಕಮಲ, ಕೃಷಿವೇಣಿ, ನಾಗೇಶ್, ಹಾಗೂ ಒಕ್ಕೂಟದ ಪದಾಧಿಕಾರಿಗಳು ಸಂಸ್ಥೆಯ ಮುಖಂಡರು ಇದ್ದರು.



### ಧರ್ಮಸ್ಥಳ ವಿರುದ್ಧ ಆಧಾರರಹಿತ ಅಪಪ್ರಚಾರ

**ನಮ್ಮ ಸಂಸ್ಥೆಯಿಂದ ನಿರ್ಗತಿಕರಿಗೆ ರಾಜ್ಯದಲ್ಲಿ ಇದುವರೆಗೂ ಸಾವಿರಕ್ಕೂ ಹೆಚ್ಚು ಮನೆಗಳನ್ನು ನಿರ್ಮಾಣ ಮಾಡಿಕೊಟ್ಟಿದ್ದೇವೆ ಹಾಗೂ ಒಂದು ಸಾವಿರ ಕೆರೆಗಳನ್ನು ಹೂಳೆತ್ತುವ ಕೆಲಸ ಹಾಗೂ ಶುದ್ಧಗಂಗಾ ಕುಡಿಯುವ ನೀರಿನ ಘಟಕಗಳಿಗೆ ಹಾಗೂ ಶಿಕ್ಷಕರಿಲ್ಲದ ಶಾಲೆಗಳಿಗೆ ಅತಿಥಿ ಶಿಕ್ಷಕರ ನೇಮಕ, ದೇವಸ್ಥಾನಗಳ ಅಭಿವೃದ್ಧಿಗೆ, ಸಮುದಾಯ ಭವನಗಳಿಗೆ ಹೀಗೆ ಸಾಕಷ್ಟು ಕೆಲಸಗಳನ್ನು ರಾಜ್ಯದಲ್ಲಿ ಧರ್ಮಸ್ಥಳ ಸಂಸ್ಥೆ ಮಾಡಿದೆ ಎಂದು ತಾಲೂಕು ಯೋಜನಾ ಧಿಕಾರಿ ವಿ.ಭಾಸ್ಕರ್ ತಿಳಿಸಿದರು.**

**ಶುದ್ಧಗಂಗಾ ಕೆರೆ ಅಭಿವೃದ್ಧಿ ವಿಭಾಗದ ಪದ್ಮಯ್ಯ ಮಾತನಾಡಿ, ನಮ್ಮ ಸಂಸ್ಥೆ ಆರು ರಾಷ್ಟ್ರೀಕೃತ ಬ್ಯಾಂಕ್ ಗಳೊಂದಿಗೆ ಒಪ್ಪಂದ ಮಾಡಿಕೊಂಡು ಬಡವರಿಗೆ ಸಾಲ ಕೊಡಿ, ನಾನು ಇದ್ದೇನೆ ಎಂದು ವೀರೇಂದ್ರ ಹೆಗ್ಗಡೆಯವರು ಬ್ಯಾಂಕ್ ಗಳಿಗೆ ಜಾಮೀನು ನೀಡಿದ್ದಾರೆ. ಒಂದು ಕುಟುಂಬಕ್ಕೆ 3 ರಿದ 5 ಲಕ್ಷದ ವರಗೆ ಒಂದು ವಾರದಲ್ಲಿ ಅವರ ಖಾತೆಗೆ ಹಣ ಜಮಾ ಆಗುವಂತೆ ಮಾಡಿದ್ದಾರೆ. ಈ ಸಂಸ್ಥೆಯಿಂದ ರಾಜ್ಯದಲ್ಲಿ ಅನೇಕ ಜನರು ಬದುಕನ್ನು ಕಂಡುಕೊಂಡಿದ್ದಾರೆ. ಕೆಲವರು ನಮ್ಮ ಸಂಸ್ಥೆ ವಿರುದ್ಧ ಬಡ್ಡಿ ಜಾಸ್ತಿ ಎಂದು ಅಪಪ್ರಚಾರ ಮಾಡುತ್ತಾರೆ. ಒಂದು ಲಕ್ಷಕ್ಕೆ ಬರಿ 7,000 ಮಾತ್ರ ವರ್ಷಕ್ಕೆ ಬಡ್ಡಿ ಬರುತ್ತದೆ. ನಮ್ಮ ಸಂಸ್ಥೆ ಕೆಲಸ, ಕಾರ್ಯಗಳು ಜನರಿಗೆ ಪಾರ್ಯದರ್ಶಕವಾಗಿವೆ ಎಂದರು.**

## ಮೊದಲ ಪುಟದಿಂದ

### ಮುಟ್ಟಿನ ರಜೆ: ತಾರತಮ್ಯ ಆಗಲ್ಲ

ಮತ್ತು ಮಹಿಳೆ ಯರ ನಡುವೆ ನಾವು ಯಾವುದೇ ತಾರತಮ್ಯ ಮಾಡಬಾ ರದು ಎಂದು ನಾನು ಭಾವಿಸುತ್ತೇನೆ. ನಾವು ಇಬ್ಬರನ್ನೂ ಸಮಾ ಜದಲ್ಲಿ ಒಟ್ಟಿಗೆ ಕರೆದೊಯ್ಯಬೇಕು ಎಂದು ಹೇಳಿದರು.

ವಿವಿಧ ಕಾರ್ಯಕ್ರಮಗಳ ಮೂಲಕ ಮಹಿಳೆಯರ ಸಬಲೀಕರಣಕ್ಕೆ ಸರ್ಕಾರ ಮಾಡುತ್ತಿರುವ ಪ್ರಯತ್ನಗಳನ್ನು ಎತ್ತಿ ತೋರಿಸಿದರು. ಮಹಿಳಾ ಸಂಘಗಳನ್ನು ಪ್ರೋತ್ಸಾ ಹಿಸಿದರು ಮತ್ತು ಸರಿಯಾದ ನಿರ್ದೇಶನ ಮತ್ತು ಬೆಂಬಲದೊಂದಿಗೆ ಮಹಿಳೆಯರು ಉತ್ತಮ ಸಾಧನೆ ಮಾಡಲು ಸಮರ್ಥರಾಗಿದ್ದಾರೆ ಎಂದು ಒತ್ತಿ ಹೇಳಿದರು.

ವಿವಿಧ ವಲಯಗಳ ಉದ್ಯೋಗಸ್ಥ ಮಹಿಳೆಯರಿಗೆ ತಿಂಗಳಿಗೆ ಒಂದರಂತೆ ವರ್ಷಕ್ಕೆ 12 ಮುಟ್ಟಿನ ರಜೆಯನ್ನು ಕಡ್ಡಾಯಗೊಳಿಸುವ ರಾಜ್ಯ ಸರ್ಕಾರದ ಇತ್ತೀಚಿನ ನಿರ್ದೇಶನವನ್ನು ಪ್ರಶ್ನಿಸಿ ಬೆಂಗಳೂರು ಹೋಟೆಲ್‌ಗಳ ಸಂಘ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ.

### ರೂಪಾಯಿ ಮೌಲ್ಯ ಕುಸಿತ: ಮೋದಿಜೀ ಮಾಸ್ಟರ್ ಸ್ಟ್ರೋಕ್

ಐದು ವರ್ಷಗಳಲ್ಲಿ 2 ಲಕ್ಷ ಕಂಪನಿಗಳು ಬಾಗಿಲು ಮುಚ್ಚಿವೆ ಮತ್ತು ಕೇಂದ್ರ ಸರ್ಕಾರದ ಬಳಿ ಉದ್ಯೋಗ ಕಳೆದುಕೊಂಡವರ ಭದ್ರತೆಗೆ ಯಾವುದೇ ಯೋಜನೆಗಳು ಇಲ್ಲ ಎಂದು ಅವರು ಆರೋಪಿಸಿದ್ದಾರೆ. ಅಂತರರಾಷ್ಟ್ರೀಯ ಪಾಸ್‌ಪೋರ್ಟ್ ಸೂಚ್ಯಂಕದಲ್ಲಿ ಭಾರತದ ಪಾಸ್‌ಪೋರ್ಟ್ ಪಾತಾಳಕ್ಕೆ ಕುಸಿದಿದೆ ಎಂದು ಅವರು ಟೀಕಿಸಿದ್ದಾರೆ.

### ರೇಣುಕಾಸ್ವಾಮಿ ತಂದೆ, ತಾಯಿಗೆ ಸಮನ್ಸ್

ಹಾಗೂ ರೇಣುಕಾಸ್ವಾಮಿಯ ಮೃತದೇಹವನ್ನು ಮೊದಲು ನೋಡಿದ್ದ ಬೆಂಗಳೂರಿನ ವಾಚ್ ಮ್ಯಾನ್ ಗೆ ಕೋರ್ಟ್ ಸಮನ್ಸ್ ಜಾರಿ ಮಾಡಿದೆ.

## ಡಿ.6ಕ್ಕೆ ಕ್ರೆಡಾಯ್ ರೇರಾ ಜಾಗೃತಿ ಕಾರ್ಯಾಗಾರ

ಮೈಸೂರು: ಕ್ರೆಡಾಯ್ ಮೈಸೂರು ವತಿಯಿಂದ ಡಿ.6 ರ ಸಂಜೆ 4.30ಕ್ಕೆ ವಿಶ್ವೇಶ್ವರ ನಗರ ಎಂಬಿಸಿಟಿ ಹಾಲ್‌ನಲ್ಲಿ ರೇರಾ ಜಾಗೃತಿ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಶ್ರೀಹರಿ ತಿಳಿ ಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬಡಾವಣೆ ನಿರ್ಮಾಣಕಾರರು, ಡೆವಲಪರ್‌ಗಳು, ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿರುವವರಿಗೆ ಈ ಕಾರ್ಯಾಗಾರ ಉಪಯುಕ್ತವಾದುದಾಗಿದೆ. ರೇರಾ ಕಾಯ್ದೆ ಹೊಸ ನಿಯಮ, ಅನುಸರಣೆ ಕ್ರಮ, ಪ್ರಾಯೋಗಿಕ ಅಂಶಗಳ ಬಗ್ಗೆ ಮಾಹಿತಿ ನೀಡಲಾಗುವುದು. ರಾರೇ ಕಾಯ್ದೆಯ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿ ಅರಿವು ಮೂಡಿಸಲಾಗುವುದು ಎಂದು ವಿವರಿಸಿದರು. ಹರೀಶ್‌ಶೆಣೈ, ಕುಮಾರಸ್ವಾಮಿ, ನಾಗರಾಜ್ ವಿ. ಬೈರಿ, ಉದಯ್ ಎಸ್. ಕುಮಾರ್ ಇದ್ದರು.



## ದೊರಕದ ಪರಿಹಾರ, ಲೋಕಸಭೆ ವಿಷಯ ಪ್ರಸ್ತಾಪ

ರಾಮನಗರ: ಎಸ್‌ಟಿಆರ್‌ಆರ್ ಸ್ಯಾಟಿಲೈಟ್ ರಿಂಗ್ ರಸ್ತೆಗಾಗಿ (ಎನ್‌ಎಚ್ 948ಎ) 2021ರಲ್ಲಿ 2200ಕ್ಕೂ ಹೆಚ್ಚು ವಿಸ್ತೀರ್ಣದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಆದರೆ ಇಲ್ಲಿಯವರೆಗೆ ಭೂಸ್ವಾಧೀನದ ಪರಿಹಾರ ಇನ್ನು ಬಿಡುಗಡೆಯಾಗಿಲ್ಲ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾಕ್ಷೇತ್ರದ ಸಂಸದ ಡಾ.ಸಿ.ಎನ್. ಮಂಜುನಾಥ್ ಸಂಸತ್ತಿನಲ್ಲಿ ಪ್ರಸ್ತಾಪಿಸಿದ್ದಾರೆ. ಭೂಮಿಯನ್ನು ಕಳೆದುಕೊಂಡ ರೈತರು ಈಗ ಆರ್ಥಿಕ ಸಂಕಷ್ಟ, ಅಸ್ಥಿರತೆ ಅನುಭವಿಸುತ್ತಿದ್ದಾರೆ. ಅವರೆಲ್ಲ ತಮ್ಮ ಜೀವನ, ಭವಿಷ್ಯದ ಬಗ್ಗೆ ಗಂಭೀರ ಚಿಂತನೆಯಲ್ಲಿದ್ದಾರೆ ಎಂದು ಸರ್ಕಾರದ ಗಮನ ಸೆಳೆದರು.

ಬೆಂಗಳೂರು ನಗರದ ವಾಹನ ದಟ್ಟಣೆಯ ಒತ್ತಡವನ್ನು ಗಮನಾರ್ಹವಾಗಿ ಕಡಿಮೆ ಮಾಡಲು ಈ ಯೋಜನೆ ಅಗತ್ಯವಿದೆ. ಬೆಂಗಳೂರು ನಗರದ ಸುತ್ತಮುತ್ತಲ ಭಾಗಗಳಿಗೆ ಸಂಚಾರ ಸುಗಮವಾಗಲಿದೆ. ಹೀಗಾಗಿ ಈ ಯೋಜನೆಯನ್ನು ತಕ್ಷಣ ಕಾರ್ಯಗತಗೊಳಿಸುವ ಅಗತ್ಯವಿದೆ. ತುರ್ತು ಆದ್ಯತೆಯೊಂದಿಗೆ ಯೋಜನೆಯನ್ನು ಮುಂದುವರೆಸಬೇಕು, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಮತ್ತು ಪ್ರಧಾನ ಮಂತ್ರಿಗಳ ಕಚೇರಿಯ ಅಧಿಕಾರಿಗಳು ಅಗತ್ಯ ಅನುಮೋದನೆಗಳನ್ನು ವೇಗಗೊಳಿಸಬೇಕು. ನ್ಯಾಯ ಸಮ್ಮತ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.

ಎಸ್‌ಟಿಆರ್‌ಆರ್ ರಿಂಗ್ ರಸ್ತೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮಾಗಡಿ, ರಾಮನಗರ, ಆನೇಕಲ್ ಮತ್ತು ಹಾರೋಹಳ್ಳಿ ಭಾಗಗಳಿಗೆ ಸಂಪರ್ಕ ಕಲ್ಪಿಸುತ್ತದೆ. ಹೀಗಾಗಿ ರೈತರಿಗೆ ನ್ಯಾಯನೀಡುವುದು ಸರ್ಕಾರದ ಕರ್ತವ್ಯ. ಹಲವು ವರ್ಷಗಳಿಂದ ಬಾಕಿ ಉಳಿದಿರುವ ಈ ವಿಷಯವನ್ನು ತಕ್ಷನ ಬಗೆಹರಿಸಬೇಕು, ಭೂಸ್ವಾಧೀನಕ್ಕೆ ತ್ವರಿತವಾಗಿ ಪರಿಹಾರ ದೊರಕಿಸಿಕೊಡಬೇಕು ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ಸರ್ಕಾರವನ್ನು ವಿನಂತಿಸಿದ್ದಾರೆ.



### ಸರ್ಕಾರಿ ನೌಕರರಿಗೂ ಅನ್ವಯ

**ಮಹಿಳೆಯರಿಗೆ ತಿಂಗಳಿಗೆ ಒಂದರಂತೆ ವರ್ಷಕ್ಕೆ 12 ಮುಟ್ಟಿನ ರಜೆಯನ್ನು (ವೇತನ ಸಹಿತ) ಕಡ್ಡಾಯಗೊಳಿಸಿ ಸರ್ಕಾರ ಕಳೆದ ತಿಂಗಳು ಆದೇಶ ಹೊರಡಿಸಿತ್ತು. ರಾಜ್ಯದ ಸರ್ಕಾರಿ ಮಹಿಳಾ ಉದ್ಯೋಗಿಗಳಿಗೂ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರ ಆದೇಶಿಸಿದೆ. 18ರಿಂದ 52 ವರ್ಷದೊಳಗಿನ ಮಹಿಳಾ ಸರ್ಕಾರಿ ನೌಕರರು ಈ ರಜೆ ಪಡೆಯಲು ಅರ್ಹರು. ಈ ರಜೆ ಪಡೆಯಲು ಯಾವುದೇ ವೈದ್ಯಕೀಯ ಪ್ರಮಾಣಪತ್ರದ ಅಗತ್ಯವಿಲ್ಲ ಮತ್ತು ಅದನ್ನು ಇತರ ರಜೆಗಳೊಂದಿಗೆ ಸೇರಿಸಬಾರದು ಎಂದು ಸರ್ಕಾರ ಆದೇಶಿಸಿದೆ.**

### 1777 ಎಕರೆ ಡಿನೋಟಿಫೈಗೆ ಒಪ್ಪಿಗೆ

**ಸಚಿವ ಸಂಪುಟ ಸಭೆಯಲ್ಲಿ ರೈತರ 1777ಎಕರೆ ಡಿನೋಟಿಫೈಗೆ ಒಪ್ಪಿಗೆ ನೀಡಲಾಗಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರು ಅರಮನೆ ಮೈದಾನದಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ಇನ್ವೆಸ್ಟ್ ಕರ್ನಾಟಕ 2025ದ ಪರಿಷ್ಕೃತ ವೆಚ್ಚ ರೂ.100.70 ಕೋಟಿಗಳಿಗೆ ಘಟನೋತ್ತರ ಅನುಮೋದನೆ ನೀಡಲಾಗಿದೆ.**

### 9ಕ್ಕೆ ಕೈ ಸಿಎಲ್‌ಪಿ ಸಭೆ

**ನಂತರ ನಡೆಯುತ್ತಿರುವ ಮೊದಲ ಶಾಸಕಾಂಗ ಪಕ್ಷದ ಸಭೆ ಇದಾಗಿದೆ, ಹೀಗಾಗಿ ಸಾಕಷ್ಟು ಕುತೂಹಲ ಮೂಡಿಸಿದೆ.**

### ಕರ್ನಾಟಕಕ್ಕೂ ಸ್ಥಾನ: ನ್ಯಾ.ವೀರಪ್ಪ

ಇಲಾಖೆಯೂ ತೀವ್ರವಾಗಿ ಪರಿಣಾಮ ಬೀರಿದೆ. ಕರ್ನಾಟಕದ ಸರ್ಕಾರಿ ಇಲಾಖೆಗಳಲ್ಲಿ ವ್ಯಾಪಕವಾದ ಭ್ರಷ್ಟಾಚಾರದಿಂದಾಗಿ ಭಾರತದ ಐದು ಅತ್ಯಂತ ಭ್ರಷ್ಟ ರಾಜ್ಯಗಳಲ್ಲಿ ಒಂದಾಗಿದೆ ಎಂದು ನ್ಯಾ.ಬಿ.ವೀರಪ್ಪ ಹೇಳಿದರು.

## ಮೈಸೂರಿಗೂ ಬಂತೂ ನೀಲಿ ಕ್ಯಾಪ್

ಮೈಸೂರು: ಕರ್ನಾಟಕ ರಾಜ್ಯಾದ್ಯಂತ ಸರ್ಕಾರವು ಪೊಲೀಸ್ ಕಾನ್ಸ್ಟೇಬಲ್, ಹೆಡ್ ಕಾನ್ಸ್ಟೇಬಲ್‌ಗಳಿಗೆ ಹಳೆ ಬ್ರೌನ್ ಟೋಪಿ ಬದಲಾಗಿ ಹೊಸ ಮಾದರಿಯ ನೀಲಿ ಕ್ಯಾಪ್‌ಗಳನ್ನು ವಿತರಿಸುತ್ತಿದೆ. ಅದರಂತೆ ದಕ್ಷಿಣ ವಲಯದ ಮೈಸೂರು ಜಿಲ್ಲೆ ಪೊಲೀಸರಿಗೆ ಮಂಜೂರಾಗಿರುವ ನೀಲಿ ಕ್ಯಾಪ್‌ಗಳನ್ನು ಡಿಐಜಿಪಿ ಡಾ.ಎಂ.ಬಿ. ಬೋರಲಿಂಗಯ್ಯ ಗುರುವಾರ ತಮ್ಮ ಕಚೇರಿಯಲ್ಲಿ ಕಾನ್ಸ್ಟೇಬಲ್‌ಗಳು ಮತ್ತು ಹೆಡ್ ಕಾನ್ಸ್ಟೇಬಲ್‌ಗಳಿಗೆ ವಿತರಿಸಿದರು. ಈ ಸಂದರ್ಭ ಮಾತನಾಡಿದ ಅವರು, ಬ್ರಿಟಿಷರ ಕಾಲದಿಂದಲೂ ನಡೆದುಕೊಂಡು ಬಂದಿದ್ದ ಟೋಪಿಗಳನ್ನು ಬದಲಾಯಿಸಿ ಕಾನ್ಸ್ಟೇಬಲ್‌ಗಳು ಮತ್ತು ಹೆಡ್ ಕಾನ್ಸ್ಟೇಬಲ್‌ಗಳಿಗೂ ಎಎಸ್‌ಐ ಹಾಗೂ ಮೇಲ್ಮಟ್ಟದ ಅಧಿಕಾರಿಗಳಂತೆಯೇ ಕ್ಯಾಪ್‌ಗಳನ್ನು ನೀಡಲು ಸರ್ಕಾರ ನಿರ್ಧರಿಸಿತ್ತು. ಅದರಂತೆ ಮೈಸೂರು ಜಿಲ್ಲೆಗೆ ಮೊದಲ ಹಂತದಲ್ಲಿ ಸರಬರಾಜಾಗಿರುವ ಕ್ಯಾಪ್‌ಗಳನ್ನು ವಿತರಿಸಲಾಗುತ್ತಿದೆ ಎಂದರು. ಹೊಸ ವಿನ್ಯಾಸದ ಕ್ಯಾಪ್ ಧರಿಸಿ ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವ ಮೂಲಕ ಇಲಾಖೆ ಘನತೆ–ಗೌರವ ಹೆಚ್ಚಿಸುವ ಮೂಲಕ ಪೊಲೀಸರ ಬಗ್ಗೆ ಸಾರ್ವಜನಿಕರಲ್ಲಿ ವಿಶ್ವಾಸ ಮೂಡುವಂತೆ ಮಾಡಬೇಕು ಎಂದು ಹೇಳಿದರು. ಈ ವೇಳೆ ಎಸ್ಪಿ ಎನ್.ವಿಷ್ಣುವರ್ಧನ ಉಪಸ್ಥಿತರಿದ್ದರು.



## ಡಿ.6ಕ್ಕೆ ಸೇವಾ ಪ್ರತಿಷ್ಠಾನದ ನಾನಾ ಕಾರ್ಯಕ್ರಮ

ಮೈಸೂರು: ರಂಗೋಲಿ ಸಾಮಾಜಿಕ ಸೇವಾ ಪ್ರತಿಷ್ಠಾನದ ವತಿಯಿಂದ ಡಿ.7ರ ಬೆಳಗ್ಗೆ 9 ರಿಂದ ಮಧ್ಯಾಹ್ನ 1ರ ತನಕ ವಿವೇಕಾನಂದನಗರ ವಿಶ್ವಧಾತ್ರಿ ರಸ್ತೆಯಲ್ಲಿನ ದೇವಮಲ್ಲು ಕ್ಷತ್ರಿಯ ಜಟ್ಟಿ ಮತ ಸಂಘದ ಸಭಾಂಗಣದಲ್ಲಿ ಕನ್ನಡ ರಾಜ್ಯೋತ್ಸವ, ಉದ್ಯೋಗ ಮೇಳ ಹಾಗೂ ಔಷಧಿ ರಹಿತ ಚಿಕಿತ್ಸಾ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಸಂಘಟಕ ಕೆ.ಮಹೇಶ್ ಅರಸ್ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕೌಶಲ್ಯ ಅಭಿವೃದ್ಧಿ ಅಧಿಕಾರಿ ನಾರಾಯಣಮೂರ್ತಿ ಉದ್ಘಾಟಿಸುವರು, ಡಾ. ಸುಂದರ್ ರಾಜೇ ಅರಸ್ ಅಧ್ಯಕ್ಷತೆ ವಹಿಸುವರು, ಪಿ. ಕೃಷ್ಣ ಅರಸ್, ಜೈ ಕಪೂರ್ ಅತಿಥಿಗಳಾಗಿರುವರು, ಉದ್ಯೋಗ ಮೇಳಕ್ಕೆ ಉಚಿತ ನೋಂದಣಿ ಇದೆ. ಸಾಫ್ಟ್‌ವೇರ್, ಜೆ.ಕೆ. ಟರ?ಸ್, ಬ್ಯಾಂಕಿಂಗ್, ಫಾರ್ಮಸಿ ಮೊದಲಾದ ವಲಯಗಳ ಕಂಪನಿಗಳು ಪಾಲ್ಗೊಳ್ಳುತ್ತಿವೆ ಎಂದು ಮಾಹಿತಿ ನೀಡಿದರು. ರಾಜೇಶ್, ಬಿ.ಎನ್. ಪ್ರದೀಪ್, ಜೆ.ವಿ. ಪರಮೇಶ್, ಕೆ.ವಾಸುಕಿ ಇದ್ದರು.


**ಕರ್ನಾಟಕ ಸರ್ಕಾರ**
**ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ**
**ಕಾವೇರಿ ಜಲಾನಯನ ಯೋಜನೆಗಳು–ಮೈಸೂರು**
**ಕಾರ್ಯಪಾಲಕ ಅಭಿಯಂತರರವರ ಕಛೇರಿ, ನಂ–2 ವಿಭಾಗ, ಕಾಡಾ, ಕಾಜಯೋ, ವಿಜಯನಗರ 1ನೇ ಹಂತ, ಮೈಸೂರು–17**
**ದೂ:0821–2414090 ಇ–ಮೇಲ್ : eecada2mysore@gmail.com**

**ಟೆಂಡರ್ ಪ್ರಕಟಣೆ ಸಂಖ್ಯೆ:11/2025–26 ದಿ:01.12.2025**

ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ, ಕಾವೇರಿ ಜಲಾನಯನ ಯೋಜನೆಗಳು ಮೈಸೂರು ಪ್ರಾಧಿಕಾರದಡಿ ಬರುವ ನಂ.2 ವಿಭಾಗ ಕಛೇರಿಯ ವತಿಯಿಂದ ಮಳವಳ್ಳಿ ತಾಲ್ಲೂಕಿನ 01 ಅಚ್ಚುಕಟ್ಟು ರಸ್ತೆ ಕಾಮಗಾರಿಗಳಿಗೆ K/W-1 ರ ಪ್ರಕಾರ Kppp portal ಮೂಲಕ ಐಟಂವಾರು ಟೆಂಡರ್ ಅನ್ನು ಏಕಲಕೋಟೆ ಪದ್ಧತಿಯಲ್ಲಿ ಕರೆಯಲಾಗಿದೆ. ಭಾಗವಹಿಸಲು ಇಚ್ಛಿಸುವ ಗುತ್ತಿಗೆದಾರರು ಟೆಂಡರ್‌ಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿಗಳನ್ನು https://kppp.karnataka.gov.in ನಲ್ಲಿ ಪಡೆಯಬಹುದಾಗಿರುತ್ತದೆ. ಟೆಂಡರ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ:02.12.2025 ರಿಂದ ಟೆಂಡರ್‌ದಾರರು ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ:09.12.2025 ಸಂಜೆ 4.00 ಗಂಟೆಯವರೆಗೆ ಟೆಂಡರ್ ತೆರೆಯುವ ದಿನಾಂಕ:10.12.2025 ಸಂಜೆ 4.30 ಗಂಟೆಯ ನಂತರ.

**ಸಹಿ/–ಕಾರ್ಯಪಾಲಕ ಅಭಿಯಂತರರು, ನಂ.2 ವಿಭಾಗ, ಕಾಡಾ, ಕಾಜಯೋ, ಮೈಸೂರು.**

ವಾಸಾಸಂಇ/ಹಿಸನಿ–ಮಂ/ಕೆಎಸ್‌ಎಂಸಿ&ಎ/612/2025–26

# ವಿಶೇಷಚೇತನ ಫಲಾನುಭವಿಗಳಿಗೆ ಸೌಲಭ್ಯಗಳು ದೊರೆಯಲಿ

ಚಾಮರಾಜನಗರ, ವಿಕಲಚೇತನರಿಗೆ ಇರುವ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ದೊರೆಯಬೇಕು ಎಂದು ಎಂ.ಎಸ್.ಐ.ಎಲ್. ಅಧ್ಯಕ್ಷರು ಹಾಗೂ ಶಾಸಕಸಿ. ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿವಿಧ ಇಲಾಖೆಗಳು, ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸುವ ಮೊದಲು ಅದರ ಅರ್ಥ ಮತ್ತು ಪರಿಪೂರ್ಣತೆ ಪ್ರತಿಯೊಬ್ಬರಿಗೂ ತಿಳಿದಿರಬೇಕು. ವಿಕಲಚೇತರನ್ನು ಗುರುತಿಸುವಲ್ಲಿ ವೈದ್ಯರ ಪಾತ್ರ ಪ್ರಮುಖವಾಗಿದ್ದು ಎಲ್ಲಾ ವರ್ಗದಲ್ಲೂ ವಿಕಲಚೇತನರಿದ್ದಾರೆ. ನಿಜವಾದ ವಿಕಲಚೇತನರಿಗೆ ಸರ್ಕಾರದ ಸೌಲಭ್ಯಗಳಾದ ವಿದ್ಯಾರ್ಥಿವೇತನ, ಉನ್ನತ ಶಿಕ್ಷಣದಲ್ಲಿ ದಾಖಲಾತಿ, ಕ್ರೀಡೆಗೆ ಉತ್ತೇಜನ, ಪ್ರೋ?ರೀತ್ಸಾಹ ಧನ, ಮಾಸಾಶನ ಹಾಗೂ ಸರ್ಕಾರಿ ಹುದ್ದೆಯಲ್ಲಿ ಶೇ. 3 ರಷ್ಟು ಮೀಸಲಾತಿ ಸೌಲಭ್ಯಗಳು ತಲುಪಬೇಕು ಎಂದು ತಿಳಿಸಿದರು.

ಸರ್ಕಾರದ ವತಿಯಿಂದ ವಿಕಲಚೇತನ ಮಹಿಳೆಯನ್ನು ಮದುವೆಯಾಗುವ ವರನಿಗೆ 50 ಸಾವಿರ ರೂ. ಪ್ರೋ?ರೀತ್ಸಾಹ ಧನ ನೀಡಲಾಗುವುದು. ಅನೇಕ ವಿಕಲಚೇತನರು ಗ್ರಾಮೀಣ ಪ್ರದೇಶದಲ್ಲಿ ಕೆಲಸ ನಿರ್ವಹಿಸುತ್ತಿದ್ದು ಇವರ ವೇತನ ಹೆಚ್ಚಳಕ್ಕೆ ಸಚಿವರು, ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

ವಿಕಲಚೇತನ ಅಭ್ಯರ್ಥಿಗಳಿಗೆ ಸರ್ಕಾರಿ ಹಾಗೂ ವಿವಿಧ ಇಲಾಖೆಗಳಲ್ಲಿ ಮೀಸಲಾತಿಯಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು. ಇಲಾಖೆಗಳ ಕಾರ್ಯಕ್ರಮಕ್ಕೆ ಬಿಡುಗಡೆಯಾಗುವ ಅನುದಾನದಲ್ಲಿ ಅಂಗವಿಕಲರ ಕಲ್ಯಾಣ ನಿಧಿಗೆ ಅಗತ್ಯವಿರುವ ಹಣ ಮೀಸಲಿಡಬೇಕು. ತಾಲೂಕು ಹಾಗೂ ಜಿಲ್ಲಾಮಟ್ಟದಲ್ಲಿ ಪ್ರತಿ ಮಾಹೆಯಾನ ವಿಕಲಚೇತನರ ಅಭಿವೃದ್ಧಿಗೆ ಸಂಬಂಧಿಸಿದಂತೆ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ. ಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿಕಲಚೇತನ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ, ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಇದೇ ವೇಳೆ ಥೈಲ್ಯಾಂಡ್ ನಲ್ಲಿ ನಡೆದ ವರ್ಲ್ಡ್ ಎಬಿಲಿಟಿ ಸ್ಪೋರ್ಟ್ಸ್ ನಲ್ಲಿ ಅಂತರಾಷ್ಟ್ರೀಯ ಮಟ್ಟದ ಉದ್ದ ಜಿಗಿತ ಹಾಗೂ ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದ ಬಿಸಲವಾಡಿ ಗ್ರಾಮದ ಮನೋಜ್ ಅವರನ್ನು ಸನ್ಮಾನಿಸಲಾಯಿತು. ವಿಕಲಚೇತನರ ಕ್ರೀಡಾಕೂಟದಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಬಹುಮಾನ ವಿತರಿಸಲಾಯಿತು.

ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಹೆಚ್.ಆರ್. ಸುರೇಶ್, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಡಾ. ಕೆ.ಎನ್. ಮಂಜುನಾಥ, ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಮೇಶ್, ಗುಂಡ್ಲುಪೇಟೆ ಶಿಶು ಅಭಿವೃದ್ಧಿ ಅಧಿಕಾರಿ ಹೇಮಾವತಿ, ಇತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# 93ರ ವೃದ್ಧಗೆ ಮಣಿಪಾಲ ಯಶಸ್ವಿ ಶಸ್ತ್ರ ಚಿಕಿತ್ಸೆ




ಮೈಸೂರು: ಮಣಿಪಾಲ್ ಆಸ್ಪತ್ರೆ ತನ್ನ ಪ್ರಸೂತಿ ಮತ್ತು ಸ್ತ್ರೀ ರೋಗ ಶಾಸ್ತ್ರ ವಿಭಾಗದ ಸಾಮರ್ಥ್ಯವನ್ನು ಮತ್ತೊಮ್ಮೆ ಬಲಪಡಿಸಿದ್ದು, 93 ವರ್ಷದ ವೃದ್ಧೆಯೊಬ್ಬರಿಗೆ ದೊಡ್ಡ ಗಾತ್ರದ ಫೈಬ್ರಾಯ್ಡ್ ಗರ್ಭಕೋಶದ ಸಮಸ್ಯೆಗೆ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನಡೆಸುವ ಮೂಲಕ ಅವರ ಜೀವನ ಶೈಲಿಯಲ್ಲಿ ಸುಧಾರಣೆ ಮಾಡಿದ್ದಾರೆ.

ಈ ಬಗ್ಗೆ ಮಾತನಾಡಿದ ಡಾ.ಕೆ.ಜಿ.ಅಮೂಲ್ಯ, 90ರ ವಯಸ್ಸಿನಲ್ಲಿ ಇಷ್ಟು ದೊಡ್ಡ ಗರ್ಭಾಶಯದ ಗಡ್ಡೆ ಕಾಣಿಸಿಕೊಳ್ಳುವುದು ಅಪರೂಪ. ವಯಸ್ಸಾದ ಕಾರಣ ಶಸ್ತ್ರಚಿಕಿತ್ಸೆಯು ಕಷ್ಟಕರವಾಗಿತ್ತು. ಆದರೆ, ನಮ್ಮ ತಜ್ಞ ವೈದ್ಯಕೀಯ ತಂಡದ ಅನುಭವ, ಶಸ್ತ್ರಚಿಕಿತ್ಸೆಯ ಪರಿಣಿತಿ ಮತ್ತು ಬಹು-ಶಿಸ್ತಿನ ಸಮನ್ವಯತೆಯಿಂದ ಈ ಕಾರ್ಯ ಯಶಸ್ವಿಯಾಗಿದೆ,' ಎಂದು ಹೇಳಿದರು.

ಆಸ್ಪತ್ರೆ ವೈದ್ಯ ಡಾ.ಎಂ.ಜಿ.ಸತೀಶ್ ಕುಮಾರ್ ಮಾತನಾಡಿ, ಆಲಿಸ್ ಜೋಸೆಫ್ (93) ಕಳೆದ ಕೆಲವು ದಿನಗಳಿಂದ ನಿರಂತರ ಹೊಟ್ಟೆ ನೋವು ಮತ್ತು ಅಸ್ವಸ್ಥತೆಯಿಂದ ಬಳಲುತ್ತಿದ್ದರು. ಇದರಿಂದಾಗಿ ಅವರ ದೈನಂದಿನ ಜೀವನಕ್ಕೆ ತೊಂದರೆಯಾಗುತ್ತಿದ್ದ ಹಿನ್ನೆಲೆಯಲ್ಲಿ, ಅವರು ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದರು. ಅವರನ್ನು ತಪಾಸಣೆ ಮಾಡಿದ ಅವರು, ಇವರ ಗರ್ಭಾಶಯದಲ್ಲಿ ಗಡ್ಡೆ ಇರುವುದನ್ನು ಪತ್ತೆ ಹಚ್ಚಿ, ಹೆಚ್ಚಿನ ಚಿಕಿತ್ಸೆಗಾಗಿ ಸ್ತ್ರೀರೋಗ ತಜ್ಞೆ ಡಾ. ಅಮೂಲ್ಯ ಕೆ. ಜಿ. ಅವರನ್ನು ಭೇಟಿಯಾಗಲು ಸೂಚಿಸಿದರು. ಪರೀಕ್ಷೆಯ ನಂತರ, ಒಂದು ದೊಡ್ಡ ಗರ್ಭಾಶಯದ ಗಡ್ಡೆ (ಫೈಬ್ರಾಯ್ಡ್) ಕಂಡು ಬಂದಿದ್ದು, ಅದು ಸೊಂಟದ ಭಾಗವನ್ನೂ ಮೀರಿ ಬೆಳೆದಿರುವುದು ದೃಢಪಟ್ಟಿತು. ಈ ವೃದ್ಧಾಪ್ಯದಲ್ಲಿ ಇಂತಹ ಪ್ರಕರಣಗಳು ಅಪರೂಪವಾಗಿದ್ದು, ಚಿಕಿತ್ಸೆ ನೀಡುವುದು ವೈದ್ಯರಿಗೆ ದೊಡ್ಡ ಸವಾಲಾಗಿತ್ತು. ಅದಲ್ಲದೆ, ಇವರಿಗೆ ಈಗಾಗಲೇ ಹೃದಯ ಸಂಬಂಧಿ ಚಿಕಿತ್ಸೆ ಆಗಿದ್ದರಿಂದ ರಕ್ತ ತೆಳುವಾಗುವ ಮಾತ್ರೆಗಳನ್ನು ತೆಗೆದುಕೊಳ್ಳುತ್ತಿದ್ದರು. ವಯಸ್ಸಾದವರಲ್ಲಿ ದೇಹದ ಅಂಗಾಂಶಗಳು ತುಂಬಾ ಮೃದುವಾಗಿರುವುದರಿಂದ ಅಕ್ಕಪಕ್ಕದ ಪ್ರಮುಖ ಅಂಗಗಳಿಗೆ ಹಾನಿಯಾಗುವ ಸಾಧ್ಯತೆಗಳೂ ಇರುತ್ತವೆ. ಹೀಗಾಗಿ, ಶಸ್ತ್ರಚಿಕಿತ್ಸೆಗೆ ಮುನ್ನ, ಹೃದಯ, ಶ್ವಾಸಕೋಶ, ಮೂತ್ರಪಿಂಡ ಮತ್ತು ಅರಿವಳಿಕೆ ತಜ್ಞರು ರೋಗಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ತಂಡದ ಸಮನ್ವಯದೊಂದಿಗೆ ಸಂಪೂರ್ಣ ಸಿದ್ಧತೆಗಳನ್ನು ನಡೆಸಿದರು. ಅಂತಿಮವಾಗಿ, ಅತ್ಯಂತ ಎಚ್ಚರಿಕೆಯಿಂದ 'ಕಿಬ್ಬೊಟ್ಟೆಯ ಗರ್ಭಕೋಶ ತೆಗೆಯುವಿಕೆ' ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಿ ಗರ್ಭಾಶಯವನ್ನು ತೆಗೆದುಹಾಕಲಾಯಿತು.

ಶಸ್ತ್ರಚಿಕಿತ್ಸೆಯ ಸಮಯದಲ್ಲಿ ರಕ್ತಸ್ರಾವವಾಗದಂತೆ ಮತ್ತು ಅಕ್ಕಪಕ್ಕದ ಅಂಗಗಳಿಗೆ ತೊಂದರೆಯಾಗದಂತೆ ವೈದ್ಯರು ಎಚ್ಚರಿಕೆ ವಹಿಸಿದ್ದು, ಶಸ್ತ್ರಚಿಕಿತ್ಸೆಯ ನಂತರ ಮಹಿಳೆ ವೇಗವಾಗಿ ಚೇತರಿಸಿಕೊಂಡಿದ್ದು, ಅವರಿಗೆ ಸೂಕ್ತ ಆರೈಕೆ ಮತ್ತು ಪೋಷಣೆ ನೀಡಲಾಯಿತು. ಕೇವಲ ಮೂರೇ ದಿನಗಳಲ್ಲಿ ಅವರು ಗುಣಮುಖರಾಗಿ ಆಸ್ಪತ್ರೆಯಿಂದ ಮನೆಗೆ ತೆರಳಲಿದ್ದಾರೆ.

ಆಸ್ಪತ್ರೆಯ ನಿರ್ದೇಶಕ ಪ್ರಮೋದ್ ಕುಂದರ್ ಮಾತನಾಡಿ, "ನಮ್ಮಲ್ಲಿರುವ ನುರಿತ ವೈದ್ಯರು ಮತ್ತು ಆಧುನಿಕ ಸೌಲಭ್ಯಗಳಿಂದ ಇಂತಹ ಸಂಕೀರ್ಣ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಮತ್ತು ರೋಗಿಗಳಿಗೆ ಉತ್ತಮ ಸೇವೆ ನೀಡಲು ಸಾಧ್ಯವಾಗುತ್ತಿದೆ,"

### ಕುಟುಂಬಸ್ಥರಿಂದ ಸಂತಸ

"ನಮ್ಮ ತಾಯಿಯ ವಯಸ್ಸಿನ ಕಾರಣ ನಮಗೆ ಭಯವಿತ್ತು. ಆದರೆ, ವೈದ್ಯರು ನಮಗೆ ಧೈರ್ಯ ತುಂಬಿ, ಪ್ರತಿಯೊಂದು ಹಂತದಲ್ಲೂ ಮಾಹಿತಿ ನೀಡಿದರು. ಅವರ ಕಾಳಜಿಯಿಂದಾಗಿ ಅಮ್ಮ ಈಗ ಚೇತರಿಸಿಕೊಂಡು ಮತ್ತೆ ತಮ್ಮ ದೈನಂದಿನ ಕೆಲಸಗಳಲ್ಲಿ ತೊಡಗಿಸಿಕೊಂಡಿರುವುದನ್ನು ನೋಡಿ ನಮಗೆ ಸಂತೋಷವಾಗಿದೆ," ಎಂದು ಕುಟುಂಬಸ್ಥರು ವೈದ್ಯರಿಗೆ ಕೃತಜ್ಞತೆ ಸಲ್ಲಿಸಿದರು.

# ಬೀದಿ ನಾಯಿಗಳ ಬಗ್ಗೆ ಎಚ್ಚರ ವಹಿಸಿ

ಗುಂಡ್ಲುಪೇಟೆ: ಬೀದಿ ನಾಯಿಗಳ ಬಗ್ಗೆ ಎಚ್ಚರ ವಹಿಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಶರವಣ ವಿದ್ಯಾರ್ಥಿಗಳಿಗೆ ತಿಳಿಸಿದರು.

ಪಟ್ಟಣದ ಕ್ರೈಸ್ತ ಪಬ್ಲಿಕ್ ಶಾಲೆಯಲ್ಲಿ ಪುರಸಭೆ ವತಿಯಿಂದ ಹಮ್ಮಿಕೊಂಡಿದ್ದ ನಾಯಿ ಕಡಿತದ ಬಗ್ಗೆ ಜಾಗೃತಿ ಮತ್ತು ಸುರಕ್ಷಿತ ಕ್ರಮಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಸ್ತುತ ಚಿಕ್ಕ ಮಕ್ಕಳು ಮತ್ತು ಹಿರಿಯ ನಾಗರಿಕರಿಗೆ ನಾಯಿ ಕಡಿತ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ನಾಯಿ ಕಡಿತದ ನಂತರ ರೇಬೀಸ್ ಚುಚ್ಚು ಮದ್ದು ಹಾಕಿಸಬೇಕೆಂದು ಮುಂಜಾಗ್ರತಾ ಕ್ರಮ ವಹಿಸುವಂತೆ ತಿಳಿಸಿದರು. ನ್ಯಾಯಾಲಯದ ಆದೇಶದಂತೆ ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ಶಿಕ್ಷಣ ಸಂಸ್ಥೆಗಳ ಒಳಗೆ ನಾಯಿಗಳು ಬರದಂತೆ ಕ್ರಮ ವಹಿಸಿ, ಆವರಣದ ಸುತ್ತುಗೋಡೆ ನಿರ್ಮಾಣ ಮಾಡಬೇಕು. ಜೊತೆಗೆ ಬೀದಿ ನಾಯಿಗಳು ಹೊರಗಡೆಯಿಂದ ಮನೆ



ಒಳಗಡೆ ಬರೆದಂತೆ ನಿಗಾ ವಹಿಸಬೇಕು. ಆಯಾಯ ಸಂಸ್ಥೆ ಆವರಣದಲ್ಲಿ ಒಬ್ಬ ವ್ಯಕ್ತಿಯನ್ನು ನೋಡಲ್ ಅಧಿಕಾರಿಯಾಗಿ ನೇಮಿಸಬೇಕು. ಮತ್ತು ರಾಷ್ಟ್ರೀಯ ಹೆದ್ದಾರಿ ವಿಭಾಗದ ಉನ್ನತಮಟ್ಟದ ಅಧಿಕಾರಿಗಳು ರಸ್ತೆಯಲ್ಲಿ ಸತ್ತು ಬಿದ್ದಿರುವ ನಾಯಿಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು ಎಂದರು.

ಈ ಸಂದರ್ಭದಲ್ಲಿಶಾಲೆಯ ಪ್ರಾಂಶುಪಾಲರಾದ ಫಾದರ್ ರಿಜೀಶ್ ಪುತಿಯಪರಂಬಿಲ್ ಪುರಸಭೆ ಪರಿಸರ ಅಭಿಯಂತರ ಮಹೇಶ್, ಆರೋಗ್ಯಾಧಿಕಾರಿ ಪರಮೇಶ್ವರಪ್ಪ ಸೇರಿದಂತೆ ಶಾಲಾ ಮಕ್ಕಳು ಶಿಕ್ಷಕರು ಹಾಜರಿದ್ದರು.

# ಇಂದು ಶ್ರದ್ಧಾಂಜಲಿ ಸಭೆ

ಕೆ.ಆರ್.ನಗರ. ನಂ. 03:– 35 ವರ್ಷಗಳಿಗೂ ಹೆಚ್ಚು ಪತ್ರಿಕಾ ರಂಗದಲ್ಲಿ ಸಾರ್ವಜನಿಕ ರಂಗದಲ್ಲಿ ಸೇವೆ ಸಲ್ಲಿಸಿ ನಿಧನ ಹೊಂದಿದ ಹಿರಿಯ ಪತ್ರಕರ್ತ ಕೆ ಟಿ ರಮೇಶರವರ ಶ್ರದ್ಧಾಂಜಲಿ ಸಭೆಯನ್ನು ದಿನಾಂಕ 5.12.2025 ಶುಕ್ರವಾರ ಸಾಯಂಕಾಲ ನಾಲ್ಕು ಗಂಟೆಗೆ ಕೃಷ್ಣಮಂದಿರದಲ್ಲಿ ನಡೆಸಲಾಗುವುದು ಎಂದು ಹಿರಿಯ ಪತ್ರಕರ್ತ ಕೆ ಟಿ ರಮೇಶ್ ಸ್ನೇಹ ಬಳಗದ ಅಧ್ಯಕ್ಷ ಹೆಬ್ಬಾಳ್ ಶಿವಣ್ಣ ತಿಳಿಸಿದರು.



ಹೆಬ್ಬಾಳ ಶಿವಣ್ಣ ಪತ್ರಿಕಾ ಹೇಳಿಕೆಯನ್ನು ನೀಡಿ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ವರ್ತಕರ ಸಂಘದ ಅಧ್ಯಕ್ಷರಾಗಿ ರೋಟರಿ ಸಂಸ್ಥೆಯ ಅಧ್ಯಕ್ಷರಾಗಿ ಶ್ರೀರಾಮ ವಿನಾಯಕ ಸಂಘದ ಸಂಸ್ಥಾಪಕ ಅಧ್ಯಕ್ಷರಾಗಿ ಪಟ್ಟಣದ ಜನಸಾಮಾನ್ಯರ ಮನದಲ್ಲಿ ಉಳಿಯುವಂತಹ ನಾಯಕರಾಗಿ ತಮ್ಮದೇ ಆದ ವೈವಿಧ್ಯ ರೀತಿಯಲ್ಲಿ ಪತ್ರಿಕೆಯಲ್ಲಿ ಬರೆಯುವ ಮೂಲಕ ಹೆಸರುವಾಸಿಯಾಗಿದ್ದ ಕೆ ಟಿ ರಮೇಶ್ ಅಣ್ಣನವರ ಶ್ರದ್ಧಾಂಜಲಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ತಿಳಿಸಿದರು.


ಈ ಶ್ರದ್ಧಾಂಜಲಿ ಸಭೆಯ ಅಧ್ಯಕ್ಷತೆಯನ್ನು ಮಾಜಿ ಸಚಿವ ಸಾ ರಾ ಮಹೇಶ್ ವಹಿಸಲಿದ್ದು ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್ ವಿಶ್ವನಾಥ್ ರಾಜ್ಯ ವಸ್ತು ಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್ ಗೌಡ ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಎಸ್ ಟಿ ರವಿಕುಮಾರ್ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಿಮ್ ಡಿಮಾಶಂಕರ್ ಸೇರಿದಂತೆ ಜಿಲ್ಲಾ ಪಂಚಾಯತ್ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರುಗಳು ಮಾಜಿ ಸದಸ್ಯರು ವಿವಿಧ ಸಂಘ ಸಂಸ್ಥೆಗಳ ಹಾಲಿ ಮಾಜಿ ಅಧ್ಯಕ್ಷರು ಪದಾಧಿಕಾರಿಗಳು ವರ್ತಕರ ಸಂಘದ ಅಧ್ಯಕ್ಷರು ರೋಟರಿ ಸಂಸ್ಥೆಯ ಅಧ್ಯಕ್ಷರು ತಾಲೋಕ್ ಪತ್ರಕರ್ತರ ಸಂಘದ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಈ ಶ್ರದ್ಧಾಂಜಲಿ ಸಭೆಗೆ ಪಟ್ಟಣದ ನಾಗರಿಕರು ಪತ್ರಕರ್ತರು ವರ್ತಕರು ರೋಟರಿ ಸಂಸ್ಥೆಯ ಸದಸ್ಯರು ಪದಾಧಿಕಾರಿಗಳು ವಿವಿಧ ರಾಜಕೀಯ ಮುಖಂಡರು ಮತ್ತು ಕೆ ಟಿ ರಮೇಶ್ ಅವರ ಅಭಿಮಾನಿಗಳು ಸ್ನೇಹಿತರು ಸಮಯಕ್ಕೆ ಸರಿಯಾಗಿ ಹಾಜರಾಗಿ ಕಾರ್ಯಕ್ರಮಕ್ಕೆ ಹಾಜರಾಗುವ ಮೂಲಕ ಮೃತರ ಶ್ರದ್ಧಾಂಜಲಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಹಿರಿಯ ಪತ್ರಕರ್ತ ಕೆ ಟಿ ರಮೇಶ್ ಸ್ನೇಹ ಬಳಗದ ಅಧ್ಯಕ್ಷ ಹೆಬ್ಬಾಳ್ ಶಿವಣ್ಣ ಪತ್ರಿಕಾ ಹೇಳಿಕೆಯಲ್ಲಿ ಮನವಿ ಮಾಡಿದ್ದಾರೆ.

# ದಲಿತರನ್ನೇ ಸಿಎಂ ಸ್ಥಾನದಲ್ಲಿ ಕೂರಿಸಿ

ಮೈಸೂರು: ರಾಜ್ಯದಲ್ಲಿನ ರಾಜಕಾರಣ ನಗೆಪಾಟಲಿಗೀಡಾಗುಂತಿದೆ. ಈಗಿನ ಸಿಎಂ ಹಿಂದುಳಿದವರ ನೇತಾರ ಎನಿಸಿಕೊಂಡಿದ್ದಾರೆ. ಅವರ ನಂತರ ಸಿಎಂ ಸ್ಥಾನಕ್ಕೆ ಯಾರು ಎಂಬ ಬಗ್ಗೆ ಕಿತ್ತಾಟ ನಡೆದಿದೆ. ಒಂದು ವೇಳೆ ಅವರು ಕೆಳಗಿಳಿದಲ್ಲಿ ದಲಿತರನ್ನೇ ಸಿಎಂ ಸ್ಥಾನಕ್ಕೆ ಕೂರಿಸಬೇಕು ಎಂದು ಕರ್ನಾಟಕ ದಲಿತ ಚಳವಳಿ ನವನಿರ್ಮಾಣ ವೇದಿಕೆ ಅಧ್ಯಕ್ಷ ಹರಿಹರ ಆನಂದಸ್ವಾಮಿ ಆಗ್ರಹಿಸಿದರು.




ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ದೇಶದ ಒಟ್ಟಾರ ಜನಸಂಖ್ಯೆಯಲ್ಲಿ ಅತಿ ಹೆಚ್ಚಿನವರಾಗಿದ್ದರೂ ದಲಿತರಿಗೆ ಅಧಿಕಾರ ವೇಳೆ ವಂಚನೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಡಾ.ಜಿ. ಪರಮೇಶ್ವರ್ ಅವರು ಎಂದೋ ಸಿಎಂ ಆಗಬೇಕಾಗಿತ್ತು. ಅದನ್ನು ತಪ್ಪಿಸಲಾಗಿದೆ. ಓಟಿಗಾಗಿ ಮಾತ್ರ ದಲಿತರನ್ನು ಬಳಸಿಕೊಳ್ಳಲಾಗುತ್ತಿದೆ. ಆದರೆ ಅಧಿಕಾರದ ವಿಷಯ ಬಂದಾಗ ಅನ್ಯಾಯ ಮಾಡಲಾಗುತ್ತಿದೆ. ಹೀಗಾಗಿ ದಲಿತರು, ದಲಿತ ಸಂಘಟನೆಗಳು ಒಡಕು ಮರೆತು ರಾಜ್ಯದಲ್ಲಿ ಡಾ.ಜಿ. ಪರಮೇಶ್ವರ್, ಮುನಿಯಪ್ಪ ಅಥವಾ ಡಾ.ಎಚ್.ಸಿ. ಮಹದೇವಪ್ಪ ಅವರನ್ನು ಸಿಎಂ ಆಗಿಸುವ ನಿಟ್ಟಿನಲ್ಲಿ ಸಂಘಟಿತ ಹೋರಾಟ ಮಾಡಬೇಕೆಂದು ಮನವಿ ಮಾಡಿದರು. ಬಹುಸಂಖ್ಯಾತ ದಲಿತರಿಗೆ ಇಲ್ಲಿಯವರೆಗೂ ಮುಂಚೂಣಿ ನಾಯಕತ್ವ ದಕ್ಕದಿರುವುದು ದುರಂತವೇ ಸರಿ. ಎಲ್ಲ ರಾಜಕೀಯ ಪಕ್ಷಗಳು ಶೋಷಿತ ಸಮುದಾಯಗಳನ್ನು ತಮ್ಮ ಬಳಕೆ ವಸ್ತುಗಳನ್ನಾಗಿ ಮಾಡಿಕೊಂಡು ಅಧಿಕಾರದ ಲಾಲಸೆ ಯಶಸ್ವಿಗೊಳಿಸಿಕೊಳ್ಳುತ್ತಿವೆ. ಹೀಗಾಗಿ ದಲಿತರ ಈ ಮರ್ಮ ಅರಿಯಬೇಕೆಂದು ಕೋರಿದರು. ಸೋಮಯ್ಯ ಮಲೆಯೂರು, ದೇವಗಳ್ಳಿ ಸೋಮಶೇಖರ್, ಬದನವಾಳು ಬಸವಣ್ಣ, ಸತೀಶ್ ಪಡುವಾರಹಳ್ಳಿ ಇದ್ದರು.



ಸಾಲಿಗ್ರಾಮ: ತಾಲೂಕಿನ ರಾಂಪುರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಪತ್ರಕರ್ತ ಕೆ.ಟಿ.ಮೋಹನ್ ಕುಮಾರ್ ಅವರನ್ನು ಅಭಿನಂದಿಸಲಾಯಿತು. ಶಿಕ್ಷಣ ಸಂಯೋಜಕಿ ಕುಸುಮ, ಶಾಲೆಯ ಪ್ರಾಂಶುಪಾಲ ಎನ್.ಮರಯ್ಯ, ಶಿಕ್ಷಕರಾದ ಹೆಚ್.ಆರ್.ಮಧು, ಹರೀಶ್ ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಅಂತರ್ ಇಲಾಖೆ ಗಳ ಸಮನ್ವಯ ಸಮಿತಿ ಸಭೆ

ಗುಂಡ್ಲುಪೇಟೆ: ತಾಲ್ಲೂಕು ತಹಶೀಲ್ದಾರ್ ತನ್ಮಯ್ ಎಂ ಎಸ್ ರವರ ಅಧ್ಯಕ್ಷತೆಯಲ್ಲಿ ನಡೆದ ಅಂತರ್ ಇಲಾಖೆ ಗಳ ಸಮನ್ವಯ ಸಮಿತಿ ಸಭೆ ನಡೆಯಿತು

ಸಭೆಯನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಆರೋಗ್ಯಾಧಿಕಾರಿಗಳಾದ ಡಾ.ಅಲಿಂ ಪಾಷಾ ಮಾತನಾಡಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದಡಿ ಗುಂಡ್ಲುಪೇಟೆ ತಾಲ್ಲೂಕಿನಲ್ಲಿ 34 ಗ್ರಾಮ ಪಂಚಾಯಿತಿಗಳ ಪೈಕಿ 19 ಗ್ರಾಮ ಪಂಚಾಯಿತಿಗಳನ್ನು ಕಳೆದ ಸಾಲಿನಲ್ಲಿ ಕ್ಷಯ ಮುಕ್ತ ಗ್ರಾಮವೆಂದು ಘೋಷಿಸಿದ್ದು, ಮುಂಬರುವ ದಿನಗಳಲ್ಲಿ ಕ್ಷಯ ಮುಕ್ತ ಗುಂಡ್ಲುಪೇಟೆ ತಾಲ್ಲೂಕನ್ನಾಗಿ ಮಾಡುವ ಗುರಿಯನ್ನು ಹೊಂದಿರುವುದಾಗಿ ತಿಳಿಸಿದರು.

ಎರಡು ವಾರಕ್ಕಿಂತ ಹೆಚ್ಚು ಕೆಮ್ಮು, ಎರಡು ವಾರಕ್ಕಿಂತ ಹೆಚ್ಚು ಜ್ವರ, ತೂಕ ಕಡಿಮೆಯಾಗುವುದು, ಹಸಿವಾಗದೆ ಇರುವುದು, ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು, ಕ್ಷಯ ರೋಗದ ಲಕ್ಷಣಗಳಾಗಿದ್ದು ಕಫ ಪರೀಕ್ಷೆ ಮಾಡುವುದರ ಮೂಲಕ ಕ್ಷಯರೋಗವನ್ನು ಪತ್ತೆಹಚ್ಚಲಾಗುವುದು. ಸರ್ಕಾರಿ ಆಸ್ಪತ್ರೆಗಳಲ್ಲಿ 6 ತಿಂಗಳ ಉಚಿತವಾದ ಚಿಕಿತ್ಸೆಯನ್ನು ಕ್ಷಯ ರೋಗಿಗೆ ನೀಡಲಾಗುವುದು ಎಂದು ತಿಳಿಸಿದರು.

ಮುಂದುವರೆದು ಕಳೆದ ತಿಂಗಳು 8 ಗ್ರಾಮದಲ್ಲಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿ 952 ಜನರಿಗೆ ರಕ್ತದೊತ್ತಡ ,ಊಃ, ಸಕ್ಕರೆ ಕಾಯಿಲೆ, ಕ್ಷಯ ರೋಗ ತಪಾಸಣೆಗಾಗಿ ಕಫ ಪರೀಕ್ಷೆ ಹಾಗೂ ವಿಶೇಷವಾಗಿ ಮಾನ್ಯ ಜಿಲ್ಲಾಧಿಕಾರಿಗಳು , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ನೀಡಿರುವ (ಪೋರ್ಟಬಲ್ ಎಕ್ಸ್ ರೇ ಡಿವೈಸ್ ) ಇದರಲ್ಲಿ 248 ಫಿ–ಖಂಜ ಗಳನ್ನು ಮಾಡುವುದರ ಮೂಲಕ ಆರೋಗ್ಯ ತಪಾಸಣೆ ಮಾಡಿರುವುದಾಗಿ ತಿಳಿಸಿದರು .




ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಟಿ ಆರ್ ಸ್ವಾಮಿ. ಸಿ ಡಿ ಪಿ ಓ ಹೇಮಾವತಿ ಪಶುಸಂಗೋಪನ ಸಹಾಯಕ ನಿರ್ದೇಶಕರಾದ ಮಾದೇಶ್, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು

# ಪುನರ್ವಸತಿ ಕೇಂದ್ರ ಉದ್ಘಾಟನೆ



ಚಾಮರಾಜನಗರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಯಡಪುರದ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಬೋಧನಾ ಆಸ್ಪತ್ರೆಯಲ್ಲಿ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರವನ್ನು (ಡಿಡಿಆರ್ಸಿ) ಎಂ.ಎಸ್.ಐ.ಎಲ್. ಅಧ್ಯಕ್ಷ ಹಾಗೂ ಶಾಸಕ ಸಿ. ಪುಟ್ಟರಂಗಶೆಟ್ಟಿ ಉದ್ಘಾಟಿಸಿದರು.

ಪುನರ್ವಸತಿ ಕೇಂದ್ರದಲ್ಲಿ ವಿಶೇಷಚೇತನರಿಗೆ ಕೃತಕ ಅಂಗಾಂಗಗಳ ಜೋಡಣೆ, ದುರಸ್ತಿ, ಯುಡಿಐಡಿ ಕಾರ್ಡ್ ವಿತರಣೆ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ.

ಆಸ್ಪತ್ರೆಯ ಡೀನ್ ಮತ್ತು ನಿರ್ದೇಶಕ ಡಾ. ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಹೆಚ್.ಆರ್. ಸುರೇಶ್, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಡಾ. ಕೆ.ಎನ್. ಮಂಜುನಾಥ, ಜಿಲ್ಲಾ ಸರ್ಜನ್ ಡಾ. ಚಿನ್ನಬೋವಿ, ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಮೇಶ್, ರೂಪೇಶ್, ಕೃಷ್ಣಮೂರ್ತಿ, ಮಹದೇವಸ್ವಾಮಿ, ಇನ್ನಿತರರು ಹಾಜರಿದ್ದರು.

# ಊಟಿ ಕ್ಯಾರೋಟ್ ಚಿತ್ರ ಶೀಘ್ರ ತೆರೆಗೆ

ಮೈಸೂರು: ತಾವೇ ನಿರ್ದೇಶಿಸಿ ಎರಡು ಅಪರೂಪದ ಇಲಿಗಳೊಡನೆ ನಟಿಸಿರುವ ಊಟಿ ಕ್ಯಾರೋಟ್ ಚಲನಚಿತ್ರ ಶೀಘ್ರದಲ್ಲೇ ಬಿಡುಗಡೆ ಕಾಣಲಿದೆ ಎಂದು ನಿರ್ಮಾಪಕರಾದ ಹೊನ್ನು ಶ್ರೀ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಊಟಿಯಿಂದ ಕ್ಯಾರೋಟ್ ಸಾಗಣೆ ವಾಹನದಲ್ಲಿ ತಪ್ಪಿಸಿಕೊಂಡು ಮೈಸೂರಿಗೆ ಬಂದ ಎರಡು ಅಪರೂಪದ ಇಲಿಗಳ ಕಥೆ ಇದು ಆಧರಿಸಿದೆ. ಸಂಗೀತ ನಿರ್ದೇಶಕ ವಿಲ್ಸ್ಟನ್ ಗೊನ್ಸಾಲ್ವಿಸ್ ಅವರದ್ದಾಗಿದೆ. ಜೇನುಗವಿ ಅವಧೂತ ನಂಜುಂಡಸ್ವಾಮಿ ಆಶ್ರಯದಲ್ಲಿ ಚಿತ್ರದ ಗೀತೆ ಬಿಡುಗಡೆಗೊಳಿಸಲಾಗಿದೆ. ಗುರುಗಳಾದ ಶಾಮ್ ಬಾಬಾ ಹಾಡುಗಳನು ಹಾಡಿದ್ದಾರೆಂದರು. ಚಿತ್ರ ತಂಡದ ವಿಲ್ಸ್ಟನ್ ಗೊನ್ಸಾಲ್ವಿಸ್, ಕಿರಣ್ ದೇವು, ಗೋಲ್ಡನ್ ಸುರೇಶ್ ಇದ್ದರು.




ಬಿಆರ್‌ಸಿ ರಾಜೀವ ಹೇಳಿಕೆ । ಮಂಗಲ ಕ್ಲಸ್ಟರ್ ಮಟ್ಟದ ಪ್ರತಿಭಾ– ಕಲೋತ್ಸವ ಕಾರ್ಯಕ್ರಮ

# ಮಕ್ಕಳ ಪ್ರತಿಭೆ ಗುರುತಿಸುವುದು ಶಿಕ್ಷಕರ ಬಹುದೊಡ್ಡ ಜವಾಬ್ದಾರಿ

ಚಾಮರಾಜನಗರ, ಮಕ್ಕಳಲ್ಲಿ ಅಡಗಿರುವ ಸೂಪ್ತ ಪ್ರತಿಭೆ ಗುರುತಿಸಲು ಪ್ರತಿಭಾ ಪೂರಕವಾಗಿದ್ದು, ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವುದು ಶಿಕ್ಷಕರ ಬಹುದೊಡ್ಡ ಜವಾಬ್ದಾರಿಯಾಗಿದೆ ಎಂದು ಬಿಆರ್‌ಸಿ ರಾಜೀವ್ ಹೇಳಿದರು.

ತಾಲೂಕಿನ ಮಂಗಲ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾ.ಪಂ, ಜಿ.ಪಂ, ಶಾಲಾ ಶಿಕ್ಷಣ ಇಲಾಖೆ, ಸಮಗ್ರ ಶಿಕ್ಷಣ ಕರ್ನಾಟಕ ಸಮೂಹ ಸಂಪನ್ಮೂಲ ಕೇಂದ್ರ ಮಂಗಲ ವತಿ ಯಿಂದ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ– ಕಲೋ ತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ನಾವು ಓದುವ ವೇಳೆಯಲ್ಲಿ ಗುರಿನೇ ಇರಲಿಲ್ಲ. ನಮ್ಮ ಶಿಕ್ಷಕರು ಚೆನ್ನಾಗಿ ಓದುತ್ತೀಯಾ. ಎಂದು ಬೆನ್ನು ತಟ್ಟುವಿಕೆ ಅದು ನಮ್ಮನ್ನು ಈ ಸ್ಥಾನಕ್ಕೆ ತಂದು ನಿಲ್ಲಿಸಿದೆ. ಮಕ್ಕಳಲ್ಲಿರುವ ಪ್ರತಿಭೆ ಗುರುತಿಸುವುದು ಬಹಳಮುಖ್ಯ ಎನ್ನುವುದಕ್ಕೆ ನಾನೇ ಒಂದು ನಿದರ್ಶನ. ಅಂದು ಶಾಲೆಯಲ್ಲಿ ನಮ್ಮನ್ನು ಶಿಕ್ಷಕರು ಬೆನ್ನು ತಟ್ಟದಿದ್ದರೆ ಗೌರವ, ಹುದ್ದೆಯನ್ನು.. ಅಲಂಕರಿಸಲಾಗುತ್ತಿರಲಿಲ್ಲ.ಆಗಾಗಿ ಮಕ್ಕಳಲ್ಲಿರುವ ಪ್ರತಿಭೆ ಗುರುತಿಸುವುದು ಬಹಳ ದೊಡ್ಡ ಅಂಶವಾಗಿದೆ ಎಂದರು.



ನಾವು ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಣ ಓದುತ್ತಿರುವ ಸಂದರ್ಭದಲ್ಲಿ ಇಂತಹ ಕಾರ್ಯಕ್ರಮಗಳು ಇರಲಿಲ್ಲ. ನಮಗೆ ವೇದಿಕೆಗಳಾಗಲಿ, ಯಾವುದೇ ಅವಕಾಶಗಳು ಇರಲಿಲ್ಲ ಆದರೆ ಓದುವುದು ನಮ್ಮ ಕೆಲಸ ಆಗಿತ್ತು. ವಿದ್ಯಾರ್ಥಿಗಳು ಓದುವುದನ್ನು ಮಾತ್ರ ಶಿಕ್ಷಕರು.. ಗುರುತಿಸುತ್ತಿದ್ದರು. ಆದರೆ ಇಂದು ಸರ್ಕಾರ, ಇಲಾಖೆ ಮನಗಂಡು ಮಕ್ಕಳಲ್ಲಿರುವ ಎಲ್ಲ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುತ್ತಿದೆ. ಆಗಾಗಿ ನಮ್ಮ ಶಿಕ್ಷಕರು ಪ್ರತಿಯೊಂದು ಕಲಿಕಾ ವೇದಿಕೆಯಲ್ಲಿ ಪ್ರತಿಭೆಯಾಗಿ ಗುರುತಿಸುವಲ್ಲಿ ಮಾರ್ಪಾಡು ಮಾಡಿಕೊಳ್ಳಬೇಕು. ಶಾಲೆಯಲ್ಲಿ ಕ್ರೀಡೋತ್ಸವ ನಡೆಯುತ್ತದೆ ಅಲ್ಲಿ ಮಕ್ಕಳ ಕ್ರೀಡಾಪ್ರತಿಭೆ ಗುರುತಿಸುವ ವೇದಿಕೆಯಾಗಿ ಮಾಡಿಕೊಳ್ಳಬೇಕು ಮಕ್ಕಳಲ್ಲಿ ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಶಿಕ್ಷಕರ ಬಹುದೊಡ್ಡ ಜವಾಬ್ದಾರಿಯಾಗಿದೆ ಎಂದರು. ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ನಾರಾಯಣಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಗ್ರಾ.ಪಂ. ಉಪಾಧ್ಯಕ್ಷೆ ಸುಮ, ಸದಸ್ಯ ಸುರೇಶ್, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಶಾಲಾಭಿವೃದ್ಧಿ ಸಮಿತಿ ಉಪಾಧ್ಯಕ್ಷೆ ಗಿರಿಜಾ, ಸದಸ್ಯರಾದ ಜ್ಯೋತಿ, ಸುಮ, ವಾಣಿಶ್ರೀ, ಸುನಿತ, ಸಿಆರ್ ಪಿ.ಶಿವಮೂರ್ತಿ, ಬಿಆರ್‌ಪಿ ಸವಿತ, ಇಸಿಒ ರೇವಣ್ಣ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮನಿರ್ದೇಶನ ಸದಸ್ಯರಾದ ಎಂ.ಪುಟ್ಟಸ್ವಾಮಿ ನಂಜುಂಡಸ್ವಾಮಿ, ರಾಜು, ಶಾಲೆ ಮುಖ್ಯ ಶಿಕ್ಷಕ ರವಿಕುಮಾರ್ ಸ್ವಾಗತಿಸಿದರು. ಶಿಕ್ಷಕಿ ಲತಾಪುಟ್ಟಸ್ವಾಮಿ ನಿರೂಪಿಸಿದರು. ವಿವಿಧ ಶಾಲೆಯ ಶಿಕ್ಷಕರು, ಪೋಷಕರು, ಮಕ್ಕಳು ಭಾಗವಹಿಸಿದ್ದರು .

# ಡಿ.6ಕ್ಕೆ ಕೆರಿಯರ್ ಉತ್ಸವ್

ಮೈಸೂರು: ಕೆರಿಯರ್ ಉತ್ಸವ್ ಸಂಸ್ಥಾಪಕ ಶ್ರೀಪಾಲ್ ಜೈನ್ ನೇತೃತ್ವದಲ್ಲಿ ಡಿ.6 ರ ಬೆಳಗ್ಗೆ 9 ರಿಂದ ಸಂಜೆ 5 ರವರೆಗೆ ನಗರದ ವಿಜಯನಗರದಲ್ಲಿನ ಜಗನ್ನಾಥ್ ಕಲಾ, ಸಾಂಸ್ಕೃತಿಕ ಕೇಂದ್ರ ಸಭಾಂಗಣದಲ್ಲಿ 12 ಅಥವಾ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗಾಗಿ ಕೆರಿಯರ್ ಉತ್ಸವ್ ಆಯೋಜಿಸಲಾಗಿದೆ ಎಂದು ಮಾರುಕಟ್ಟೆ



ಸಮಾಲೋಚಕ ಚಂದನ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬೋರ್ಡ್ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸುವುದು ಹೇಗೆ, ವೃತ್ತಿ ನಿರ್ಧಾರ ಕೈಗೊಳ್ಳುವ ವೇಳೆ ಗಮನಿಸಬೇಕಾದ ವಿಷಯ, ತಮ್ಮ ಪರೀಕ್ಷೆಗಳ ಬಗ್ಗೆ ನಿಗದಿತ ಆಲೋಚನೆ, ನಿರ್ವಹಣಾ ತಂತ್ರ ಕುರಿತ ಸಲಹೆ, ಮಾಹಿತಿ ಇರಲಿವೆ. ಶಾಲಾ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಉಚಿತ ಪ್ರವೇಶವಿದೆ ಎಂದರು. ಇದೇ ವೇಳೆ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆಗೊಳಿಸಿದರು.

# ಬನ್ನಿಕುಪ್ಪೆ ಗ್ರಾಮದಲ್ಲಿ ಶ್ರದ್ಧಾ ಭಕ್ತಿಯ ದತ್ತ ಜಯಂತಿ

ರಾಮನಗರ: ತಾಲೂಕಿನ ಕೈಲಾಂಚ ಹೋಬಳಿ ಬನ್ನಿಕುಪ್ಪೆ ಗ್ರಾಮದಲ್ಲಿರುವ ಶ್ರೀ ಕ್ಷೇತ್ರ ದತ್ತಪೀಠದಲ್ಲಿ ಗುರುವಾರ ಶ್ರೀ ದತ್ತ ಜಯಂತಿ ಮಹೋತ್ಸವ 2025 ಅತ್ಯಂತ ಭಕ್ತಿ ಮತ್ತು ಶ್ರದ್ಧೆಯಿಂದ ಆಚರಿಸಲಾಯಿತು.

ರಾಮನಗರ, ಬೆಂಗಳೂರು, ಮಂಡ್ಯ, ಮೈಸೂರು, ಕೋಲಾರ, ತುಮಕೂರು ಮತ್ತಿತರ ಜಿಲ್ಲೆಗಳಿಂದ ನೂರಾರು ಭಕ್ತರು ದತ್ತ ಜಯಂತಿಯಲ್ಲಿ ಪಾಲ್ಗೊಂಡು ತಮ್ಮ ಭಕ್ತಿ ಸಮರ್ಪಿಸಿದರು.

ಗುರುವಾರ ಪ್ರಾತಃಕಾಲ 5 ಗಂಟೆಗೆ ಗಣಪತಿ ಪ್ರಾರ್ಥನೆ, ಕಾಕಡಾರತಿ, ನಿರ್ಮಾಲ್ಯ ವಿಸರ್ಜನೆ ನಂತರ ಅಭ್ಯಂಜನ ಸ್ನಾನದೊಂದಿಗೆ ದತ್ತ ಜಯಂತಿ ಆಚರಣೆ ಆರಂಭವಾಯಿತು. ಮಹನ್ಯಾಸಪೂರ್ವಕ ಶತರುದ್ರ ಅಭಿಷೇಕ, ಸಾರ್ವತ್ರಿಕ ಮಹಾ ಸಂಕಲ್ಪಗಳು ನಡೆದವು. ಶ್ರೀ ದತ್ತಾತ್ರೇಯ ಮೂರ್ತಿಗೆ ಬಗೆಬಗೆಯ ಹೂವಿನ ಅಲಂಕಾರ, ಆಭರಣಗಳಿಂದ ಅಲಂಕರಿಸಲಾಗಿತ್ತು. ಇಡೀ ದೇವಾಲಯ ಹೂಗಳು ಹಾಗೂ ವಿದ್ಯುತ್ ದೀಪಗಳಿಂದ ಸಿಂಗಾರಗೊಂಡಿತ್ತು.

ದೇವಾಲಯದ ಆವರಣದಲ್ಲಿ ಗಣಪತಿ ಹೋಮ, ದತ್ತಾತ್ರೇಯ ಹೋಮ, ರುದ್ರ ಹೋಮ, ದೇವಿ ಹೋಮ, ಸುಬ್ರಹ್ಮಣ್ಯ ಹೋಮ, ಆಂಜನೇಯ ಹೋಮ, ನವಗ್ರಹ ಹೋಮ ನಿರ್ವಿಘ್ನವಾಗಿ ನೆರವೇರಿತು. ಋತ್ವಿಕರ ವೇದ ಮಂತ್ರ ಘೋಷ ನೆರೆದಿದ್ದವರಲ್ಲಿ ಭಕ್ತಿ ಭಾವವನ್ನು ಇಮ್ಮಡಿಗೊಳಿಸಿತು.

ಒಂದೆಡೆ ಹೋಮ ನಡೆಯುತ್ತಿದ್ದರೆ ಮತ್ತೊಂತೆಡೆ ಔದಂಬರ ಪೂಜೆ, ಗೋಪೂಜೆ, ದತ್ತ ಪಾದುಕ ವಿಶೇಷ ಪೂಜೆ, ಕನ್ನಿಕ ಪೂಜೆ, ಸುಮಂಗಲಿ ಪೂಜೆ, ದಂಪತಿ ಪೂಜೆ ನೆರವೇರಿತು. ತದ ನಂತರ ಶ್ರೀ ದತ್ತಾತ್ರೇಯ ಸ್ವಾಮಿಯ ಮೆರವಣಿಗೆ ನಡೆಯಿತು. ಮಧ್ಯಾಹ್ನದ ವೇಳೆಗೆ ಪೂರ್ಣಾಹುತಿ ನಂತರ ಮಹಾ ನೈವೇದ್ಯ ಮತ್ತು ಮಹಾ ಮಂಗಳಾರತಿ, ಮಹಾಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆದವು.

**ದತ್ತ ಸಂಗೀತೋತ್ಸವ**

**ದೇವಾಲಯದಲ್ಲಿ ದತ್ತ ಜಯಂತಿಯ ಧಾರ್ಮಿಕ ವಿಧಿ ವಿಧಾನಗಳ ಜೊತೆಗೆ ದೇವಾಲಯದ ಆವರಣದಲ್ಲಿ ನಡೆದ ದತ್ತ ಸಂಗೀತೋತ್ಸವ ನೆರೆದಿದ್ದ ಭಕ್ತರನ್ನು ಭಕ್ತಿ ಭಾವದಲ್ಲಿ ತೇಲಿಸಿತು. ದತ್ತ ಔಪಾಸಕ ಅನಂತ ಸತ್ಯಂ ನೇತೃತ್ವದಲ್ಲಿ ದತ್ತ ಜಯಂತ್ಯೋತ್ಸವ ಆಚರಣೆಯಾಯಿತು. ಪ್ರಧಾನ ಆಗಮಿಕರಾಗಿ ಮಿಗಿನಕಲ್ಲು ವಿಶ್ವೇಶ್ವರ ಭಟ್ ಮತ್ತು ತಂಡ ಧಾರ್ಮಿಕ ವಿಧಿ ವಿಧಾನಗಳನ್ನು ನಡೆಸಿಕೊಟ್ಟರು. ಬಿ.ವಿ.ಗುರುಮೂರ್ತಪ್ಪ ಅವರ ಕುಟುಂಬಸ್ಥರು ಜಯಂತಿ ಆಚರಣೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು.**



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಕನ್ನಡ ಒಳ್ಳೆಯ ಸ್ಥಿತಿಯಲ್ಲಿರುವುದು ಚಾ.ನಗರದಲ್ಲಿ ಮಾತ್ರ

ಚಾಮರಾಜನಗರ, ರಾಜ್ಯದಲ್ಲಿ 19 ಗಡಿಜಿಲ್ಲೆಗಳಿದ್ದು, ಅದರಲ್ಲಿ ಕನ್ನಡ ಒಳ್ಳೆಯ ಸ್ಥಿತಿಯಲ್ಲಿರುವುದು ಚಾಮರಾಜನಗರ ಜಿಲ್ಲೆಯಲ್ಲಿ ಮಾತ್ರ ಎಂದು

ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ. ರಂ.ಶ್ರೀವಿವಾಸಗೌಡ ಹೇಳಿದರು. ಡಾ. ಎಸ್.ಪಿ. ಬಾಲಸುಬ್ರಹ್ಮಣ್ಯಂ ಗಾನ ಗಾಂಧರ್ವ ಸಾಂಸ್ಕೃತಿಕ ಕಲಾವೇದಿಕೆ, ರೋಟರಿ ಸಂಸ್ಥೆಯಿಂದ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು. ಗಡಿ ಜಿಲ್ಲೆಯಲ್ಲಿ ಕನ್ನಡ ಪರ ಹೋರಾಟ ಜೀವಂತವಾಗಿರುವುದು ಕಾರಣ ಎಂದು ತಿಳಿಸಿದರು ಅಲ್ಲದೇ ಮಹಾಜನ ವರದಿ ಪ್ರಕಾರ ತಾಳವಾಡಿ ಕರ್ನಾಟಕಕ್ಕೆ ಸೇರಬೇಕಿತ್ತು. ಅದಕ್ಕಾಗಿ ವಾಟಾಳ್ ನಾಗರಾಜ್ ಅವರು ಹೋರಾಟ ಮಾಡಿದ್ದರು. ಅದರ ಹೋರಾಟ ಫಲವಾಗಿ ಈ ಭಾಗದಲ್ಲಿ ಕನ್ನಡ ಗಟ್ಟಿಯಾಗಿದೆ' ಎಂದರು.

ಕಾರ್ಯಕ್ರಮವನ್ನು ರೋಟರಿ ಸಂಸ್ಥೆ ಅಧ್ಯಕ್ಷ ಕಾಗಲವಾಡಿಚಂದ್ರು ಉದ್ಘಾಟಿಸಿ ಮಾತನಾಡಿ, ಕನ್ನಡ ರಾಜ್ಯೋತ್ಸವ ನಿತ್ಯೋತ್ಸವ ಆಗಬೇಕು, ಗಡಿಜಿಲ್ಲೆಯಲ್ಲಿ ಕನ್ನಡ ಗಟ್ಟಿಯಾಗಿರಲು ಕನ್ನಡ



ಚಳವಳಿಗಾರ ವಾಟಾಳ್ ನಾಗರಾಜ್, ಕನ್ನಡಪರ ಹೋರಾಟಗಾರರು ಕಾರಣ ಎಂದರು.ಅಂತರಾಷ್ಟ್ರೀಯ ಜಾನಪದ ಗಾಯಕ ಸಿ.ಎಂ.ನರಸಿಂಹ ಮೂರ್ತಿ ಮಾತನಾಡಿ, ನ.1 ರಂದು ರಾಜ್ಯಾದ್ಯಂತ ಸಂಭ್ರಮ, ಸಡಗರದಿಂದ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಗುತ್ತಿದ್ದು. ಗಡಿಜಿಲ್ಲೆಯಲ್ಲೂ ಅತ್ಯಂತ ಸಂಭ್ರಮದಿಂದ ಆಚರಣೆ ಮಾಡಲಾಗುತ್ತಿದೆ. ನವೆಂಬರ್ ಮಾಸದಲ್ಲಿ ನಿರಂತರವಾಗಿ ಕನ್ನಡ ರಾಜ್ಯೋತ್ಸವ ಹಬ್ಬ ಮಾದರಿ ಆಚರಣೆ ಮಾಡಲಾಗುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಉದ್ಯಮಿ ಶ್ರೀನಿಧಿಕುದರ್ ಮಾತನಾಡಿ, ಕನ್ನಡ ರಾಜ್ಯೋತ್ಸವ ಕನ್ನಡಿಗರ ಆಸ್ಮಿತೆಯ ಹಬ್ಬವಾಗಿದ್ದು, ಕನ್ನಡಿಗರ ಅಸ್ಮಿತೆಯ ಸಂಕೇತವಾಗಿದೆ.ಕನ್ನಡ ರಾಜ್ಯೋತ್ಸವ ಕರ್ನಾಟಕದ ಏಕೀಕರಣವನ್ನು ಸಂಭ್ರಮಿಸುವ ಮತ್ತು ಕನ್ನಡಿಗರ ಭಾಷೆ, ಸಂಸ್ಕೃತಿ, ಪರಂಪರೆಯನ್ನು ಗೌರವಿಸುವ ಒಂದು ಪ್ರಮುಖ ಹಬ್ಬವಾಗಿದೆ' ಎಂದರು.

ಡಾ. ಎಸ್ ಪಿ ಬಾಲಸುಬ್ರಮಣ್ಯ ಗಾನಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆ ಅಧ್ಯಕ್ಷ ಹೊಸೂರು ಶಿವಣ್ಣ ಮಾತನಾಡಿ, ವಿಶ್ವದ ಅತ್ಯಂತ ಗಾಯಕ ಎಸ್ ಪಿ ಬಾಲಸುಬ್ರಮಣ್ಯ ಅವರ ಹೆಸರಿನಲ್ಲಿ ಹಲವಾರು ವರ್ಷಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆ. ಹಲವಾರು ಜನಪರ ಸಮಾಜ ಸೇವೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದೇವೆ ಎಂದು ತಿಳಿಸಿದರು. ಭುವನೇಶ್ವರಿ ಭಾವಚಿತ್ರಕ್ಕೆ ರಾಮಸಮುದ್ರ ಕೆಇಬಿ ಶಾಖೆ ಕಿರಿಯ ಇಂಜಿನಿಯರ್ ಎಸ್ ಮಂಜುನಾಥ್ ಪುಷ್ಪಾರ್ಚನೆ ಮಾಡಿದರು. ಎಸ್ ಪಿ ಬಾಲಸುಬ್ರಮಣ್ಯ ಭಾವಚಿತ್ರಕ್ಕೆ. ಚಾಮರಾಜನಗರ ಕೆಇಬಿ ಲೆಕ್ಕಪರಿಶೋಧಕ ಎನ್ ಮಹೇಶ್ ಪುಷ್ಪಾರ್ಚನೆ ಮಾಡಿದರು.

**ಸನ್ಮಾನ**

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕನ್ನು ಸನ್ಮಾನಿಸಲಾಯಿತು ಕಾರ್ಯಕ್ರಮದಲ್ಲಿ ಚಾಮರಾಜನಗರ ಕೆಇಬಿ ಸಹಾಯಕ ಇಂಜಿನಿಯರ್ ಸಿದ್ದರಾಜು, ಕಲಾವೇದಿಕೆಯ ಗೌರವಾಧ್ಯಕ್ಷ ಸುರೇಶ್ ಗೌಡ, ಅಧ್ಯಕ್ಷ ಶಿವು, ಪ್ರಧಾನ ಕಾರ್ಯದರ್ಶಿ ಎನ್ ಜೋಸೆಫ್ ಇತರರು ಹಾಜರಿದ್ದರು.

# ಸಣ್ಣ ಕೈಗಾರಿಕೆಗಳಿಂದ ಆರ್ಥಿಕ ಅಭಿವೃದ್ಧಿ ಜತೆ ಉದ್ಯೋಗ ಸೃಷ್ಟಿ

## ಶಾಸಕ ಎಚ್.ಎಂ.ಗಣೇಶಪ್ರಸಾದ್ ಅಭಿಪ್ರಾಯ

ಗುಂಡ್ಲುಪೇಟೆ: ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ಅಭಿವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಗೂ ನೆರವಾಗುತ್ತದೆ ಎಂದ. ಶಾಸಕ ಎಚ್.ಎಂ.ಗಣೇಶಪ್ರಸಾದ್ ಅಭಿಪ್ರಾಯಪಟ್ಟರು.



ತಾಲೂಕಿನ ವೀರನಪುರ ಕೆ.ಎಸ್.ಎಸ್.ಐ.ಡಿ.ಸಿ ಕೈಗಾರಿಕಾ ಪ್ರದೇಶದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೆ.ಸಿ.ಟಿ.ಯು ಟೆಕ್ಸಾಸ್ ಬೆಂಗಳೂರು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ಸಂಯುಕ್ತಾಶ್ರಯದಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆ ಹೆಚ್ಚಳ ಮತ್ತು ವೇಗ (ಆರೆಎಂಪಿ) ಯೋಜನೆಯಡಿಯಲ್ಲಿ ಜಡ್‌ಇಡಿ–ಲೀನ್ ಯೋಜನೆ ಕುರಿತು ಅರಿವು ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೈಗಾರಿಕಾ ಪ್ರದೇಶವಾಗಿ ಗುಂಡ್ಲುಪೇಟೆಯನ್ನು ಅಭಿವೃದ್ಧಿಪಡಿಸಿ ಸ್ಥಳೀಯರು ಹಾಗೂ ಗ್ರಾಮೀಣ ಜನರಿಗೆ ಹೆಚ್ಚು ಉದ್ಯೋಗ ದೊರಕಬೇಕು ಎನ್ನುವ ದೃಷ್ಟಿಯಿಂದ ತಾಲೂಕಿನಲ್ಲಿ ಕೈಗಾರಿಕೆ ಸ್ಥಾಪನೆಯಾಗಬೇಕು ಎಂದರು. ಗಾರ್ಮೆಂಟ್ ಆರಂಭಿಸಲು ಹಲವು ಉದ್ಯಮಿಗಳ ಜೊತೆ ಚರ್ಚೆ ನಡೆಸಿ ಮುಂದಿನ ದಿನಗಳಲ್ಲಿ ಗಾರ್ಮೆಂಟ್ ತೆರೆಯಲು ಶ್ರಮಿಸುವುದಾಗಿ ಭರವಸೆ ನೀಡಿದರು.

ಉದ್ಯಮಿಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಏನೆಲ್ಲಾ ಸಮಸ್ಯೆಗಳನ್ನು ಉದ್ಭವವಾಗುತ್ತವೆ ಎಂಬುದನ್ನು ನಾನು ಉದ್ಯಮಿಯಾಗಿ ಹತ್ತಿರದಿಂದ ನೋಡಿದ್ದೇನೆ. ಉದ್ಯಮಿಗಳು ಕೌಶಲ್ಯವನ್ನು ಬೆಳೆಸಿಕೊಂಡು ವ್ಯವಹಾರ ಅಭಿವೃದ್ಧಿಗಳಿಸುವುದಕ್ಕೆ ಸಾಕಷ್ಟು ಕಷ್ಟ ಪಡಬೇಕಾಗುತ್ತದೆ. ಮಧ್ಯಮ ವರ್ಗದವರನ್ನೂ ಉದ್ಯಮಶೀಲರನ್ನಾಗಿ ಮಾಡಿ, ದುಡಿಯುವ ಕೈಗಳಿಗೆ ಕೌಶಲ್ಯಯುತ ಉದ್ಯೋಗ ಒದಗಿಸಿ ಕೊಟ್ಯಂತರ ಕುಟುಂಬಗಳಿಗೆ ಆಸರೆಯಾಗಿರುವ ಸಣ್ಣ ಕೈಗಾರಿಕೆಗಳಿಗೆ ತನ್ನದೇ ಸ್ಥಾನವಿದೆ. ಎಂದು ತಿಳಿಸಿದರು

> **ವೀರನಪುರ ಕೈಗಾರಿಕಾ ಪ್ರದೇಶಕ್ಕೆ ಭೇಟಿ ನೀಡಿದ ಸಮಯದಲ್ಲಿ ನೀರಿನ ಸಮಸ್ಯೆ ತಲೆದೋರಿತ್ತು. ಹಾಗೂ ಹೆಚ್ಚು ದಂಡ ವಿಧಿಸಿದ್ದಾರೆ ಎಂದು ತಮ್ಮ ಅಳಲನ್ನು ಕೈಗಾರಿಕೋದ್ಯಮಿಗಳು ತೋಡಿಕೊಂಡರು. ಈ ವಿಚಾರವನ್ನು ಜಿಲ್ಲಾಧಿಕಾರಿ ಅವರ ಗಮನಕ್ಕೆ ತಂದಾಗ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿ ಸಮಸ್ಯೆಯನ್ನು ಬಗೆಹರಿಸಲಾಯಿತು.ಹಾಗೆ ಸ್ಥಳೀಯರಿಗೆ ಹೆಚ್ಚು ಉದ್ಯೋಗ ದೊರಕಬೇಕು.**
>
> **ಎಚ್.ಎಂ.ಗಣೇಶಪ್ರಸಾದ್** ಶಾಸಕ

ಕೇಂದ್ರ ಮತ್ತು ರಾಜ್ಯ ಸರ್ಕಾರ ವಿಶ್ವ ಬ್ಯಾಂಕ್ ನೆರವಿನಿಂದ 30 ಕೋಟಿ ರೂ. ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಹಣ ನೀಡುತ್ತಿರುವುದನ್ನು ಈ ಸಂದರ್ಭದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರಿನ ಟೆಕ್ಸಾಸ್ ಸಿಇಓ ಮತ್ತು ಮುಖ್ಯ ಸಲಹೆಗಾರ ಸಿದ್ದರಾಜು, ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ದೊರೈರಾಜ್, ಎಸ್.ಬಿ.ಐ ಮುಖ್ಯ ವ್ಯವಸ್ಥಾಪಕರು ಎಂ.ಎನ್. ಸುರೇಖಾ, ಕೆಎಸ್‌ಎಫ್‌ಸಿ ಸಹಾಯಕ ಪ್ರಧಾನ ವ್ಯವಸ್ಥಾಪಕ ಪ್ರಮೀಳಾ, ಮೈಸೂರಿನ ಕೆಎಸ್‌ಎಸ್‌ಐಡಿಸಿಯ ಎ.ಜಿ.ಎಂ. ಟಿ. ವೇದಾವತಿ, ಜಡ್‌ಇಡಿ–ಲೀನ್ ಸಂಪನ್ಮೂಲ ವ್ಯಕ್ತಿ ಜಗದೀಶ್, ರಂಗರಾವ್ ಅಂಡ್ ಸನ್ ಇಂಜಿನಿಯರ್, ಮಂಜುನಾಥ ಇಂಡಸ್ಟ್ರೀಸ್ ಮಾಲೀಕ ಸದಾಶಿವ, ಧಾತು ಎಂಟರ್ ಪ್ರೈಸಸ್ ಮಾಲೀಕ ಭಾನು ಪ್ರಸಾದ್ ಹಾಜರಿದ್ದರು.

156 ಮಂದಿ ಪೌರಕಾರ್ಮಿಕರಿಗೆ

# ನಗರಸಭೆ ವತಿಯಿಂದ ಜರ್ಕಿನ್ ವಿತರಣೆ

ರಾಮನಗರ: ದಿನನಿತ್ಯ ಬೆಳ್ಳಂಬೆಳಿಗ್ಗೆ ನಗರದ ಸ್ವಚ್ಛತೆಯಲ್ಲಿ ತೊಡಗಿಸಿಕೊಳ್ಳುತ್ತಿರುವ ಚಳಿ ತಡೆದುಕೊಳ್ಳಲು ಅನುಕೂಲವಾಗುವಂತೆ ರಾಮನಗರ ನಗರ ಸಭೆ ತನ್ನ 156 ಮಂದಿ ಪೌರ ಕಾರ್ಮಿಕರಿಗೆ ವಿತರಿಸಿದೆ.

ನಗರಸಭೆ ಸಭಾಂಗಣದಲ್ಲಿ 120 ಪುರುಷ ಪೌರ ಕಾರ್ಮಿಕರು ಮತ್ತು 36ಮಂದಿ ಮಹಿಳಾ ಪೌರಕಾರ್ಮಿಕರಿಗೆ ಜರ್ಕಿನ್‌ಗಳನ್ನು ವಿತರಿಸಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಮಾತನಾಡಿ ಪೌರ ಕಾರ್ಮಿಕರ ಸಮಸ್ಯೆಗಳ ಬಗ್ಗೆ ತಮಗೆ ಸ್ಪಷ್ಟ ಅರಿವಿದೆ. ಅವರಿಂದ ಪರಿಣಾಮಕಾರಿ ಕೆಲಸವನ್ನು ನಿರೀಕ್ಷೆಯಿಟ್ಟುಕೊಂಡು ಪ್ರತಿನಿತ್ಯ ಕರ್ತವ್ಯ ನಿರ್ವಹಿಸುವ ಪೌರ ಕಾರ್ಮಿಕರಿಗೆ ನೀಡಬೇಕಾದ ಸವಲತ್ತುಗಳನ್ನು ಆಯಾಯ ಕಾಲ ಘಟ್ಟದಲ್ಲಿ ನಗರಸಭೆ ವತಿಯಿಂದ ಪೂರೈಸಲಾಗುತ್ತಿದೆ. ಈಗ ಚಳಿಗಾಲ, ಬೆಳಗಿನ ಸಮಯದಲ್ಲಿ ಕರ್ತವ್ಯಕ್ಕೆ ಹಾಜರಾಗುತ್ತಿದ್ದಾರೆ. ಚಳಿ ಅವರ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು. ಇದನ್ನು ಗಮನದಲ್ಲಿಟ್ಟು ಕೊಂಡು ಪೌರ ನೌಕರರಿಗೆ ಜರ್ಕಿನ್‌ಗಳನ್ನು ವಿತರಣೆ ಮಾಡಿದ್ದೇವೆ ಎಂದರು. ಮನೆ ಅಥವಾ ನಿವೇಶನ ರಹಿತರಿಗೆ, ಶಾಶ್ವತ ಸೂರು ಕಲ್ಪಿಸುವಂತೆ ಒತ್ತಾಯಿಸಿ ಪೌರ ಕಾರ್ಮಿಕ ಮೇಸ್ತ್ರಿಗಳು ಪ್ರಸ್ತಾವನೆ ಸಲ್ಲಿಸಿದ್ದಾರೆ. ಜಿಲ್ಲಾಧಿಕಾರಿಗಳು ಈ ವಿಷಯವಾಗಿ ಹಲವು ನಿಬಂಧನೆಗಳೊಂದಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಮನೆಯಿಲ್ಲದ ಪೌರ ಕಾರ್ಮಿಕರು ಅಫಿಡೆವಿಟ್ ನೀಡಬೇಕೆಂದು ಸಹ ತಿಳಿಸಿದ್ದಾರೆ ಎಂದರು.

ಸಾಮಾಜಿಕ ಜಾಲತಾಣದಲ್ಲಿ ವ್ಯಂಗ್ಯವಾಗಿ ಮಾತನಾಡುವುದನ್ನು ಬಿಟ್ಟು ಜವಾಬ್ದಾರಿಯಿಂದ ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಕೆಲಸದಲ್ಲಿ ಸಾರ್ವಜನಿಕರ ಸಹಕಾರ ಬೇಕಿದೆ. ಆಗ ಮಾತ್ರ ನಗರವನ್ನು ಸುಂದರವಾಗಿಟ್ಟು ಕೊಳ್ಳಲು ಸಾಧ್ಯ ಎಂದು ತಿಳಿಸಿದರು. ಈ ವೇಳೆ ನಗರಸಭೆ ಉಪಾಧ್ಯಕ್ಷೆ ಆಯಿಷಾ ಬಾನು, ಸ್ಥಾಯಿ ಸಮಿತಿ ಅಧ್ಯಕ್ಷ ಫೈರೋಜ್ ಪಾಷ, ಪರಿಸರ ವಿಭಾಗದ ಎಇಇ ಸುಬ್ರಮಣ್ಯ, ಪೌರ ಸೇವಾ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ನಾಗರಾಜು ಇದ್ದರು.

# ಮೈಸೂರ ಕಟ್ಟುವವರು ಬನ್ನಿ

ಮೈಸೂರು: ಜಿಎಸ್‌ಎಸ್ ಯೋಗಿಕ್ ಸಂಶೋಧನಾ ಸಂಸ್ಥೆಯು ವಿವಿಧ ಸಂಘ–ಸಂಸ್ಥೆಗಳ ಆಶ್ರಯದಲ್ಲಿ 2050ರ ವೇಳೆಗೆ ಮೈಸೂರನ್ನು ಸರ್ವ ರೀತಿಯಲ್ಲೂ ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಬನ್ನಿ ಮೈಸೂರಿನ ಋಣ ತೀರಿಸೋಣ ಎಂಬ ಮಹತ್ವಾಕಾಂಕ್ಷೆಯ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಜಿಎಸ್‌ಎಸ್ ಸಂಸ್ಥೆ ಮುಖ್ಯಸ್ಥ ಡಿ.ಶ್ರೀಹರಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಹಸಿರು ಮೈಸೂರು, ಸುರಕ್ಷಿತ ಮೈಸೂರು, ಕೌಶಲ್ಯಾಧಾರಿತ ಮೈಸೂರು, ಸಾಂಸ್ಕೃತಿಕ, ಶೈಕ್ಷಣಿಕ, ಆರೋಗ್ಯಕರ ಹೀಗೆ ನಾನಾ ರೀತಿಯ ಮೈಸೂರು ಎಂಬ ಪರಿಕಲ್ಪನೆಗಳ ನಿಟ್ಟಿನಲ್ಲಿ ಇದು ಕೆಲಸ ಮಾಡಲಿದೆ. ಇದಕ್ಕೆ ನಗರದ ಎಲ್ಲ ಸಮಾನ ಮನಸ್ಕ ಸಂಘ ಸಂಸ್ಥೆಗಳ ಸಹಯೋಗ ಪಡೆಯಲಾಗುವುದು. ಸ್ವಯಂ ಸೇವಕರಾಗಿ ಪಾಲ್ಗೊಳ್ಳಲಿಚ್ಛಿಸುವವರು ದೂ.96068 34673 ನ್ನು ಸಂಪರ್ಕಿಸಬಹುದಾಗಿದೆ. ಮುಂದಿನ ಅವಧಿಗೆ ಯಾವ ರೂಪದಲ್ಲಿ ಮೈಸೂರನ್ನು ಕಾಣಬಹುದು ಎಂಬುದರ ಕುರಿತು ನುರಿತ ತಜ್ಞರು ಸೇರಿ ಎಲ್ಲರೂ ಚರ್ಚಿಸಿ ಮನವಿ ಮಾಡಲಾಗುವುದು. ಜತೆಗೆ ಸಿಎಸ್‌ಆರ್ ಅನುದಾನಗಳನ್ನು ಬಳಸಿ ಯೋಜನೆಗಳ ಜಾರಿಗೊಳಿಸುವ ವೇದಿಕೆ ಇದಾಗಿದೆ ಎಂದರು. ಜಿಎಸ್‌ಎಸ್ ಸಂಸ್ಥೆಯ ಶಶಿಕುಮಾರ್, ಸರಳ, ಪತ್ರಕರ್ತರಾದ ಸಿ.ಕೆ.ಮಹೇಂದ್ರ ಇದ್ದರು.



# ಅವಧೂತ ದತ್ತ ಪೀಠದಲ್ಲಿ ದತ್ತ ಜಯಂತಿ ಸಂಪನ್ನ





ಮೈಸೂರು: ನಾಡಿನಾದ್ಯಂತ ದತ್ತಾತ್ರೇಯ ಜಯಂತಿಯನ್ನು ಸಡಗರದಿಂದ ಆಚರಿಸಲಾಗುತ್ತಿದ್ದು, ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ವಿಶ್ವಶಾಂತಿಗಾಗಿ ದತ್ತ ಜಯಂತಿ ಆಚರಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರು ದತ್ತಾತ್ರೇಯ ಮಹಿಮೆ ಹಾಗೂ ಪುರಾಣಗಳಲ್ಲಿ ದತ್ತನ ಇರುವಿಕೆಯ ಬಗ್ಗೆ ತಿಳಿಸಿ. ದತ್ತಾತ್ರೇಯ ಮಹಾವಿಷ್ಣುವಿನ ಆರನೇ ಅವತಾರ. ಅತ್ರಿ ಮತ್ತು ಅನುಸೂಯೆಯರಿಗೆ ಮಗನಾಗಿ ಬಂದವನು. ಆ ಕಾಲದ ರಾಜರುಗಳಿಗೆ ಮತ್ತು ಜನಸಾಮಾನ್ಯರಿಗೆ ಅದ್ಭುತವಾದ ಬೋಧನೆಗಳನ್ನು ಮಾಡಿದ ಜ್ಞಾನಸಾಗರ ಈ ದತ್ತಾತ್ರೇಯ ಎಂದು ಬಣ್ಣಿಸಿದರು.

ದತ್ತಾತ್ರೇಯರು ಸಂಚಾರಿಗಳು, ಅವರಿಗೆ ಇಂಥದ್ದೇ ನೆಲೆ ಅಂತಿಲ್ಲ. ಅವರು ಎಲ್ಲೆಡೆ ಇರುತ್ತಾರೆ. ರಾಮಾಯಣದಲ್ಲಿ ರಾಮನಿಗೆ ದತ್ತಾತ್ರೇಯರು ಕಾಣಿಸಿಕೊಳ್ಳುತ್ತಾರೆ, ಎಂದು ಪೌರಾಣಿಕ ಹಿನ್ನೆಲೆಯನ್ನು ತೆರೆದಿಟ್ಟರು. ಶ್ರೀರಾಮ ಪಟ್ಟಾಭಿಷೇಕದ ಸಂದರ್ಭದ ಮತ್ತೊಂದು ಅಪರೂಪದ ಕಥೆಯನ್ನು ಶ್ರೀಗಳು ಹಂಚಿಕೊಂಡರು. "ಪಟ್ಟಾಭಿಷೇಕದ ಸಮಯದಲ್ಲಿ ರಾಮ ಎಲ್ಲೋ ನೋಡುತ್ತಾ ಅನ್ಯಮನಸ್ಕನಾಗಿರುತ್ತಾನೆ. ಆಗ ಹನುಮಂತ (ಪಿಂಗಳ ನಾಗ) ರಾಮನನ್ನು ಪ್ರಶ್ನಿಸಿದಾಗ, 'ನನ್ನ ಭಕ್ತನೊಬ್ಬ ಪಿಂಗಳ ನಾಗನ ರೂಪದಲ್ಲಿ ಬಂದಿದ್ದಾನೆ, ಅವನ ದರ್ಶನವಾಗುವರೆಗೂ ಪಟ್ಟಾಭಿಷೇಕ ಬೇಡ' ಎಂದು ರಾಮ ಹೇಳುತ್ತಾನೆ. ಆ ಭಕ್ತನ ದರ್ಶನವಾದ ನಂತರವೇ ಪಟ್ಟಾಭಿಷೇಕ ನೆರವೇರುತ್ತದೆ," ಎಂದು ದತ್ತ ತತ್ವದ ಗೂಢಾರ್ಥವನ್ನು ತಿಳಿಸಿಕೊಟ್ಟರು.

ಫೆ.14 ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಶ್ರಮದ ವತಿಯಿಂದ ಹಮ್ಮಿಕೊಂಡಿರುವ ಬೃಹತ್ ಹನುಮಾನ್ ಚಾಲೀಸಾ ಪಾರಾಯಣದ ಪೋಸ್ಟರ್ ಗಳನ್ನು ಶ್ರೀಗಳು ಬಿಡುಗಡೆ ಮಾಡಿದರು. ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ, ಉದ್ಯಮಿ ರಾಮೇಗೌಡ ಉಪಸ್ಥಿತರಿದ್ದರು. ಸಂಜೆ ದತ್ತಾತ್ರೇಯ ಸ್ವಾಮಿಗೆ ತೆಪ್ಪೋತ್ಸವ ಹಾಗೂ ಕಾಕಡಾರತಿಯೊಂದಿಗೆ ದತ್ತ ಜಯಂತಿ ಕಾರ್ಯಕ್ರಮ ಸಂಪನ್ನವಾಯಿತು.

# ರೋಟರಿಯಿಂದ ನಿರ್ಗತಿಕರಿಗೆ ಹೊದಿಕೆ ವಿತರಣೆ

ಚಾಮರಾಜನಗರ: ರೋಟರಿ ಸಂಸ್ಥೆ ವತಿಯಿಂದ ನಗರದಲ್ಲಿ ಮಂಗಳವಾರ ರಾತ್ರಿ ನಿರ್ಗತಿಕರಿಗೆ ಹೊದಿಕೆ ವಿತರಿಸಲಾಯಿತು.



ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನ, ಜಿಲ್ಲಾ ಸರ್ಕಾರಿ ಆಸ್ಪತ್ರೆ, ಸಂಪಿಗೆರಸ್ತೆ, ಕೆಎಸ್ ಆರ್ ಟಿಸಿ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಕೊಳದ ಗಣಪತಿ ದೇವ ಸ್ಥಾನ, ದೊಡ್ಡಂಗಡಿ ಬೀದಿ, ಚಿಕ್ಕಂಗಡಿ ಬೀದಿ, ಡಿವಿ ಯೇಷನ್ ರಸ್ತೆ, ಸತ್ತಿರಸ್ತೆ, ಬಿ.ರಾಚಯ್ಯ ಜೋಡಿರಸ್ತೆಯ ಬಳಿಯಲ್ಲಿದ್ದ ನಿರ್ಗತಿಕರಿಗೆ ಹೊದಿಕೆ ವಿತರಣೆ ಮಾಡಲಾಯಿತು.ರೋಟರಿ ಸಂಸ್ಥಾಪಕ ಸದಸ್ಯ ಜಿ.ಆರ್.ಅಶ್ವಥ್ ನಾರಾಯಣ್ ಮಾತನಾಡಿ, ಮೈಕೊರೆಂ ಋುವ ಚಳಿಗಾಲ ಇರುವ ಕಾರಣ ಬೆಚ್ಚನೆಯ ಹೊದಿಕೆ ಬಹಳ ಅವಶ್ಯಕ ವಾಗಿದೆ. ಹೀಗಾಗಿ ನಿರ್ಗತಿಕರಿಗೆ ನಮ್ಮ ರೋಟರಿ ಸಂಸ್ಥೆ ವತಿಯಿಂದ ಹೊದಿಕೆ ವಿತರಿಸಲಾಗಿದೆ ಎಂದರು.

ರೋಟರಿ ಸಂಸ್ಥೆ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ನಮ್ಮ ರೋಟರಿ ಸಂಸ್ಥೆಯು ನಿರಂತರವಾಗಿ ಸಮಾಜಮುಖಿ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದು, ಕಳೆದ ಒಂದು ವಾರದಿಂದ ಮೈಕೊರೆಯುವ ಚಳಿಯಿದ್ದು ರಸ್ತೆಬದಿ, ದೇವಸ್ಥಾನ ಮುಂಭಾಗ, ಬಸ್ ನಿಲ್ದಾಣ ಸೇರಿದಂತೆ ಇತರ ಕಡೆಗಳಲ್ಲಿ ಮಲಗು ನಿರ್ಗತಿಕರ ಆರೋಗ್ಯ ದೃಷ್ಟಿಯಿಂದ ಬೆಚ್ಚನೆಯ ಹೊದಿಕೆಯನ್ನು ವಿತರಿಸಲಾಗಿದೆ ಎಂದರು. ರೋಟರಿ ಸಂಸ್ಥೆ ಕಾರ್ಯದರ್ಶಿ ಕೆಂಪನಪುರ ಸಿದ್ದರಾಜು, ಅಂಕಶೆಟ್ಟಿ, ಅಬ್ದುಲ್ ಅಜೀಜ್ ದೀನಾ, ಸಿದ್ದಮಲ್ಲಪ್ಪ, ಭವಾನಿದೇವಿ, ಯೋಗರಾಜ್, ಮೋಹನ್, ನಾರಾಯಣ್, ಡಿ.ನಾಗರಾಜು, ಚಂದ್ರಪ್ರಭಜೈನ್, ನೇಮಿರಾಜ್, ರೂಪೇಶ್, ಸಂಜಯ್ ಕುಮಾರ್ ಜೈನ್, ರಾಜಣ್ಣ, ಶ್ರೀನಿವಾಸ್ ಎಸ್ ಆರ್ ಎಸ್, ರಾಜು ವರ್ಗೀಸ್, ಕಮಲ್ ರಾಜ್, ಡಾ.ನಾಗಾರ್ಜುನ್ ಇತರರು ಹಾಜರಿದ್ದರು.

## ಎಸ್.ಸಿ, ಎಸ್.ಟಿ ಗುತ್ತಿಗೆದಾರರ ಕ್ಷೇಮಾಭಿವೃದ್ಧಿ ಸಂಘದ ನಿರ್ದೇಶಕ ಕೆ.ಟಿ.ಹರೀಶ್ ಹೇಳಿಕೆ

# ಗುತ್ತಿಗೆಯಲ್ಲಿ ಅನ್ಯಾಯ ಕುರಿತು ಪುಸ್ತಕ ತಯಾರಿ

ಎಚ್.ಡಿ.ಕೋಟೆ: ಗುತ್ತಿಗೆಯಲ್ಲಿ ಎಸ್.ಸಿ, ಎಸ್.ಟಿ ಪಾಲಿನ ಕಾಮಗಾರಿಗಳನ್ನು ಖಾಸಗಿ ಸಂಸ್ಥೆಗಳಿಗೆ ನೀಡಿ ನಮಗೆ ಅನ್ಯಾಯ ಮಾಡಿರುವುದನ್ನು ಪ್ರಶ್ನಿಸಿ ಹೈಕೋರ್ಟ್ ಕದತಟ್ಟಿದ್ದರಿಂದ ಇದೀಗ ಆ ಕಾಮಗಾರಿಗಳನ್ನು ತಡೆ ಹಿಡಿಯುವಂತೆ ಆದೇಶಿಸಿರುವುದು ನಮ್ಮ ಹೋರಾಟಕ್ಕೆ ಮೊದಲ ಗೆಲುವಾಗಿದೆ ಎಂದು ಎಸ್.ಸಿ, ಎಸ್.ಟಿ ಗುತ್ತಿಗೆದಾರರ ಕ್ಷೇಮಾಭಿವೃದ್ಧಿ ಸಂಘದ ನಿರ್ದೇಶಕ ಕೆ.ಟಿ.ಹರೀಶ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸರ್ಕಾರದ ವತಿಯಿಂದ ತಾಲೂಕಿಗೆ ಬರುವ ಕಾಮಗಾರಿಗಳಲ್ಲಿ ಎಸ್.ಸಿ, ಎಸ್.ಟಿ ಜನಾಂಗದವರಿಗೆ ನೀಡುವ ಕೆಲಸಗಳನ್ನು ತಡೆದ ಶಾಸಕ ಅನಿಲ್ ಚಿಕ್ಕಮಾದು, ನಿರ್ಮಿತಿ ಕೇಂದ್ರ, ಲ್ಯಾಂಡ್ ಆರ್ಮಿ, ಕೆ.ಆರ್.ಐ.ಡಿ.ಎಲ್ ಮೂಲಕ ನಡೆಸುವಂತೆ ಪ್ರಿಯಾಂಕ್ ಖರ್ಗೆ ಅವರಿಗೆ ಪತ್ರ ಬರೆದು ನಮಗೆ ಅನ್ಯಾಯವೆಸಗಿದ್ದರು. ಇದನ್ನು ಪ್ರಶ್ನಿಸಿ ನಮ್ಮ ಸಂಘ ಹೈ ಕೋರ್ಟ್ ನಲ್ಲಿ ದಾವೆ ಹೂಡಿತ್ತು ಎಂದರು. ಈ ಸಂಬಂಧ ಡಿ.15ರಂದು



ವಿಚಾರಣೆಗೆ ಹಾಜರಾಗುವಂತೆ ಶಾಸಕ ಅನಿಲ್ ಚಿಕ್ಕಮಾದು ಸೇರಿದಂತೆ ಸರ್ಕಾರದ ಮೂವರು ಅಧಿಕಾರಿಗಳಿಗೆ ಹೈ ಕೋರ್ಟ್ ಸೂಚಿಸಿರುವುದು ನಮ್ಮ ಹೋರಾಟಕ್ಕೆ ಮತ್ತಷ್ಟು ಹುರುಪು ತಂದಿದೆ. ಶಾಸಕರ ಸದಸ್ಯತ್ವ ರದ್ದುಗೊಳಿಸುವಂತೆ ಹಾಗೂ ವಿವಿಧ ಇಲಾಖೆಗಳ ಏಳು ಅಧಿಕಾರಿಗಳನ್ನು ಅಮಾನತು ಮಾಡುವಂತೆ ನ್ಯಾಯಾಲಯಕ್ಕೆ ಮನವರಿಕೆ ಮಾಡಿಕೊಡಲಾಗುವುದು ಎಂದು ತಿಳಿಸಿದರು. ಉಪಾಧ್ಯಕ್ಷ ಸಾಗರೆ ದಾಸನಾಯಕ ಮಾತನಾಡಿ, ತಾಲೂಕಿನಲ್ಲಿ ಹಿಂದಿನ ಯಾವ ಶಾಸಕರು ನಮ್ಮ ಗುತ್ತಿಗೆದಾರರನ್ನು ಕಡೆಗಣಿಸಿರಲಿಲ್ಲ. ಹಾಲಿ ಶಾಸಕರು ನಮಗೆ ಕೆಲಸ ನೀಡುತ್ತಿಲ್ಲ. ನಿಯಮದ ಪ್ರಕಾರ ನಮಗಿದ್ದ ಮೀಸಲನ್ನೇ ತೆಗೆದಿರುವುದರಿಂದ ಗುತ್ತಿಗೆಯಿಲ್ಲದೆ ನಮ್ಮ ಜೀವನ ನಿರ್ವಹಣೆ ಕಷ್ಟವಾಗಿದೆ. ಎಸ್.ಸಿ, ಎಸ್.ಟಿ ಗುತ್ತಿಗೆದಾರರಿಗೆ ರಾಜ್ಯದಲ್ಲಿ ಹಿಂದಿನ ಸರ್ಕಾರಗಳು ಎಷ್ಟು ಗುತ್ತಿಗೆ ನೀಡಿವೆ. ಇಂದಿನ ಸರ್ಕಾರ ಎಷ್ಟು ಗುತ್ತಿಗೆ ನೀಡಿದೆ ಎಂಬ ಮಾಹಿತಿ ಕುರಿತು ಸದ್ಯದಲ್ಲಿಯೇ ಕೊತ್ತೇಗಾಲ ಕೆ.ಟಿ.ಹರೀಶ್ ಸಂಪಾದಕತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಿಂದ ಗುತ್ತಿಗೆದಾರರು ಸರ್ವನಾಶ, ಗುತ್ತಿಗೆದಾರರ ಮರಣ ಶಾಸನ, ಇದು ಕಥೆಯಲ್ಲ ನಿಜ ಜೀವನದ ವ್ಯಥೆ ಎಂಬ ಪುಸ್ತಕವನ್ನು ರಾಜ್ಯದ ಹೆಸರಾಂತ ರಾಜಕಾರಣಿಯಿಂದ ಬಿಡುಗಡೆಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಸ್ವಾಮಿ, ಕೆ.ಎನ್. ದೊಡ್ಡರಾಜು ಇದ್ದರು.

# ಸರ್ಕಾರಿ ಯೋಜನೆಗಳನ್ನು ಅರ್ಹರಿಗೆ ತಲುಪಿಸಿ

## ಜಿಲ್ಲಾ ಕೌಶಲ್ಯ ಸಮಿತಿ ಸಭೆಯಲ್ಲಿ ಡೀಸಿ ಡಾ.ಕುಮಾರ ಸೂಚನೆ

**ಮಂಡ್ಯ:** ವಿವಿಧ ಸರ್ಕಾರಿ ಯೋಜನೆಗಳ ಅಡಿಯಲ್ಲಿ ನೀಡಲಾಗುವುದು ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ಅಧಿಕಾರಿಗಳು ತಲುಪಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಗುರುವಾರ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಕೌಶಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಲ್ ಜಲ್ ಮಿತ್ರ ಯೋಜನೆಯಡಿ 49 ಜನರು ಆಯ್ಕೆಯಾಗಿದ್ದು 47 ಫಲಾನುಭವಿಗಳು ಉತ್ತೀರ್ಣರಾಗಿರುತ್ತಾರೆ ಸದರಿ 47 ಜನರಿಗೆ ಟೂಲ್ ಕಿಟ್ ಮತ್ತು ಪ್ರಮಾಣ ಪತ್ರವನ್ನು ವಿತರಿಸಲಾಗಿದೆ ಎಂದರು.

ವಿವಿಧ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಕೇವಲ ತರಬೇತಿ ಮತ್ತು ಪ್ರಮಾಣ ಪತ್ರ ವಿತರಿಸಿದರೆ ಸಾಲದು. ಅವರಿಗೆ ಬ್ಯಾಂಕ್ ನ ಮೂಲಕ ಸಾಲ ಸೌಲಭ್ಯವನ್ನು ಕಲ್ಪಿಸಿ ಉದ್ಯಮ ಸೃಷ್ಟಿ ಮಾಡಲು ಉತ್ತೇಜನ ನೀಡಬೇಕು ಎಂದು ಹೇಳಿದರು.

ಪಿ.ಎಂ ವಿಶ್ವಕರ್ಮ ಯೋಜನೆಯಡಿ ಜಿಲ್ಲೆಯಲ್ಲಿ 19 ಸಾವಿರ ಜನರಿಗೆ ತರಬೇತಿ ನೀಡಲಾಗಿದೆ. ಅದರಲ್ಲಿ 4290 ಜನರಿಗೆ ಸುಮಾರು 30 ಕೋಟಿ ಸಾಲ ಸೌಲಭ್ಯವನ್ನು ನೀಡಲಾಗಿದೆ. ಪಿ.ಎಂ ವಿಶ್ವಕರ್ಮ ಯೋಜನೆ ಬಡ ಜನರಿಗೆ ಕೌಶಲ್ಯದ ತರಬೇತಿ ನೀಡಿ ಅವರನ್ನು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಮಾಡುವುದು. ಅಧಿಕಾರಿಗಳು ಸದರಿ ಯೋಜನೆಯನ್ನು ಅರ್ಹರಿಗೆ ತಲುಪಿಸಿ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ನಾಗನಂದ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಘಟಕಗಳ ಜಂಟಿ ನಿರ್ದೇಶಕ ದಿನೇಶ್, ಮದ್ದೂರು ತಹಶೀಲ್ದಾರ್ ಪರಶುರಾಮ್ ಸತ್ತಿಗೆರೆ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



### ಯುವನಿಧ ಪ್ಲಸ್ ಕುರಿತು ಜಾಗೃತಿ ಮೂಡಿಸಿ

**ಯುವನಿಧಿ ಪ್ಲಸ್ ಯೋಜನೆಯಡಿ ಜಿಲ್ಲೆಯ 7 ತಾಲ್ಲೂಕಿನಿಂದ 315 ನಿರುದ್ಯೋಗಿಗಳು ಯುವನಿಧಿ ಪ್ಲಸ್ ಯೋಜನೆಯಡಿಯಲ್ಲಿ ತರಬೇತಿ ಪಡೆಯಲು ಆಸಕ್ತಿ ವ್ಯಕ್ತಪಡಿಸಿದ್ದಾರೆ. ಅಧಿಕಾರಿಗಳು ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಯುವನಿಧಿ ಪ್ಲಸ್ ಯೋಜನೆಯ ಕುರಿತು ಕಾಲೇಜುಗಳಲ್ಲಿ ಹೆಚ್ಚಿನ ಮಾಹಿತಿ ಮತ್ತು ಅರಿವು ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಯುವ ನಿಧಿ ಪ್ಲಸ್ ನಲ್ಲಿ ಯುವಕರು ತರಬೇತಿ ಪಡೆಯುವಂತೆ ಮಾಡಿ ಎಂದು ತಿಳಿಸಿದರು.**

### ಪಿ.ಎಂ ಸ್ವ-ನಿಧಿ ಯೋಜನೆ

**ಬೀದಿ ಬದಿ ವ್ಯಾಪಾರಿಗಳನ್ನು ಆರ್ಥಿಕವಾಗಿ ಸದೃಢಗೊಳಿಸಲು ಪಿ.ಎಂ ಸ್ವ- ನಿಧಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಪಿ.ಎಂ ಸ್ವ- ನಿಧಿ ಸಾಹಯ ಧನವನ್ನು ಮೂರು ಹಂತದಲ್ಲಿ ನೀಡಲಾಗುತ್ತದೆ. ಮೊದಲ ಹಂತದಲ್ಲಿ ರೂ 15 ಸಾವಿರ, ಎರಡನೇ ಹಂತದಲ್ಲಿ ರೂ 25 ಸಾವಿರ, ಮೂರನೇ ಹಂತದಲ್ಲಿ ರೂ 50 ಸಾವಿರ ಹಣವನ್ನು ಶೇ 7 ರಷ್ಟು ಬಡ್ಡಿ ದರದಲ್ಲಿ ನೀಡಲಾಗುವುದು. ಸಾಲವನ್ನು ಸರಿಯಾದ ಸಮಯಕ್ಕೆ ಪಾವತಿಸುವ ಫಲಾನುಭವಿಗಳಿಗೆ ರೂ 30 ಸಾವಿರದ ವರೆಗೂ ಕ್ರೆಡಿಟ್ ಕಾರ್ಡ್ ಸೌಲಭ್ಯವನ್ನು ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.**

**ಅಧಿಕಾರಿಗಳು ಪಿ.ಎಂ ಸ್ವನಿಧಿ ಯೋಜನೆಯನ್ನು ಅರ್ಹರಿಗೆ ತಲುಪಿಸಿ ಯೋಜನೆಯ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕು. ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗದಂತೆ ಬೀದಿ ಬದಿ ವ್ಯಾಪಾರಿಗಳಿಗೆ ಪರ್ಯಾಯ ಜಾಗದ ವ್ಯವಸ್ಥೆ ಕಲ್ಪಿಸಿ ಎಂದು ಹೇಳಿದರು.**

# 'ತುರ್ತು ಕಾರಣ'ಗಳಿಂದಾಗಿ ಎಲ್ಲಾ ಅಧ್ವಾನವಾಯಿತು: ವಿಮಾನಗಳ ರದ್ದತಿ ಕುರಿತು ಇಂಡಿಗೋ ಸ್ಪಷ್ಟನೆ



**ಹೈದರಾಬಾದ್:** ತೆಲಂಗಾಣದ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂಡಿಗೋ ವಿಮಾನಗಳ ಸಂಚಾರದಲ್ಲಿ ಸಾಕಷ್ಟು ವಿಳಂಬವಾದ ನಂತರ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸಿದ್ದು ಕಂಡುಬಂತು. ದೀರ್ಘ ಸರದಿ ಸಾಲಿನಲ್ಲಿ ನಿಂತಿದ್ದ ಪ್ರಯಾಣಿಕರು ಗೊಂದಲ ಮತ್ತು ಆತಂಕಕ್ಕೀಡಾಗಿದ್ದರು.

ವಿಮಾನ ನಿಲ್ದಾಣದ ಅಧಿಕಾರಿಗಳ ಪ್ರಕಾರ, ಕಾರ್ಯಾಚರಣೆಯ ಸಮಸ್ಯೆಗಳಿಂದಾಗಿ ಹಲವಾರು ಇಂಡಿಗೋ ವಿಮಾನಗಳು ವಿಳಂಬವಾದವು. ಇದು ವಿಮಾನ ನಿಲ್ದಾಣದಲ್ಲಿ ಜನದಟ್ಟಣೆಯನ್ನು ಹೆಚ್ಚಿಸಿತು. ಟರ್ಮಿನಲ್‌ನ ದೃಶ್ಯಗಳು ಪ್ರಯಾಣಿಕರು ತಮ್ಮ ವಿಮಾನಗಳ ಕುರಿತು ಮಾಹಿತಿಗಳನ್ನು ಹುಡುಕುತ್ತಿದ್ದಂತೆ ಜನಸಂದಣಿ ಹೆಚ್ಚಾಗುತ್ತಿರುವುದನ್ನು ತೋರಿಸಿದವು.

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸತತ ಎರಡನೇ ದಿನವಾದ ಇಂದು ವ್ಯಾಪಕ ಅಡಚಣೆಗಳು ಮುಂದುವರೆದವು. 72 ವಿಮಾನಗಳ ಹಾರಾಟದಲ್ಲಿ ವ್ಯತ್ಯಯವುಂಟಾಯಿತು. ಇದು ಪ್ರಯಾಣಿಕರ ಮೇಲೆ ತೀವ್ರ ಪರಿಣಾಮ ಬೀರಿತು. ಟರ್ಮಿನಲ್ –1 ರಲ್ಲಿ ಇಂಡಿಗೋ ಕಾರ್ಯಾಚರಣೆಗಳು ಹೆಚ್ಚು ಪರಿಣಾಮ ಬೀರಿತು. ತಾಂತ್ರಿಕ ಸಮಸ್ಯೆಗಳು ಮತ್ತು ಸಿಬ್ಬಂದಿ ಕೊರತೆಯು ದೀರ್ಘ ವಿಳಂಬಕ್ಕೆ ಕಾರಣವಾಯಿತು.

ಕ್ಯಾಸ್ಕೇಡಿಂಗ್ ವಿಮಾನ ವೇಳಾಪಟ್ಟಿಯ ಅಡಚಣೆಗಳಿಂದಾಗಿ ಹಲವಾರು ಪ್ರಯಾಣಿಕರು ವಿಮಾನ ನಿಲ್ದಾಣದಲ್ಲಿ ಕಳೆದ ರಾತ್ರಿ ಕಳೆಯಬೇಕಾಯಿತು. ನಿರಂತರ ವಿಳಂಬದಿಂದಾಗಿ ಟರ್ಮಿನಲ್ 1 ರ ಒಳಗೆ ಜನದಟ್ಟಣೆ ಉಂಟಾಯಿತು.

ಸೀಮಿತ ಆಸನದಿಂದಾಗಿ, ಅನೇಕ ಪ್ರಯಾಣಿಕರು ನೆಲದ ಮೇಲೆ ಕುಳಿತರು. ಹಿರಿಯ ಪ್ರಯಾಣಿಕರು ಮತ್ತು ಮಕ್ಕಳಿರುವ ಕುಟುಂಬಗಳು ಪರಿಸ್ಥಿತಿಯನ್ನು ನಿಭಾಯಿಸಲು ಹೆಣಗಾಡಿದರು. ವಿಮಾನಯಾನ ಸಂಸ್ಥೆಯ ಈ ಅಡಚಣೆಗೆ ಪ್ರಮುಖ ಕಾರಣ ಪೈಲಟ್‌ಗಳು ಮತ್ತು ಸಿಬ್ಬಂದಿಗಳ ಕೊರತೆ ಎಂದು ಮೂಲಗಳು ತಿಳಿಸಿವೆ.

ಎಫ್‌ಡಿಟಿಎಲ್ (ವಿಮಾನ ಕರ್ತವ್ಯ ಸಮಯ ಮಿತಿ) ಮಾನದಂಡಗಳನ್ನು ಮರು ಜಾರಿಗೆ ತಂದಿದ್ದರಿಂದ ಮತ್ತು ಸಿಬ್ಬಂದಿ ಲಭ್ಯತೆ ಕಡಿಮೆಯಾಗಿದ್ದರಿಂದ ವಿಮಾನ ರದ್ದತಿ ಮತ್ತು ಮರು ವೇಳಾಪಟ್ಟಿಯಲ್ಲಿ ಬದಲಾವಣೆಯಾಗಿದ್ದು, ಬೆಂಗಳೂರಿನಲ್ಲಿ ಮಾತ್ರವಲ್ಲದೆ ದೇಶಾದ್ಯಂತ ಇಂಡಿಗೋ ಕಾರ್ಯಾಚರಣೆಗಳ ಮೇಲೆ ಪರಿಣಾಮ ಬೀರಿತು.

ವಿಮಾನಯಾನ ಸಂಸ್ಥೆಯ ಸ್ಪಷ್ಟ ಸಂವಹನದ ಕೊರತೆಯಿಂದ ಪ್ರಯಾಣಿಕರು ಹತಾಶೆ ವ್ಯಕ್ತಪಡಿಸಿದರು. ನಿಖರವಾದ ನಿರ್ಗಮನ ಮಾಹಿತಿಯನ್ನು ನೀಡಿಲ್ಲ ಎಂದು ಆರೋಪಿಸಿ ಕೆಲವರು ವಿಮಾನಯಾನ ಕೌಂಟರ್‌ಗಳ ಬಳಿ ಪ್ರತಿಭಟನೆ ನಡೆಸಿದರು.

ವಿಮಾನ ವಿಳಂಬಗಳಿಂದಾಗಿ ನಮ್ಮ ತುರ್ತು ಬದ್ಧತೆಗಳು ಹಾಳಾಗಿವೆ ಎಂದು ಒಬ್ಬ ಪ್ರಯಾಣಿಕ ಹೇಳಿದರು. ಕಳೆದ 48 ಗಂಟೆಗಳಲ್ಲಿ, 70 ಕ್ಕೂ ಹೆಚ್ಚು ವಿಮಾನಗಳ ಹಾರಾಟವು ಪರಿಣಾಮ ಬೀರಿದೆ ಎಂದು ವರದಿಗಳು ಹೇಳುತ್ತವೆ. ಪರಿಸ್ಥಿತಿಯನ್ನು ನಿರ್ವಹಿಸಲು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಕೆಐಎಎಲ್ ವಕ್ತಾರರು ಅಡಚಣೆಗಳ ಪ್ರಮಾಣವನ್ನು ದೃಢಪಡಿಸಿದರು. ಇಂದು ಇಂಡಿಗೋ ವಿಮಾನ ರದ್ದತಿಯಾಗಿದ್ದು, ಕಾರ್ಯಾಚರಣೆಯ ಕಾರಣಗಳಿಂದಾಗಿ ರದ್ದತಿಯಾಗಿದೆ. ಆಗಮನ – 41, ನಿರ್ಗಮನ – 32 ವಿಮಾನಗಳ ಸೇವೆ ಮೇಲೆ ಪರಿಣಾಮ ಬೀರಿದೆ ಎಂದು ದೃಢಪಡಿಸಿದೆ.

# 'ಪೌರಕಾರ್ಮಿಕರ ಸೇವಾ ಜೇಷ್ಠತೆಯನ್ನು ಪರಿಗಣಿಸಿ ವಿಶೇಷ ನೇಮಕಾತಿ ನಿಯಮದಡಿ ನೇರ ನೇಮಕಾತಿ ಮಾಡಿ'



**ಮಂಡ್ಯ:** ಜಿಲ್ಲೆಯ ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಹಾಗೂ ನೇರ ಪಾವತಿ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ಪೌರಕಾರ್ಮಿಕರ ಸೇವಾ ಜೇಷ್ಠತೆಯನ್ನು ಪರಿಗಣಿಸಿ ವಿಶೇಷ ನೇಮಕಾತಿ ನಿಯಮದಡಿ ನೇರ ನೇಮಕಾತಿ ಮಾಡಬೇಕು ಎಂದು ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಡಿ.ಆರ್.ರಾಜು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೇವಾ ಜೇಷ್ಠತೆಯನ್ನು ನೇರ ನೇಮಕಾತಿಗೆ ಪರಿಗಣಿಸುವಂತೆ ರಾಜ್ಯ ಪತ್ರದಲ್ಲಿ ಅಧಿಸೂಚನೆಯಿದ್ದರೂ, ನಗರಸಭೆಯ ಅಧಿಕಾರಿಗಳು ರೋಸ್ಟರ್ ಪದ್ದತಿಯಲ್ಲಿ ಕಾನೂನು ಉಲ್ಲಂಘನೆ ಮಾಡಿ ಪೌರಕಾರ್ಮಿಕರ ನೇಮಕಾತಿ ಮಾಡಿದ್ದಾರೆ ಎಂದು ಆರೋಪಿಸಿದರು.

ಸೇವಾ ಜೇಷ್ಠತೆಯನ್ನು ಪರಿಗಣಿಸದೇ ವಯಸ್ಸಿನ ಆಧಾರದ ಮೇಳೆ ನೇಮಕಾತಿ ಮಾಡುವುದು ರಾಜ್ಯ ಪತ್ರದ ಆದೇಶ ವಿರೋಧಿ ಕೃತ್ಯವಾಗಿದೆ. ಆದ್ದರಿಂದ ಜಿಲ್ಲಾಧಿರಿಗಳು ಈ ಕೂಡಲೇ ಪೌರಕಾರ್ಮಿಕರ ನೇರನೇಮಕಾತಿ ಪ್ರಕ್ರಿಯೆಯ ಎಲ್ಲ ದಾಖಲೆಗಳನ್ನು ಪರಿಶೀಲಿಸಿ, ತನಿಖೆಗೆ ಒಳಪಡಿಸಬೇಕು. ರಾಜ್ಯಪತ್ರದ ಅಧಿಸೂಚನೆ ಉಲ್ಲಂಘಿಸಿದ ಪೌರಾಯುಕ್ತರು ಹಾಗೂ ಪರಿಸರ ಅಭಿಯಂತರರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು. ದೀರ್ಘಾವಧಿ ಸೇವೆ ಸಲ್ಲಿಸಿದ ಅರ್ಹ ಪೌರಕಾರ್ಮಿಕರನ್ನು ಕೂಡಲೇ ನೇರ ನೇಮಕಾತಿಗೆ ಒಳಪಡಿಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಸೂಕ್ತ ಕ್ರಮ ಕೈಗೊಳ್ಳದಿದ್ದರೆ, ನೇರ ನೇಮಗಾರಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನವಾದ ಡಿ.27 ರಂದು ನಗರಸಭೆಯ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಗೋಷ್ಠಿಯಲ್ಲಿ ಗೌರವ ಸಲಹೆಗಾರ ಸಿ.ಆರ್.ವಿಜಯ್, ಪ್ರಧಾನ ಕಾರ್ಯದರ್ಶಿ ದಿನೇಶ್ ಕುಮಾರ್, ಮಂಡ್ಯ ಜಿಲ್ಲಾಧ್ಯಕ್ಷ ಗಣೇಶ್, ಬ್ಯಾಂಕ್ ರಾಜಣ್ಣ ಇದ್ದರು.

# 'ಮೈಷುಗರ್ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ತೀರ್ಪು ನೀಡಿದ್ದು ಅನುಷ್ಠಾನಗೊಳಿಸಲು ಸರ್ಕಾರ ಮುಂದಾಗಲಿ'




**ಮಂಡ್ಯ:** ಹಿಂದೆ ಮೈಷುಗರ್ ಅಧ್ಯಕ್ಷರಾಗಿದ್ದ ನಾಗರಾಜಪ್ಪನವರ ಅವಧಿಯಲ್ಲಿ ನಡೆದಿರುವ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ತೀರ್ಪು ನೀಡಿದ್ದು ಅದನ್ನು ಅನುಷ್ಠಾನಗೊಳಿಸಲು ಸರ್ಕಾರ ಮುಂದಾಗಬೇಕು ಎಂದು ಮೈಸೂರು ಸಕ್ಕರೆ ಕಂಪನಿ ಅಧ್ಯಕ್ಷ ಸಿ.ಡಿ.ಗಂಗಾಧರ್ ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ನೀಡಿರುವ ತೀರ್ಪಿನ ಪ್ರತಿಯನ್ನು ವಿತರಿಸಿ ಮಾತನಾಡಿದ ಅವರು ಸುದೀರ್ಘ ಅವಧಿಯ ನಂತರ ನ್ಯಾಯಾಲಯ ಪ್ರಕರಣಕ್ಕೆ ಸಂಬಂಧಿಸಿದಂತೆ ತಡೆಯಾಜ್ಞೆ ತೆರವುಗೊಳಿಸಿರುವುದು ಮತ್ತೆ ತಡೆ ನೀಡಲು ನಿರಾಕರಿಸಿರುವುದರಿಂದ ಆಸ್ತಿ ಮುಟ್ಟುಗೋಲು ಮೈಷುಗರ್ ವ್ಯಾಪ್ತಿಗೆ ಬರುವುದಿಲ್ಲವಾದ್ದರಿಂದ ಈ ಜವಾಬ್ದಾರಿ ಸರ್ಕಾರದ್ದಾಗಿದ್ದು ಸರ್ಕಾರ ಕ್ರಮ ವಹಿಸಬೇಕು ಎಂದು ಸ್ಪಷ್ಟಪಡಿಸಿದರು.

ಜಿಲ್ಲಾಧಿಕಾರಿಗಳ ಮೂಲಕ ಮಾಹಿತಿ ಸಂಗ್ರಹಿಸುವ ಸಾಧ್ಯತೆ ಇದೆ ಎಂದರು

ಈ ಹಿಂದೆ ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಮೊಲಾಸಿಸ್ ಸೋರಿಕೆ ಬಗ್ಗೆ ವಿವಿಧ ಮಾಧ್ಯಮಗಳಲ್ಲಿ ತಪ್ಪು ಮಾಹಿತಿ ವರದಿಯಾಗಿರುವುದರಿಂದ ಅಬಕಾರಿ ಇಲಾಖೆ ನೇತೃತ್ವದಲ್ಲಿ ತನಿಖೆಗೆ ಮನವಿ ಮಾಡಲಾಗಿತ್ತು. ಇದರ ಮೇರೆಗೆ ಅಬಕಾರಿ ನಿರೀಕ್ಷಕರು ಎಲ್ಲಾ ಟ್ಯಾಂಕ್‌ಗಳಲ್ಲಿರುವ ಭೌತಿಕ ಕಾಕಂಬಿಯ ದಾಸ್ತಾನನ್ನು ಪರಿಶೀಲಿಸಿ ವರದಿಯನ್ನು ನೀಡಿದ್ದು ಕೇವಲ 7.43 ಮೆಟ್ರಿಕ್ ಟನ್‌ನಷ್ಟು ಮೊಲಾಸಿಸ್ ಸೋರಿಕೆಯಾಗಿದೆ ಎಂಬ ವರದಿ ನೀಡಿರುತ್ತಾರೆ. ಈ ಹಿಂದೆ ವರದಿಯಾಗಿದ್ದು ತಪ್ಪು ಮಾಹಿತಿ ಎಂಬುದು ಇದರಿಂದ ತಿಳಿದುಬಂದಿದೆ ಎಂದು ವಿವರಿಸಿದರು. 25–26 ನೇ ಸಾಲಿಗೆ ಸರ್ಕಾರ ನೀಡಿದ 10 ಕೋಟಿ ರೂ.ಗಳನ್ನು ಯಾವುದೇ ಸಿವಿಲ್ ಕಾಮಗಾರಿಗಳಿಗೆ ಬಳಸದೆ ಮೈಷುಗರ್ ಅಭಿವೃದ್ಧಿಗೆ ಮಾತ್ರ ಬಳಸಿಕೊಳ್ಳಲಾಗಿದೆ. ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಹಣ ಬಟವಾಡೆ ಮಾಡುವಲ್ಲಿ ನಿರಾಣಿ ಷುಗರ್ ನಂತರ ಮೈಷುಗರ್ ಎರಡನೇ ಸ್ಥಾನದಲ್ಲಿದೆ ಉಳಿದ ಕಾರ್ಖಾನೆಗಳು ನಂತರದ ಸ್ಥಾನದಲ್ಲಿವೆ ಎಂದರು.

ಮುಂದಿನ ಅವಧಿಗೆ ಈಗಾಗಲೇ ಮೂರುವರೆ ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಕಬ್ಬು ಕಟಾವಿಗೆ ಒಪ್ಪಂದ ಮಾಡಿಕೊಂಡಿದ್ದು ಮುಂದಿನ ಸಾಲಿನಲ್ಲಿ ಹೆಚ್ಚು ಕಬ್ಬು ಅರೆಯುವ ಗುರಿಯನ್ನು ಇರಿಸಿಕೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಶೇಕಡ ನೂರರಷ್ಟು ಪ್ರಗತಿ ಸಾಧಿಸಲಾಗುವುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಗೋಷ್ಠಿಯಲ್ಲಿ ಕಾಂಗ್ರೆಸ್ ವಕ್ತಾರ ಸಿ.ಎಂ. ದ್ಯಾವಪ್ಪ, ಕಾರ್ಮಿಕ ವಿಭಾಗದ ಅಧ್ಯಕ್ಷ ರಾಮಕೃಷ್ಣ, ಪರಿಶಿಷ್ಟ ಜಾತಿ ವಿಭಾಗದ ವಿಜಯ್ ಕುಮಾರ್, ಸೋನಿಯಾ ಬ್ರಿಗೇಡ್‌ನ ವೀಣಾ ಶಂಕರ್, ಲಕ್ಷ್ಮಣ್ ಹಾಗೂ ಉದಯಕುಮಾರ್ ಇದ್ದರು.

# ಪಾಕ್ ಜತೆ ಸೂಕ್ಷ್ಮ ಮಾಹಿತಿ ಹಂಚಿಕೊಂಡ ಮಾಜಿ ಸೇನಾಧಿಕಾರಿ, ಮಹಿಳೆ ಬಂಧನ

**ಅಹಮದಾಬಾದ್:** ಪಾಕಿಸ್ತಾನಿ ಏಜೆಂಟ್‌ಗಳೊಂದಿಗೆ ಭಾರತದ ಮಿಲಿಟರಿ ಬಗ್ಗೆ ಮತ್ತು ಸಿಬ್ಬಂದಿಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಹಂಚಿಕೊಂಡ ಆರೋಪದ ಮೇಲೆ ನಿವೃತ್ತ ಸೇನಾ ಅಧಿಕಾರಿ ಮತ್ತು ಮಹಿಳೆಯನ್ನು ಗುಜರಾತ್ ಭಯೋತ್ಪಾದನಾ ನಿಗ್ರಹ ದಳ ಬಂಧಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಾರತೀಯ ಸೇನೆಯ ರೆಜಿಮೆಂಟ್‌ಗಳ ಚಲನವಲನ ಮತ್ತು ಪ್ರಮುಖ ಮಿಲಿಟರಿ ಅಧಿಕಾರಿಗಳ ವರ್ಗಾವಣೆಯ ಬಗ್ಗೆ ಮಾಹಿತಿ ನೀಡುವಂತೆ ಪಾಕಿಸ್ತಾನದ ಗುಪ್ತಚರ ಅಧಿಕಾರಿಯೊಬ್ಬರು ಬಂಧಿತ ಆರೋಪಿ ಅಜಯ್ ಕುಮಾರ್ ಸಿಂಗ್ ಅವರನ್ನು ಸಂಪರ್ಕಿಸಿದ್ದಾರೆ. ಈ ಸಂಬಂಧ ಮತ್ತೊಬ್ಬ ಆರೋಪಿ ರಶ್ಮಣಿ ಪಾಲ್ ಅವರನ್ನು ಕೆಲವು ವ್ಯಕ್ತಿಗಳನ್ನು ಹನಿಟ್ರ್ಯಾಪ್ ಮಾಡುವಂತೆ ಹೇಳಲಾಗಿತ್ತು ಎಂದು ಅವರು ತಿಳಿಸಿದ್ದಾರೆ. 2022 ರಲ್ಲಿ ನಿವೃತ್ತಿ ಹೊಂದಿದ ಬಿಹಾರ ಮೂಲದ ಸಿಂಗ್(47) ಅವರನ್ನು ಗೋವಾದಲ್ಲಿ ಬಂಧಿಸಲಾಗಿದೆ. ಅಲ್ಲಿ ಅವರು ಡಿಸ್ಟಿಲರಿಯಲ್ಲಿ ಕೆಲಸ ಮಾಡುತ್ತಿದ್ದರು.

ಇನ್ನು ಉತ್ತರ ಪ್ರದೇಶದ ಪಾಲ್(35) ಅವರನ್ನು ಕೇಂದ್ರಾಡಳಿತ ಪ್ರದೇಶವಾದ ದಮನ್‌ನಲ್ಲಿ ಬಂಧಿಸಿ ಕರೆದೊಯ್ಯಲಾಯಿತು. ಅಲ್ಲಿ ಅವರು ಖಾಸಗಿ ಟ್ಯೂಷನ್ ತೆಗೆದುಕೊಳ್ಳುತ್ತಿದ್ದರು ಎಂದು ಎಟಿಎಸ್ ಹೇಳಿದೆ. 'ಅಂಕಿತಾ ಶರ್ಮಾ' ಎಂದು ತನ್ನನ್ನು ತಾನು ಗುರುತಿಸಿಕೊಂಡ ಪಾಕಿಸ್ತಾನಿ ಗುಪ್ತಚರ ಅಧಿಕಾರಿಯೊಬ್ಬರು, ಸಿಂಗ್ ಅವರೊಂದಿಗೆ ಸಂಪರ್ಕದಲ್ಲಿದ್ದರು ಎಂದು ಎನ್‌ಐಎ ತಿಳಿಸಿದೆ.'ಪ್ರಿಯಾ ಠಾಕೂರ್' ಎಂಬ ನಕಲಿ ಗುರುತಿನಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಾಲ್, ತನ್ನ ಪಾಕಿಸ್ತಾನಿ ನಿರ್ವಾಹಕರ ಆದೇಶದ ಮೇರೆಗೆ ಮಿಲಿಟರಿ ಸಿಬ್ಬಂದಿಯೊಂದಿಗೆ ಸ್ನೇಹ ಬೆಳೆಸುವ ಮೂಲಕ ಅವರಿಂದ ಮಾಹಿತಿಯನ್ನು ಹೊರತೆಗೆಯಲು ಯತ್ನಿಸಿದ್ದಾರೆ ಎಂದು ಹೇಳಿದ್ದಾರೆ.



# ದೂರದೃಷ್ಟಿಯ ನಾಯಕ ಚಿಕ್ಕದೇವರಾಜ ಒಡೆಯರ್



**ಕನ್ನಡ ಎನೆ ಕುಣಿದಾಡುವುದೆನ್ನೆದೆ**
**ಕನ್ನಡ ಎನೆ ಕಿವಿ ನಿಮಿರುವುದು ।**
**ಕಾಮನ ಬಿಲ್ಲನು ಕಾಣುವ ಕವಿಯೊಳು**
**ತೆಕ್ಕನೆ ಮನ ಮೈ ಮರೆಯುವುದು**

**ಕನ್ನಡ ಕನ್ನಡ ಹ! ಸವಿಗನ್ನಡ**
**ಕನ್ನಡದಲಿ ಹರಿ ಬರೆಯುವನು**
**ಕನ್ನಡದಲಿ ಹರ ತಿರಿಯುವನು**

**ಕನ್ನಡದಲ್ಲಿಯೇ ಬಿನ್ನಹ ಗೈದೊಡೆ**
**ಹರಿ ವರಗಳ ಮಳೆ ಕರೆಯುವನು**
**ಹರ ಮುರಿಯದೆ ತಾ ಪೊರೆಯುವನು**

**ಬಾಳುಹುದೇತಕೆ ನುಡಿ, ಎಲೆ ಜೀವ**
**ಸಿರಿಗನ್ನಡದಲಿ ಕವಿತೆಯ ಹಾಡೆ**
**ಸಿರಿಗನ್ನಡದೇಳಿಗೆಯನು ನೋಡೆ**
**ಕನ್ನಡ ತಾಯಿಯ ಸೇವೆಯ ಮಾಡೆ**

ಮೈಸೂರು ಸಂಸ್ಥಾನದ ಇತಿಹಾಸದಲ್ಲಿ ಪ್ರಮುಖರಾದ ಚಿಕ್ಕದೇವರಾಜ ಒಡೆಯರ್, ಹಿಂದಿನ ಮೈಸೂರು ಸಂಸ್ಥಾನದ ಅತ್ಯಂತ ಸಮರ್ಥ ರಾಜರಲ್ಲಿ ಒಬ್ಬರು. ಬೆಂಗಳೂರನ್ನು ಮೊಗಲರಿಂದ ಕೊಂಡು ಕೊಂಡು ಕನ್ನಡ ನಾಡಿಗೆ ಉಳಿಸಿ ಕೊಟ್ಟವರು. ರಾಜ್ಯದ ರಕ್ಷಣೆ, ಪ್ರಜೆಗಳ ಯೋಗಕ್ಷೇಮ ಎರಡಕ್ಕೂ ವಿಶೇಷ ಗಮನ ಕೊಟ್ಟವರು. ದಕ್ಷ ಆಡಳಿತಗಾರ. ನವಕೋಟಿ ನಾರಾಯಣ, ರಾಜಾ ಜಗದೇವರಾಯ ಎಂದು ಹೊಗಳಿಸಿಕೊಂಡ ಉಜ್ವಲ ವ್ಯಕ್ತಿ.

ಚಿಕ್ಕದೇವರಾಜ ಒಡೆಯರ್ ಅವರು ಮೈಸೂರಿನ ಒಡೆಯರ್ ರಾಜವಂಶದ ಪ್ರಮುಖ ಮತ್ತು ಅತ್ಯಂತ ಶಕ್ತಿಶಾಲಿ ಅರಸರಲ್ಲಿ ಒಬ್ಬರು. ಇವರ ಆಳ್ವಿಕೆಯ ಅವಧಿಯನ್ನು ಮೈಸೂರು ಇತಿಹಾಸದ "ಸುವರ್ಣಯುಗ" ಎಂದು ಪರಿಗಣಿಸಲಾಗುತ್ತದೆ.


ಪ್ರಮುಖ ಪರಿಚಯ

**ಆಳ್ವಿಕೆಯ ಅವಧಿ: ಕ್ರಿ.ಶ. 1673 ರಿಂದ 1704 ರವರೆಗೆ.**

ರಾಜ್ಯ ವಿಸ್ತರಣೆ: ಮೈಸೂರು ರಾಜ್ಯವನ್ನು ಪೂರ್ವ, ಪಶ್ಚಿಮ, ಉತ್ತರ ಮತ್ತು ದಕ್ಷಿಣದತ್ತ ವಿಸ್ತರಿಸಿ ಬಲಪಡಿಸಿದರು.

ಚೆನ್ನಪಟ್ಟಣ, ಕೋಲಾರ, ಮಾಗಡಿ, ಮತ್ತು ತುಮಕೂರು ಪ್ರದೇಶಗಳನ್ನು ರಾಜ್ಯದೊಳಗೆ ಸೇರಿಸಿದರು.

- **ರಾಜಧಾನಿ ಬದಲಾವಣೆ**: ಹಳೆಯ ರಾಜಧಾನಿಯಾಗಿದ್ದ ಮೈಸೂರು ನಗರದಿಂದ ಹೊಸ ರಾಜಧಾನಿಯನ್ನು ಶ್ರೀರಂಗಪಟ್ಟಣ–ಕ್ಕೆ ವರ್ಗಾಯಿಸಿದರು. ಇದು ನಂತರದ ಹೈದರಾಲಿಟಿಪ್ಪು ಸುಲ್ತಾನರ ಕಾಲದಲ್ಲೂ ಮಹತ್ವದ ಆಡಳಿತ ಕೇಂದ್ರವಾಯಿತು.
- **ನ್ಯಾಯಪ್ರಿಯತೆ**: ನ್ಯಾಯ ಮತ್ತು ಶಿಸ್ತಿನ ವಿಚಾರದಲ್ಲಿ ಅವರು ಕಠಿಣರಾಗಿದ್ದರು.





ಕಳ್ಳತನ, ಲಂಚ, ಮತ್ತು ಅನ್ಯಾಯಕ್ಕೆ ಅವಕಾಶ ನೀಡದ ರಾಜನಾಗಿದ್ದರು. ಅವರ ಕಾಲದಲ್ಲಿ ಧರ್ಮಾಧಾರಿತ ಆಡಳಿತ ಎಂಬ ಧೋರಣೆಯು ಮುಖ್ಯವಾಗಿತ್ತು. ದಕ್ಷಿಣ ಕರ್ನಾಟಕದ ದೊಡ್ಡ ಪ್ರದೇಶಗಳನ್ನು, ಹಾಗೆಯೇ ತಮಿಳುನಾಡಿನ ಕೆಲವು ಭಾಗಗಳನ್ನು (ಉದಾ: ಪಳನಿ ಮತ್ತು ಆನೆಮಲೆ ಪ್ರದೇಶಗಳವರೆಗೆ) ವಶಪಡಿಸಿಕೊಂಡು ಮೈಸೂರನ್ನು ದಕ್ಷಿಣ ಭಾರತದ ಪ್ರಬಲ ಶಕ್ತಿಯನ್ನಾಗಿ ಮಾಡಿದರು. ಇವರು ಕೆಳದಿಯ ರಾಣಿ ಚೆನ್ನಮ್ಮಾಜಿಯೊಂದಿಗೆ ಸಹ ಹೋರಾಡಿ ಕೆಲವು ಪ್ರದೇಶಗಳನ್ನು ವಶಪಡಿಸಿಕೊಂಡಿದ್ದರು.

**ರಾಜತಾಂತ್ರಿಕತೆ:** ಮೊಘಲರು ಮತ್ತು ಮರಾಠರಂತಹ ಪ್ರಬಲ ಶಕ್ತಿಗಳೊಂದಿಗೆ ಜಾಣ್ಮೆಯ ಮೈತ್ರಿ ಮಾಡಿಕೊಂಡು ತಮ್ಮ ರಾಜ್ಯವನ್ನು ಉಳಿಸಿಕೊಂಡರು ಮತ್ತು ವಿಸ್ತರಿಸಿದರು. 1700 ರಲ್ಲಿ, ಮೊಘಲ್ ಚಕ್ರವರ್ತಿ ಔರಂಗಜೇಬನಿಗೆ ವಾರ್ಷಿಕ ಕಪ್ಪವನ್ನು (ಕಾಣಿಕೆ) ಸಲ್ಲಿಸಲು ಒಪ್ಪಿಕೊಂಡು ಮೊಘಲರೊಂದಿಗೆ ಔಪಚಾರಿಕ ಸಂಬಂಧವನ್ನು ಸ್ಥಾಪಿಸಿದರು. ಅರಬ್ಬಿ, ಪರ್ಷಿಯನ್ ಮತ್ತು ಯೂರೋಪಿಯನ್ ವ್ಯಾಪಾರಿಗಳೊಂದಿಗೆ ವ್ಯಾಪಾರ ಸಂಪರ್ಕ ಬೆಳೆಸಿದರು.

**ಆಡಳಿತಾತ್ಮಕ ಕೊಡುಗೆಗಳು (ಅಠಾರ ಕಛೇರಿ)**

ಚಿಕ್ಕದೇವರಾಜ ಒಡೆಯರ್ ಅವರು ತಮ್ಮ ಆಡಳಿತ ಸುಧಾರಣೆಗಳಿಗೆ ಬಹಳ ಪ್ರಸಿದ್ಧರು.

- **18 ಇಲಾಖೆಗಳ ಸ್ಥಾಪನೆ ('ಅಠಾರ ಕಛೇರಿ'): ಮೊಘಲರ ಆಸ್ಥಾನದಿಂದ ಪ್ರೇರಿತರಾಗಿ, ಇವರು ಆಡಳಿತವನ್ನು ಹದಿನೆಂಟು ಇಲಾಖೆಗಳಾಗಿ ('ಅಠಾರ ಕಛೇರಿ') ವಿಭಜಿಸಿ, ದಕ್ಷ ಮತ್ತು ಕೇಂದ್ರೀಕೃತ ಆಡಳಿತ ವ್ಯವಸ್ಥೆಯನ್ನು ಜಾರಿಗೆ ತಂದರು.**
- **ಇದು ಆಡಳಿತದಲ್ಲಿ ಸ್ಪಷ್ಟತೆ ಮತ್ತು ಶಿಸ್ತನ್ನು ತಂದು, ತೆರಿಗೆ ಸಂಗ್ರಹಣೆ ಮತ್ತು ಕಾನೂನು ಪಾಲನೆಯನ್ನು ಬಲಪಡಿಸಿತು.**
- **ಕಂದಾಯ ಸುಧಾರಣೆ**: ಆರ್ಥಿಕ ಸ್ಥಿರತೆಗಾಗಿ ಕಂದಾಯ ವ್ಯವಸ್ಥೆಯನ್ನು ಸುಧಾರಿಸಿದರು.
- **ಗೋದಾಮು ವ್ಯವಸ್ಥೆ**: ಧಾನ್ಯಗಳ ಕೊರತೆಯನ್ನು ನಿಭಾಯಿಸಲು ಮತ್ತು ಬೆಲೆಗಳನ್ನು ನಿಯಂತ್ರಿಸಲು ಗೋದಾಮು ವ್ಯವಸ್ಥೆಯನ್ನು ಸ್ಥಾಪಿಸಿದರು.
- **ನಾಣ್ಯ ಪದ್ಧತಿ**: ತಮ್ಮದೇ ಆದ ನಾಣ್ಯಗಳನ್ನು (ದೇವ ರಾಜ ಹಳೆಯ ಪಗೋಡಗಳು ಮತ್ತು ವೀಳೇದೆಲೆ ಕಾಸು) ಚಲಾವಣೆಗೆ ತಂದರು.
- **ಸಾಹಿತ್ಯ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ**
- **ಚಿಕ್ಕದೇವರಾಜ ಒಡೆಯರ್ ಸ್ವತಃ ವಿದ್ವಾಂಸರೂ, ಕವಿಗಳೂ ಆಗಿದ್ದರು.**
- **ಕವಿಗಳು ಮತ್ತು ವಿದ್ವಾಂಸರನ್ನು ಪೋಷಿಸಿದರು. ತಿರುಮಲಾರ್ಯ ಮತ್ತು ಚಿಕ್ಕದೇವರಾಜ ವಿಜಯ ಮುಂತಾದ ಕೃತಿಗಳು ಇವರ ಕಾಲದ ಸಾಹಿತ್ಯಕ್ಕೆ ಉದಾಹರಣೆಗಳಾಗಿವೆ.**

ಅವರ ಕಾಲದಲ್ಲಿ ಕಾವ್ಯ, ಸಂಗೀತ, ನೃತ್ಯ ಮತ್ತು ಶಾಸ್ತ್ರೀಯ ಕಲೆಗಳು ವಿಶಾಲವಾಗಿ ಬೆಳೆದುವು.

ಅವರು ಸ್ವತಃ ಚಿಕ್ಕದೇವರಾಜ ವಿಜಯಂ ಎಂಬ ಕಾವ್ಯವನ್ನು ರಚಿಸಿದ್ದರೆಂಬ ಪ್ರಚಾರವಿದೆ.



**ರೂಪ ಮಂಜುನಾಥ**
**ಹೊಳೆನರಸೀಪುರ**

ಮೈಸೂರಿನ ದರ್ಬಾರು ಕವಿಗಳ ಮನೆ ಎಂದು ಪ್ರಸಿದ್ಧಿ ಪಡೆದಿತು.

ಕವಿ ತಿಮ್ಮರಾಜ, ಕವಿ ಲಕ್ಷ್ಮೀಶ, ರಾಮಭದ್ರ ದೀಕ್ಷಿತ, ವೀರರಾಘವಕವಿ ಮುಂತಾದ ಪಂಡಿತರಿಗೆ ಆಶ್ರಯ ನೀಡಿದ್ದರು.

ಚಿಕ್ಕದೇವರಾಜ ಒಡೆಯರ್ ರವರು ವೈಷ್ಣವ ಮತದ ಭಕ್ತರಾಗಿದ್ದು, ಶ್ರೀರಂಗನಾಥ ದೇವರ ಪರಮಭಕ್ತರು.

ಅವರು ಅನೇಕ ದೇವಸ್ಥಾನಗಳನ್ನು ಕಟ್ಟಿಸಿದರು ಅಥವಾ ಪುನರ್‌ನಿರ್ಮಿಸಿದರು.

ಅದರಲ್ಲಿಯೂ ಶ್ರೀರಂಗಪಟ್ಟಣದ ರಂಗನಾಥಸ್ವಾಮಿ ದೇವಾಲಯ ಅವರ ಕಾಲದಲ್ಲಿಯೇ ವಿಶೇಷವಾಗಿ ಅಭಿವೃದ್ಧಿಯಾಯಿತು.ಅವರು ವಿವಿಧ ಧರ್ಮಗಳಿಗೂ ಸಹಾನುಭೂತಿಯನ್ನು ತೋರಿದರು ಇದು ಅವರನ್ನು ಜನಪ್ರಿಯ ರಾಜನನ್ನಾಗಿಸಿತು.

ವಾಸ್ತುಶಿಲ್ಪ ಮತ್ತು ನಿರ್ಮಾಣಗಳು

ಲಲಿತ ಮಹಲ್, ಅಂಬಾವಿಲಾಸ ಅರಮನೆಗಳ ಮೊದಲ ಹಂತದ ನಿರ್ಮಾಣಗಳು ಅವರ ಕಾಲದಲ್ಲೇ ಪ್ರಾರಂಭವಾದವು. ಅನೇಕ ಕೆರೆ, ದೇವಾಲಯ, ಮಂಟಪ ಮತ್ತು ಮಂದಿರಗಳು ಅವರ ಕಾಲದಲ್ಲಿ ನಿರ್ಮಿಸಲ್ಪಟ್ಟುವು.

ಶ್ರೀರಂಗಪಟ್ಟಣವನ್ನು ಸಾಂಸ್ಕೃತಿಕ ಮತ್ತು ಆಡಳಿತಾತ್ಮಕ ಕೇಂದ್ರವನ್ನಾಗಿ ರೂಪಿಸಿದರು.

ಸಂಕ್ಷಿಪ್ತವಾಗಿ ಹೇಳುವುದಾದರೆ, ಚಿಕ್ಕದೇವರಾಜ ಒಡೆಯರ್ ಅವರು ಮೈಸೂರು ಸಂಸ್ಥಾನಕ್ಕೆ ರಾಜಕೀಯ ಸ್ಥಿರತೆ ಮತ್ತು ಭದ್ರ ಅಡಿಪಾಯವನ್ನು ಹಾಕಿಕೊಟ್ಟ ದೂರದೃಷ್ಟಿಯ ನಾಯಕ. ಇಂಥ ಮುತ್ಸದ್ದಿ ನಾಯಕ ಕರುನಾಡಿನ ಪುತ್ರ ಎಂದು ಹೇಳುವುದರಲ್ಲಿ ನಮಗೂ ಹೆಮ್ಮೆ ಇದೆ. ಕರುನಾಡ ತಾಯಿ ಇಂಥ ವೀರಪುತ್ರರಿಂದ ಸದಾ ಚಿನ್ಮಯಿ!ವಂದನೆಗಳು.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# ಬಿಡುಗಡೆಯಾಯಿತು ನವೀನ್ ಸಜ್ಜು ಅಭಿನಯದ "ಲೋ ನವೀನ" ಚಿತ್ರದ "ಕೋಣಾಣೆ" ಹಾಡು

ಗಾಯಕನಾಗಿ ಕನ್ನಡಿಗರ ಮನ ಗೆದ್ದಿರುವ ನವೀನ್ ಸಜ್ಜು ನಾಯಕನಾಗಿ ನಟಿಸಿರುವ ಮೊದಲ ಚಿತ್ರ "ಲೋ ನವೀನ". ಇತ್ತೀಚೆಗೆ ಈ ಚಿತ್ರದ "ಕೋಣಾಣೆ" ಹಾಡಿನ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ಮಾಜಿ ಶಾಸಕರಾದ ಎ.ಮಂಜು, ಪುಟ್ಟರಾಜು, ಅಮರನಾಥ ಗೌಡ, ವಿಶ್ವಾಮಿತ್ರ, ಜಿ.ಟಿ.ಮಾಲ್ ನ ಆನಂದ್, ಸಂಗೀತ ನಿರ್ದೇಶಕ ಪೂರ್ಣಚಂದ್ರ ತೇಜಸ್ವಿ ಮುಂತಾದ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದು, ಹಾಡು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಅಪ್ಪಟ ಜನಪದ ಶೈಲಿಯ ಈ ಹಾಡನ್ನು ಮೈಸೂರಿನ ಎಚ್ ಡಿ ಕೋಟೆಯ ಗ್ರಾಮೀಣ ಪ್ರತಿಭೆಗಳಾದ ಚಮ್ಮಮ್ಮ ಹಾಗೂ ಲಕ್ಷ್ಮಮ್ಮ ಹಾಡಿದ್ದಾರೆ. ನವೀನ್ ಸಜ್ಜು ಸಹ ಗಾಯನಕ್ಕೆ ಜೊತೆಯಾಗಿದ್ದಾರೆ. ಅನಿವಾಸಿ ಭಾರತೀಯರಾದ ಬೆನ್ ಚಿಕ್ಕಸ್ವಾಮಿ ಅರ್ಪಿಸುವ , ಕೀರ್ತಿಸ್ವಾಮಿ ನಿರ್ಮಿಸಿರುವ ಹಾಗೂ ಧನುರ್ಧಾರಿ ಪವನ್ ನಿರ್ದೇಶನದ "ಲೋ ನವೀನ" ಚಿತ್ರದ ಮೊದಲ ಹಾಡು ಇದ್ದಾಗಿದ್ದು, ಆನಂದ್ ಆಡಿಯೋ ಯೂಟ್ಯೂಬ್ ಚಾನಲ್ ನಲ್ಲಿ ಲಭ್ಯವಿದೆ.

ಹಾಡು ಬಿಡುಗಡೆ ಸಮಾರಂಭದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಮೂಲತಃ ಮಳವಳ್ಳಿಯವನಾದ ನಾನು, ಆರ್ಕೆಸ್ಟ್ರಾದಲ್ಲಿ ಹಾಡುತ್ತಿದ್ದೆ. ನನ್ನ ಪ್ರತಿಭೆ ಗುರುತಿಸಿದ್ದ ಸಂಗೀತ ನಿರ್ದೇಶಕ ಪೂರ್ಣಚಂದ್ರ ತೇಜಸ್ವಿ ಹಾಗೂ ನಿರ್ದೇಶಕ ಪವನ್ ಕುಮಾರ್ "ಲೂಸಿಯಾ" ಚಿತ್ರದಲ್ಲಿ ಅವಕಾಶ ಕೊಟ್ಟರು. ಅಲ್ಲಿಂದ ನನ್ನ ಜರ್ನಿ ಆರಂಭವಾಯಿತು. ಆನಂತರ ಸಾಕಷ್ಟು ಚಿತ್ರಗಳಲ್ಲಿ ಹಾಡಿದ್ದೇನೆ. ನಾನು, ಸುನೀಲ್ ಮೈಸೂರು ಹಾಗೂ ಅನೇಕ ಸ್ನೇಹಿತರು ಸೇರಿ ಮನೋರಂಜನೆಯೇ ಪ್ರಧಾನವಾಗಿರುವ ಈ ಚಿತ್ರದ ಕಥೆ ಬರೆದಿದ್ದೇವೆ. ಅಮೇರಿಕಾಗೆ ಒಮ್ಮೆ ಹೋಗಿದ್ದಾಗ ಬೆನ್ ಚಿಕ್ಕಸ್ವಾಮಿ ಹಾಗೂ ಕೀರ್ತಿಸ್ವಾಮಿ ಅವರನ್ನು ಭೇಟಿ ಮಾಡಿದೆ. ಅವರ ಬಳಿ ಈ ಚಿತ್ರದ ಬಗ್ಗೆ ಹೇಳಿದಾಗ ಅವರು ನಾವೇ ಚಿತ್ರಕ್ಕೆ ಬಂಡವಾಳ ಹೂಡುತ್ತೇವೆ ಎಂದರು. ಈಗ ಚಿತ್ರ ಬಿಡುಗಡೆ ಹಂತಕ್ಕೆ ಬಂದಿದೆ. ನಾನೇ ಸಂಗೀತ ಸಂಯೋಜಿಸಿರುವ ಐದು ಹಾಡುಗಳು ಈ ಚಿತ್ರದಲ್ಲಿದ್ದು, ಮೊದಲ ಹಾಡಾಗಿ "ಕೋಣಾಣೆ" ಬಿಡುಗಡೆಯಾಗಿದೆ. ಚಿತ್ರದ ಲೊಕೇಶನ್ ಹುಡುಕಾಟದ ಸಲುವಾಗಿ ಎಚ್ ಡಿ ಕೋಟೆಯ ಹಿರೇನಂದಿ ಗ್ರಾಮಕ್ಕೆ ಹೋಗಿದ್ದಾಗ ಅಲ್ಲಿ ಚಮ್ಮಮ್ಮ ಹಾಗೂ ಲಕ್ಷಮ್ಮ ಅವರು ಹೊಲದಲ್ಲಿ ಕೆಲಸ ಮಾಡುತ್ತಾ ಹಾಡುತ್ತಿದ್ದುದ್ದನ್ನು ನೋಡಿದೆ. ಇವರಿಂದ ನಮ್ಮ ಚಿತ್ರದ ಹಾಡೊಂದನ್ನು ಹಾಡಿಸಬೇಕು ಎಂದು ನಿರ್ಧರಿಸಿದೆ. ಅಂದುಕೊಂಡಂತೆ ಅವರಿಂದಲೇ ಈ ಹಾಡು ಹಾಡಿಸಿದ್ದೇನೆ.

ಆನಂದ್ ಆಡಿಯೋ ಮೂಲಕ ಈ ಹಾಡು ಬಿಡುಗಡೆಯಾಗಿದೆ. ಉಳಿದ ಹಾಡುಗಳು ಸದ್ಯದಲ್ಲೇ ಬಿಡುಗಡೆಯಾಗಲಿದೆ. ಹಾಡು ಬಿಡುಗಡೆ ಮಾಡಿಕೊಟ್ಟ ಗಣ್ಯರಿಗೆ ಹಾಗೂ ಚಿತ್ರತಂಡದ ಸದಸ್ಯರಿಗೆ ಧನ್ಯವಾದ ಎಂದರು ಚಿತ್ರದ ನಾಯಕ ಹಾಗೂ ಸಂಗೀತ ನಿರ್ದೇಶಕ ನವೀನ್ ಸಜ್ಜು.

ನಾನು ಬೆಂಗಳೂರಿನವಳು. ನನ್ನ ಪತಿ ಮಳವಳ್ಳಿಯವರು. ಮೂವತ್ತೈದು ವರ್ಷಗಳಿಂದ ಅಮೇರಿಕಾದಲ್ಲಿದ್ದೇವೆ. ಅಲ್ಲೂ ಸಾಕಷ್ಟು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತೇವೆ. ನಮಗೆ ಕನ್ನಡ ಎಂದರೆ ಬಹಳ ಪ್ರೀತಿ. ಹೀಗೆ ಕಾರ್ಯಕ್ರಮವೊಂದರಲ್ಲಿ ನವೀನ್ ಸಜ್ಜು ಅವರನ್ನು ಭೇಟಿಯಾದಾಗ ಈ ಚಿತ್ರದ ಕುರಿತು ಹೇಳಿದರು. ಹಳ್ಳಿಯ ಸೊಗಡಿನ ಕಥೆ ಇಷ್ಟವಾಗಿ ನಿರ್ಮಾಣಕ್ಕೆ ಮುಂದಾದೆವು ಎಂದು ನಿರ್ಮಾಪಕಿ ಕೀರ್ತಿ ಸ್ವಾಮಿ ತಿಳಿಸಿದರು.

ನಾನು ಮಳವಳ್ಳಿಯವನು. ಚಿಕ್ಕವಯಸ್ಸಿನಲ್ಲೇ ಇದೇ ತರಹದ ಗ್ರಾಮೀಣ ಜನಪದ ಹಾಡುಗಳನ್ನು ಕೇಳುತ್ತಾ ಬೆಳೆದವನು. ನಲವತ್ತು ವರ್ಷಗಳಿಂದ ಅಮೇರಿಕಾದಲ್ಲಿದ್ದರೂ ಕನ್ನಡವನ್ನೇ ಮಾತನಾಡುತ್ತೇನೆ. ದಿನ ಮುದ್ದೆ , ಉಪ್ಸಾರು ತಿನ್ನುತ್ತೇನೆ. ನಮ್ಮ ಮನೆಗೆ ಬಂದವರಿಗೂ ನಾನೇ ಮಾಡಿ ಕೊಡುತ್ತೇನೆ. ಹಾಗಾಗಿ ನವೀನ್ ಸಜ್ಜು ಹಳ್ಳಿಯ ಸೊಗಡಿನ ಕಥೆ ಹೇಳಿದಾಗ ಬಹಳ ಖುಷಿಯಾಯಿತು ಎಂದು ನಿರ್ಮಾಪಕ ಬೆನ್ ಚಿಕ್ಕಸ್ವಾಮಿ ಹೇಳಿದರು.

ಮೊದಲ ನಿರ್ದೇಶನದ ಚಿತ್ರ. ತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ ಎಂದು ನಿರ್ದೇಶಕ ಧನುರ್ಧಾರಿ ಪವನ್ ತಿಳಿಸಿದರು. ಛಾಯಾಗ್ರಾಹಕ ರಿಷಿಕೇಶ್ ಸೇರಿದಂತೆ ಚಿತ್ರತಂಡದ ಸದಸ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸಮಾರಂಭಕ್ಕೂ ಮುನ್ನ ನವೀನ್ ಸಜ್ಜು ಅನೇಕ ಜನಪ್ರಿಯ ಗೀತೆಗಳನ್ನು ಹಾಡಿ ನೆರೆದಿದವರನ್ನು ರಂಜಿಸಿದರು.

# ಮರಳಿ ಮನಸಾಗಿದೆ ಚಿತ್ರದ ಟೀಸರ್ ಬಿಡುಗಡೆ



ದಾವಣಗೆರೆಯ ಮುದೇಗೌಡ್ರು ನವೀನ್ ಕುಮಾರ್ ಆರ್. ಓ ಹಾಗೂ ತೆಲಿಗಿ ಮಲ್ಲಿಕಾರ್ಜುನಪ್ಪ ಅವರ ನಿರ್ಮಾಣದಲ್ಲಿ ಕಾರ್ಕಳದ ನಾಗರಾಜ್ ಶಂಕರ್ ಅವರ ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನದಲ್ಲಿ ಮೂಡಿಬಂದಿರುವ 'ಮರಳಿ ಮನಸಾಗಿದೆ' ಕನ್ನಡ ಚಲನಚಿತ್ರದ ಟೀಸರ್ ಬಿಡುಗಡೆ ಆಗಿದೆ..

ವಿರಕ್ತಮಠದ ಶ್ರೀ ಗಳು ಹಾಗೂ ಉದ್ಯಮಿ ಅಣಬೇರು ರಾಜಣ್ಣ ಮಾತನಾಡಿ ಟೀಸರ್ ಗಮನಿಸಿದರೆ ಯುವ ಜನರ ಮನಸ್ಸನ್ನು ಸೆಳೆಯುವಲ್ಲಿ ಯಶಸ್ವಿಯಾಗಲಿದೆ. ಯುವಕರಲ್ಲಿ ಉತ್ಸಾಹ ಮೂಡಿಸುವ ಚಿತ್ರ ಇದಾಗಿದೆ ಅಂದರು. ಚಿತ್ರದ ನಿರ್ಮಾಪಕ ಮುದೇಗೌಡ್ರ ನವೀನ್, ತೆಲಗಿ ಮಲ್ಲಿಕಾರ್ಜುನಪ್ಪ, ನಾಯಕ ನಟ ಅರ್ಜುನ್ ವೇದಾಂತ್, ನಾಯಕಿ ನಟಿ ಸ್ಮೃತಿ ವೆಂಕಟೇಶ್, ನಿರ್ದೇಶಕ ನಾಗರಾಜ್ ಶಂಕರ್, ವಿಜಯ್ ಕುಮಾರ್ ಎಸ್, ಹರೀಶ್ ಎಸ್. ಎಂ ಹಾಗೂ ಸಂಜಯ್ ಉಮ್ರಾನಿ ಅವರು, ಚಿತ್ರದ ಟೀಸರ್ ಬಿಡುಗಡೆಗೆ

ಎಲ್ಲರ ಸಹಕಾರವನ್ನು ಕೃತಜ್ಞತಾ ಭಾವದಿಂದ ಸ್ಮರಿಸಿದರು. ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವಂತೆ ಮನವಿ ಮಾಡಿದರು.

# ಮೂಷಿಕವಾಹನನ ಸನ್ನಿಧಿಯಲ್ಲಿ "ಮುಜುಗರ"



ಹಿರಿಯ ನಟ ರಾಜೇಶ ರ ಮೊಮ್ಮಗ ಸಾಯಿನಂದ್ "ಮುಜುಗರ" ಚಿತ್ರದ ಮೂಲಕ ನಾಯಕನಾಗಿ ಅಡಿಯಿಟ್ಟಿದ್ದಾರೆ. ಶಾಂತ ಶ್ರೀನಿವಾಸ್ ಡಿ ನಿರ್ಮಿಸುತ್ತಿರುವ ಈ ಚಿತ್ರವನ್ನು ತರುಣ್ ಎನ್ ನಿರ್ದೇಶಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುಹೂರ್ತ ನೆರವೇರಿತು. ಚಿತ್ರದ ಮೊದಲ ಸನ್ನಿವೇಶಕ್ಕೆ ನಟ ಪ್ರಮೋದ್ ಶೆಟ್ಟಿ ಆರಂಭ ಫಲಕ ತೋರಿದರು.

ನಿರ್ಮಾಪಕಿ ಶಾಂತ ಶ್ರೀನಿವಾಸ್ ಕ್ಯಾಮೆರಾ ಚಾಲನೆ ಮಾಡಿದರು. ನಂತರ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು.

ನನಗೂ, ಚಿತ್ರರಂಗಕ್ಕೂ 20 ವರ್ಷಗಳ ನಂಟು. ನಾಗಾಭರಣ, ಅನಂತರಾಜು, ಅಮರ್ ಹಾಗೂ "ಕಂಠಿ" ಭರತ್ ಅವರ ಬಳಿ ನಿರ್ದೇಶನ ವಿಭಾಗದಲ್ಲಿ ಕೆಲಸ ಮಾಡಿದ್ದೇನೆ. ಸ್ವತಂತ್ರ ನಿರ್ದೇಶಕನಾಗಿ ಇದು ಮೊದಲ ಚಿತ್ರ. "ಮುಜುಗರ" ಕಾಫಿತೋಟದ ಸುತ್ತ ನಡೆಯುವ ಪ್ರೇಮ ಕಥೆ. ಸಾಯಿನಂದ್ ನಾಯಕನಾಗಿ, ನಿಮಿಷ್ಕ ಹಾಗೂ ತನು ನಾಯಕಿಯರಾಗಿ ಅಭಿನಯಿಸುತ್ತಿದ್ದಾರೆ. ಎರಡನೇ ನಾಯಕನಾಗಿ ಸುಭಾಷ್ ಹಾಗೂ ವಿಲನ್ ಪಾತ್ರದಲ್ಲಿ ಪ್ರಮೋದ್ ಶೆಟ್ಟಿ ಕಾಣಿಸಿಕೊಳ್ಳಲಿದ್ದಾರೆ. ಡಿಸೆಂಬರ್ 15 ರಿಂದ ಸಕಲೇಶಪುರ, ಚಿಕ್ಕಮಗಳೂರು, ಹೊರನಾಡು, ಕಳಸ, ಮಡಿಕೇರಿ ಮುಂತಾದ ಕಡೆಯ ಚಿತ್ರೀಕರಣ ನಡೆಯಲಿದೆ. ಜೈ ಆನಂದ್ ಛಾಯಾಗ್ರಹಣ, ಶ್ರೀಧರ್ ವಿ ಸಂಭ್ರಮ್ ಸಂಗೀತ ನಿರ್ದೇಶನ ಹಾಗೂ ಡಿಫರೆಂಟ್ ಡ್ಯಾನಿ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ ಎಂದು ನಿರ್ದೇಶಕ ತರುಣ್ ಎನ್ ತಿಳಿಸಿದರು.

ನಮ್ಮ ಸಂಸ್ಥೆಯಿಂದ "ಎಲ್ಲಿ ಆಡೋದು ನಾವು ಎಲ್ಲಿ ಆಡೋದು" ಎಂಬ ಮಕ್ಕಳ ಚಿತ್ರ ನಿರ್ಮಾಣ ಮಾಡಿದ್ದೆವು. ಆ ಚಿತ್ರಕ್ಕೆ ರಾಜ್ಯಪ್ರಶಸ್ತಿ ಬಂದಿದೆ. ಇದು ಎರಡನೇ ಚಿತ್ರ. ನಿರ್ದೇಶಕರು ಹೇಳಿದ ಕಥೆ ಇಷ್ಟವಾಗಿ ನಿರ್ಮಾಣ ಮಾಡುತ್ತಿದ್ದೇವೆ ಎಂದರು ನಿರ್ಮಾಪಕ ಶ್ರೀನಿವಾಸ್. ನಾನು ನಟನಾಗಲು ನನ್ನ ತಾತ ರಾಜೇಶ್ ರೇ ಸ್ಪೂರ್ತಿ. ನಾಗತಿಹಳ್ಳಿ ಚಂದ್ರಶೇಖರ್ ಅವರ ಟೆಂಟ್ ಶಾಲೆಯಲ್ಲಿ ಅಭಿನಯದ ಕೋರ್ಸ್ ಕಲಿತಿದ್ದೇನೆ. ನಾಯಕನಾಗಿ ಮೊದಲ ಚಿತ್ರ. ಪಾತ್ರ ಚೆನ್ನಾಗಿದೆ.ಅವಕಾಶ ನೀಡಿದ ನಿರ್ಮಾಪಕ ಹಾಗೂ ನಿರ್ದೇಶಕರಿಗೆ ನಾಯಕ ಸಾಯಿನಂದ್ ಧನ್ಯವಾದ ಹೇಳಿದರು. ನಾಯಕಿಯರಾದ ನಿಮಿಷ್ಕ, ತನು ತಮ್ಮ ಪಾತ್ರಗಳ ಬಗ್ಗೆ ಹೇಳಿಕೊಂಡರು. ಚಿತ್ರದಲ್ಲಿ ಐದು ಹಾಡುಗಳಿರುವುದಾಗಿ ಸಂಗೀತ ನಿರ್ದೇಶಕ ಶ್ರೀಧರ್ ವಿ ಸಂಭ್ರಮ್ ತಿಳಿಸಿದರು. ಛಾಯಾಗ್ರಹಣದ ಕುರಿತು ಜೈ ಆನಂದ್ ಮಾತನಾಡಿದರು.

# ರೋಚಕ ಕತೆಗೇ ತಿರುವು ಕೊಟ್ಟ ನಿರ್ದೇಶಕ!!



ಮಲೆನಾಡಿನ ರೋಚಕ ಕಥೆ ಗಳು ಎನ್ನುವ ಅದ್ಭುತ ಕಥಾನಕ ಒಂದು ಅನಾವರಣಗೊಂಡಿದೆ..

ಗಿರಿಮನೆ ಪ್ರಕಾಶನದ 19 ಕೃತಿಗಳು ಓದುಗರನ್ನು ವಿಸ್ಮಯ ಲೋಕಕ್ಕೆ ಕರೆದೊಯ್ಯುತ್ತದೆ.. ಲೇಖಕ ಸಾಹಿತಿ ಗಿರಿಮನೆ ಶಾಮರಾವ್ ಅವರ ಈ 19 ಕೃತಿಗಳನ್ನು ಓದಿ ಮುಗಿಸುವಷ್ಟರಲ್ಲಿ ನೀವೆಲ್ಲರೂ ಮಲೆನಾಡಿ ನಲ್ಲಿ ಅಡಿಯಿಂದ ಮುಡಿವರೆಗೆ ಸಂಚರಿಸಿದ ಆತ್ಮತೃಪ್ತಿ ಹೊಂದಿರುತ್ತೀರಿ.. ಇಂತಿಪ್ಪ ಕೃತಿಯಲ್ಲಿ ಒಂದು ಕೃತಿಯನ್ನು ಸಿನಿಮಾ ಮಾಡಲು ನಿರ್ದೇಶಕರು ಒಬ್ಬರು ಗಿರಿಮನೆ ಶಾಮರಾಯರ ಬಳಿ ಬಂದರಂತೆ.. ಚಿತ್ರೋದ್ಯಮದ ಭಾಷೆಯಲ್ಲಿ ಅವರೇನು ಮಾತನಾಡಿದರೋ ಸಾಹಿತ್ಯದ ಭಾಷೆಯಲ್ಲಿ ಇವರೇನು ಉತ್ತರಿಸಿದರೋ ಅದೆಲ್ಲ ಗೌಪ್ಯ.. ವ್ಯವಹಾರ ಸರಿದೂಗದ ಕಾರಣ ಕಾಫಿ ಕುಡಿದು ನಿರ್ದೇಶಕರು ವಾಪಸ್ ಹೊರಟರು..

ಮಲೆನಾಡಿನ ಜರಿಗಳಲ್ಲಿ ಅದೆಷ್ಟೋ ನೀರು ಹರಿದುಹೋಯಿತು.. ನಿರ್ದೇಶಕರು ಚಾಚೂ ತಪ್ಪದೇ ಪಾತ್ರಗಳನ್ನು ಅದಲು ಬದಲು ಕಂಚಿಕದಲು ಮಾಡಿ ದಿಗಂತದೆತ್ತರದ ನಾಯಕನನ್ನು ಹಾಕಿಕೊಂಡು ಸಿನಿಮಾ ಮಾಡೇ ಬಿಟ್ಟರಂತೆ.. ಪಾಪ ಈ ಸಾಹಿತಿ ಶಾಮರಾಯರಿಗೆ ಈ ವಿಷಯವೂ ತಿಳಿಯದು.. ಕೊನೆಗೆ ಇವರು ಆ ಸಿನಿಮಾ ನೋಡಿದಾಗ ತನ್ನದೇ ಕೂಸಿಗೆ ಬಟ್ಟೆ.. ಒಡವೆ..ಅಲಂಕಾರ ಇದ್ದ ಕಡೆ ತೆಗೆದು.. ಇಲ್ಲದ ಕಡೆಗೆ ಹಾಕಿ ಸಿನಿಮಾ ಮಾಡಿಬಿಟ್ಟಿದ್ದಾರೆ.. ಕೇಳಿದರೆ ಇದು ನನ್ನದೇ ಕಥೆ ಎಂದರಂತೆ.. ಮತ್ತೆ ಚಲನಚಿತ್ರ ವಾಣಿಜ್ಯ ಮಂಡಳಿಗೆ ದೂರು ಕೊಡುವುದು ನ್ಯಾಯಾಲಯದ ಮೆಟ್ಟಿಲು ಹತ್ತುವುದು ಇತ್ಯಾದಿ ಜಂಜಾಟದಲ್ಲಿ ಸಿಲುಕುವ ಬದಲು ನಾಲ್ಕು ಒಳ್ಳೆಯ ಕೃತಿಯನ್ನು ಕನ್ನಡಿಗರಿಗೆ ಕೊಡುವಾ ಎಂದು ಚಾಮರಾಯರು ಮತ್ತೆ ಲಾಪ್ ಟಾಪ್ ಹಿಡಿದರು... ಎಂಬಲ್ಲಿಗೆ ಚಿತ್ರರಂಗದ ಅಪಸವ್ಯವೊಂದು ಮಣ್ಣಲ್ಲಿ ಮಣ್ಣಾಯಿತು..

# ರೂಪ ಅಯ್ಯರ್ ನಿರ್ದೇಶನದ 'ಆಜಾದ್ ಭಾರತ್' ಜ. 2ಕ್ಕೆ



ನಟಿ, ನಿರ್ದೇಶಕಿ ರೂಪ ಅಯ್ಯರ್ ನಿರ್ದೇಶನದ "ಆಜಾದ್ ಭಾರತ್" ಚಿತ್ರ ಜನವರಿ 2 ರಂದು ದೇಶದಾದ್ಯಂತ ಬಿಡುಗಡೆಯಾಗುತ್ತಿದೆ.

ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು.

'ನೀರಾ ಆರ್ಯ' ಎಂಬ ಹೆಸರಿನಿಂದ ಆರಂಭವಾದ ಈ ಚಿತ್ರದ ಶೀರ್ಷಿಕೆಯನ್ನು "ಆಜಾದ್ ಭಾರತ್" ಎಂದು ಬದಲಿಸಲಾಗಿದೆ. ಈ ಚಿತ್ರವನ್ನು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರಿಗೆ ಅರ್ಪಣೆ ಮಾಡಲಾಗಿದೆ. ಸುಭಾಷ್ ಚಂದ್ರ ಬೋಸ್ ಸ್ಥಾಪಿಸಿದ್ದ ಮೊದಲ ಮಹಿಳಾ ಆರ್ಮಿಯ ಕಥೆ 'ಆಜಾದ್ ಭಾರತ್' ಚಿತ್ರದಲ್ಲಿದೆ. ನೇತಾಜಿ ಪಾತ್ರದಲ್ಲಿ ಬಾಲಿವುಡ್ ನಟ ಶ್ರೇಯಸ್ ತಲ್ಪಾಡೆ ಬಣ್ಣ ಹಚ್ಚಿದ್ದಾರೆ. ಈ ಚಿತ್ರದಲ್ಲಿ ಮೂರು ಮಹಿಳಾ ಮುಖ್ಯ ಪಾತ್ರಗಳಿದ್ದು, ನಾನು ನೀರಾ ಆರ್ಯ ಪಾತ್ರದಲ್ಲಿ, ಹಿತ ಚಂದ್ರಶೇಖರ್ ದುರ್ಗಾ ಪಾತ್ರದಲ್ಲಿ ನಟಿಸಿದ್ದೇವೆ. ಸರಸ್ವತಿ ರಾಜಾಮಣಿ ಎಂಬ ಪಾತ್ರದಲ್ಲಿ ಜನಪ್ರಿಯ ನಟಿಯೊಬ್ಬರು ಕಾಣಿಸಿಕೊಂಡಿದ್ದಾರೆ. ಸುರೇಶ್ ಒಬೆರಾಯ್, ಬಿರಾದಾರ್, ಸುಚೇಂದ್ರ ಪ್ರಸಾದ್, ಜೀ ವಾಹಿನಿಯ ಮುಖ್ಯಸ್ಥರಾದ ಸುಭಾಷ್ ಚಂದ್ರ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸಂಗೀತ ನಿರ್ದೇಶನವನ್ನು ನನ್ನ ಪತಿ ಗೌತಮ್ ಶ್ರೀವತ್ಸ ಮಾಡಿದ್ದಾರೆ. ಶ್ರೀ ಕ್ರೇಜಿ ಮೈಂಡ್ಸ್ ಅವರ ಸಂಕಲನವಿರುವ ಈ ಚಿತ್ರವನ್ನು ನಾನು, ಜಯಗೋಪಾಲ್ ಹಾಗೂ ರಾಜೇಂದ್ರ ರಾಜನ್ ನಿರ್ಮಿಸಿದ್ದೇವೆ. ಜನವರಿ ತಿಂಗಳನ್ನು ಸುಭಾಷ್ ಚಂದ್ರ ಬೋಸ್ ಅವರ ಜನ್ಮ ಮಾಸ ಎಂದು ಆಚರಿಸುತ್ತಾರೆ. ಹಾಗಾಗಿ ಜನವರಿ ಎರಡನೇ ತಾರೀಖು ಈ ಚಿತ್ರವನ್ನು ತೆರೆಗೆ ತರುತ್ತಿದ್ದೇವೆ. ಈ ಚಿತ್ರವನ್ನು ನಿರ್ಮಾಣ ಮಾಡುವ ಮೊದಲು ಸುಭಾಷ್ ಚಂದ್ರ ಬೋಸ್ ಅವರ ಕುಟುಂಬದವರನ್ನು ಸಂಪರ್ಕ ಮಾಡಿ ಅನೇಕ ಮಾಹಿತಿ ಪಡೆದುಕೊಂಡಿದ್ದೇನೆ. ರಾಜಕೀಯ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರಿಗೆ ಈ ಚಿತ್ರ ತೋರಿಸುವ ಯೋಚನೆ ಇದೆ. 2026 ರ ಜನವರಿ 2 ರಂದು ಜೀ ಸ್ಟುಡಿಯೋಸ್ ಮೂಲಕ ಈ ಚಿತ್ರ ಬಿಡುಗಡೆಯಾಗುತ್ತಿದೆ ಎಂದು ನಿರ್ಮಾಪಕಿ, ನಟಿ ನಿರ್ದೇಶಕಿ ರೂಪಾ ಅಯ್ಯರ್ ತಿಳಿಸಿದರು.

ರೂಪಾ ಅಯ್ಯರ್ ಅವರು ಒಂದು ಕಾಲದ ಹೇಳದೇ ಹೋದ ಘಟನೆಗಳನ್ನು ತೆರೆಯ ಮೇಲೆ ಹೇಳಲು ಹೊರಟ್ಟಿದ್ದಾರೆ. ಇದಕ್ಕಾಗಿ ಬಹಳ ವರ್ಷಗಳ ಪ್ರಯತ್ನ ಪಟ್ಟಿದ್ದಾರೆ. ಇದಕ್ಕೆಲ್ಲಾ ಮುಖ್ಯ ಕಾರಣ ಅವರ ರಾಷ್ಟ್ರಪ್ರೇಮ. ಎಲ್ಲರೂ ಈ ಚಿತ್ರ ನೋಡಿ ಎಂದರು ಹಿರಿಯ ನಟ ಸುಚೇಂದ್ರ ಪ್ರಸಾದ್.

ಇಂತಹ ದೇಶಪ್ರೇಮ ಸಾರುವ ಚಿತ್ರದಲ್ಲಿ ನಟಿಸಿದ್ದು ಖುಷಿಯಾಗಿದೆ. ದುರ್ಗಾ ಪಾತ್ರದಲ್ಲಿ ಅಭಿನಯಿಸಿರುವುದಾಗಿ ನಟಿ ಹಿತ ಚಂದ್ರಶೇಖರ್ ಹೇಳಿದರು.

ಚಿತ್ರದಲ್ಲಿ ಏಳು ಹಾಡುಗಳಿದೆ. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರ ಪತ್ನಿ ಅಮೃತ ಫಡ್ನವಿಸ್ ಅವರು ನಮ್ಮ ಚಿತ್ರದ ಹಾಡೊಂದನ್ನು ಹಾಡಿದ್ದಾರೆ. ಯಶ್ ರಾಜ್ ಸ್ಟುಡಿಯೋದಲ್ಲಿ ರೀರೆಕಾರ್ಡಿಂಗ್ ನಡೆದಿದೆ ಎಂದರು ಸಂಗೀತ ನಿರ್ದೇಶಕ ಗೌತಮ್ ಶ್ರೀವತ್ಸ.

ನಿರ್ಮಾಪಕ ಜಯಗೋಪಾಲ್ ಹಾಗೂ ಸಂಕಲನಕಾರ ಕ್ರೇಜಿಮೈಂಡ್ಸ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# 'ದಿ ಡೆವಿಲ್'ಡಿ–11ಕ್ಕೆ ಬಿಡುಗಡೆ




ಶ್ರೀ ಜೈ ಮಾತ ಕಂಬೈನ್ಸ್ ಲಾಂಛನದಲ್ಲಿ ನಿರ್ಮಾಣವಾಗಿರುವ, ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿರುವ ದರ್ಶನ್ ನಾಯಕನಾಗಿ ನಟಿಸಿರುವ "ದಿ ಡೆವಿಲ್" ಚಿತ್ರ ಇದೇ ಡಿ– 11ಕ್ಕೆ ಬಿಡುಗಡೆಯಾಗುತ್ತಿದೆ. ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು "ದಿ ಡೆವಿಲ್" ಕುರಿತು ಮಾತನಾಡಿದರು.

ದರ್ಶನ್ ಅವರು ಬಂದು ಬಿಡಲಿ. ಅವರ ಜೊತೆ ಕುಳಿತು ಪತ್ರಿಕಾಗೋಷ್ಠಿ ಮಾಡೋಣ ಎಂಬ ಉದ್ದೇಶ ನನಗಿತ್ತು. ಆದರೆ ಅದು ಸಾಧ್ಯವಾಗಿಲ್ಲ. ದರ್ಶನ್ ಅವರ ಅನುಪಸ್ಥಿತಿ ಬಹಳ ಕಾಡುತ್ತಿದೆ. ದರ್ಶನ್ ಅವರು ನನ್ನೊಂದಿಗೆ ಇದ್ದರೆ ಒಂದು ರೀತಿ ಬಲ. ಇನ್ನು, "ದಿ ಡೆವಿಲ್" ಚಿತ್ರದ ಕಥೆ ಬಗ್ಗೆ ನನ್ನ ಮತ್ತು ದರ್ಶನ್ ಅವರ ಜೊತೆಗೆ ಚರ್ಚಿಸಿದ್ದು 2018 ರಲ್ಲಿ. ಆನಂತರ ಕೋವಿಡ್ ಬಂತು. "ಕಾಟೇರ" ಸಿನಿಮಾ ಮುಗಿಸಿದ ನಂತರ ಈ ಚಿತ್ರ ಮಾಡುವುದಾಗಿ ನಿರ್ಧಾರವಾಯಿತು. ಹೀಗೆ ಎರಡು ವರ್ಷಗಳ ಹಿಂದೆ ನಮ್ಮ "ದಿ ಡೆವಿಲ್" ಚಿತ್ರ ಆರಂಭವಾಯಿತು. ದರ್ಶನ್ ಅವರು ಸೇರಿದಂತೆ ಎಲ್ಲಾ ಕಲಾವಿದರ ಹಾಗೂ ತಂತ್ರಜ್ಞರ ಸಹಕಾರದಿಂದ ಚಿತ್ರ ಉತ್ತಮವಾಗಿ ಮೂಡಿಬಂದಿದೆ. ಅಜನೀಶ್ ಲೋಕನಾಥ್ ಅವರ ಸಂಗೀತ ಸಂಯೋಜಿಸಿರುವ ಐದು ಹಾಡುಗಳು ಚಿತ್ರದಲ್ಲಿದೆ. "ಸರಿಗಮಪ" ಸಂಸ್ಥೆಯ ಮೂಲಕ ಈಗಾಗಲೇ ಬಿಡುಗಡೆಯಾಗಿರುವ ಹಾಡುಗಳು ಹಾಗೂ ಟೀಸರ್ ಕನ್ನಡಿಗರ ಮನ ಗೆದ್ದಿದೆ. ಟ್ರೇಲರ್ ಡಿಸೆಂಬರ್ 5 ರಂದು ರಿಲೀಸ್ ಆಗಲಿದೆ. ವಿಜಯಲಕ್ಷ್ಮಿ ದರ್ಶನ್ ಅವರು, ದಿನಕರ್ ಹಾಗೂ ದರ್ಶನ್ ಅವರ ಅಭಿಮಾನಿಗಳು ನಮ್ಮ ಜೊತೆಯಲ್ಲಿದ್ದು ಸಾಕಷ್ಟು ಸಹಕಾರ ನೀಡಿದ್ದಾರೆ. ಸುಪ್ರೀತ್ ಹಾಗೂ ಗಂಗಾಧರ್ ಅವರು ವಿತರಣೆಯಲ್ಲಿ ಸಹಾಯ ಮಾಡುತ್ತಿದ್ದಾರೆ. ಬಿಡುಗಡೆಯ ಹೊಸ್ತಿಲಿನಲ್ಲಿರುವ ನಮ್ಮ ಚಿತ್ರಕ್ಕೆ ಮಾಧ್ಯಮದ ಮಿತ್ರರು ಮೊದಲಿನಿಂದಲೂ ನೀಡಿದ್ದಾರೆ. ಅದೇ ಪ್ರೋತ್ಸಾಹ ಮುಂದುವರೆಯಲಿ ಎಂದು ನಿರ್ದೇಶಕ ಪ್ರಕಾಶ್ ವೀರ್ ಹೇಳಿದರು.

ಎರಡು ವರ್ಷಗಳಿಂದ ನಮ್ಮ ಮನೆಯಲ್ಲಿ "ದಿ ಡೆವಿಲ್" ಚಿತ್ರದ ಕುರಿತೇ ಮಾತು. ಈ ಚಿತ್ರ ನಮಗೆ ಮಗು ಇದ್ದ ಹಾಗೆ. ಚಿತ್ರ ಉತ್ತಮವಾಗಿ ಮೂಡಿಬಂದಿದೆ ಎಂದರೆ ಚಿತ್ರದ ಕಲಾವಿದರು ಹಾಗೂ ತಂತ್ರಜ್ಞರೆ ಕಾರಣ. ಈ ಸಂದರ್ಭದಲ್ಲಿ ಇಡೀ ತಂಡಕ್ಕೆ ಹಾಗೂ ವಿಶೇಷವಾಗಿ ಧನ್ಯವಾದ ತಿಳಿಸುತ್ತೇನೆ ಎಂದರು ಎಕ್ಸಿಕ್ಯುಟಿವ್ ಪ್ರೊಡ್ಯುಸರ್ ತಶ್ವಿನಿ ವೀರ್. ನಾನು ಈ ಸಂದರ್ಭದಲ್ಲಿ ಅವಕಾಶ ನೀಡಿದ ಜೈ ಮಾತಾ ಕಂಬೈನ್ಸ್ ಸಂಸ್ಥೆಗೆ, ನಿರ್ದೇಶಕ ಪ್ರಕಾಶ್ ವೀರ್ ಹಾಗೂ ದರ್ಶನ್ ಅವರಿಗೆ ಧನ್ಯವಾದ ಹೇಳುತ್ತೇನೆ. ಈ ಚಿತ್ರದಲ್ಲಿ ನಟಿಸಬೇಕುಂಬುದು ನನ್ನ ಆಸೆ. ಹಾಗಾಗಿ ಎರಡು ಚಿತ್ರಗಳನ್ನು ಬಿಟ್ಟಿದ್ದೇನೆ ಎಂದರು ನಾಯಕಿ ರಚನ ರೈ.

ಬಹಳ ವರ್ಷಗಳ ಹಿಂದೆ ಪ್ರಕಾಶ್ ಅವರ ಜೊತೆಗೆ ಕೆಲಸ ಮಾಡ ಬೇಕಿತ್ತು ಈಗ ಕಾಲ ಕೂಡಿ ಬಂದಿದೆ. ದರ್ಶನ್ ಅವರ ಜೊತೆಗೆ "ನವಗ್ರಹ" ಚಿತ್ರದಲ್ಲಿ ನಟಿಸಿದ್ದೆ. ಹದಿನೆಂಟು ವರ್ಷಗಳ ನಂತರ ಈ ಚಿತ್ರದಲ್ಲಿ ಅಭಿನಯಿಸಿದ್ದೇನೆ ಎಂದು ನಟಿ ಶರ್ಮಿಳಾ ಮಾಂಡ್ರೆ ತಿಳಿಸಿದರು.

ಪ್ರಕಾಶ್ ವೀರ್ ಅವರ ನಿರ್ದೇಶನದಲ್ಲಿ ಕೆಲಸ ಮಾಡುವುದೆಂದರೆ ಒಂದು ರೀತಿ ಖುಷಿ. ದರ್ಶನ್ ಅವರ ಜೊತೆಗೆ ನಾನು ನಟಿಸಿರುವ ನಾಲ್ಕನೇ ಸಿನುಮಾ ಇದು ಎಂದು ನಟ ಅಚ್ಯುತಕುಮಾರ್ ಹೇಳಿದರು.

"ಜಗ್ಗುದಾದ" ನಂತರ ದರ್ಶನ್ ಅವರ ಜೊತೆಗೆ ಅಭಿನಯ ಮಾಡಿರಲಿಲ್ಲ. ಈ ಚಿತ್ರದಲ್ಲಿ ನಿರ್ದೇಶಕರು ಅವಕಾಶ ಮಾಡಿ ಕೊಟ್ಟಿದ್ದಾರೆ. ಚಿಕ್ಕದಾದರೂ ಎಲ್ಲರ ಮನಸ್ಸಿನಲ್ಲಿ ಉಳಿಯುವ ಪಾತ್ರ ಎಂದರು ನಟ ಶೋಭ್ ರಾಜ್. ನಾನು ಈ ಚಿತ್ರದಲ್ಲಿ ದರ್ಶನ್ ಅವರ ಜೊತೆಗೆ ಮೊದಲ ಬಾರಿ ನಟಿಸಿದ್ದೇನೆ. ಆದರೆ ಬಿಡುಗಡೆ ಸಮಯದಲ್ಲಿ ಅವರ ಜೊತೆಗೆ ಕುಳಿತು ಸಿನಿಮಾ ನೋಡಲು ಆಗುತ್ತಿಲ್ಲ ಎಂದು ತಿಳಿಸಿದ ನಟ ಹುಲಿ ಕಾರ್ತಿಕ್ ಬಹಳ ಭಾವುಕರಾದರು. ಕರ್ನಾಟಕದ ಹಲವು ಚಿತ್ರಮಂದಿರಗಳಲ್ಲಿ ಬೆ.6.30 ರಿಂದಲೇ ಮೊದಲ ಪ್ರದರ್ಶನ ಆರಂಭವಾಗಲಿದೆ ಎಂದು ವಿತರಣೆಯಲ್ಲಿ ಸಹಕಾರ ನೀಡುತ್ತಿರುವ ಸುಪ್ರೀತ್ ತಿಳಿಸಿದರು. ಚಿತ್ರದಲ್ಲಿ ನಟಿಸಿರುವ ಸೋನಿಯಾ, ಯುವರಾಜ್, ಸಂಕಲನಕಾರ ಹರೀಶ್ ಕೊಮ್ಮೆ, ಹಾಡು ಬರೆದಿರುವ ಪ್ರಮೋದ್ ಮರವಂತೆ, ಅನಿರುದ್ಧ್ ಶಾಸ್ತ್ರಿ, ಸಂಭಾಷಣೆಕಾರ ಕಾಂತರಾಜ್, ಕಲಾ ನಿರ್ದೇಶಕ ಮೋಹನ್ ಬಿ ಕೆರೆ, "ಸರಿಗಮಪ" ಮ್ಯೂಸಿಕ್ ಸಂಸ್ಥೆಯ ಆನಂದ್, ಅಭಯ್ ಸತೀಶ್ ಗೌಡ, ತಿಲಕ್ ಶಂಕರ್ ಮುಂತಾದವರು ಚಿತ್ರದ ಕುರಿತು ಮಾತನಾಡಿದರು.

# ಅತಿಥಿ ಪಾತ್ರದಲ್ಲಿ ಕನ್ನಡದ ಖ್ಯಾತ ನಿರ್ದೇಶಕ ಗುರು ದೇಶಪಾಂಡೆ ನಟನೆ



ಈಗಾಗಲೇ ಟೀಸರ್ ನಿಂದ ಕುತೂಹಲ ಕೆರಳಿಸಿರುವ ಸೂಪರ್ ನ್ಯಾಚುರಲ್ ಥ್ರಿಲ್ಲರ್ ದೈಜಿ ಸಿನೆಮಾ ತಂಡವು ಮಹತ್ತರವಾದ ಚಿತ್ರೀಕರಣ ಒಂದನ್ನು ಭಾರತದ ಅತ್ಯಂತ ಪ್ರಾಚೀನ, ಅಧ್ಯಾತ್ಮಿಕ ನಗರವಾದ ವಾರಣಾಸಿಯಲ್ಲಿ ಚಿತ್ರೀಕರಿಸಿಕೊಂಡು ಹಿಂದಿರುಗಿದೆ. ವಾರಾಣಸಿಯ, ಅಲೌಕಿಕತೆ, ಅಧ್ಯಾತ್ಮಿಕತೆ, ಅಲ್ಲಿನ ಘಾಟ್ ಗಳು, ಅಲ್ಲಿಯ ಕಾಲಾತೀತತೆಯಿಂದ ಕೂಡಿದ ಜೀವನ ಇವುಗಳು ದೈಜಿ ಸಿನೆಮಾದ ಮುಖ್ಯ ವಿಷಯವಾದ ಅಗೋಚರ, ಅತೀಂದ್ರಿಯ ಶಕ್ತಿ, ನಂಬಿಕೆ, ಮನುಷ್ಯನ ಕಾಡುವ ಈ ಶಕ್ತಿಗಳ ಬಗೆಗಿನ ಕಥೆಗೆ ಸರಿಯಾದ ಒಂದು ವಾತಾವರಣ ಒದಗಿಸಿ ಕೊಟ್ಟಿತು. ಶಿವಾಜಿ ಸೂರತ್ಕಲ್ 1 ಮತ್ತು 2 ಯಶಸ್ವಿ ಚಿತ್ರಗಳನ್ನು ಕೊಟ್ಟ ನಿರ್ದೇಶಕ ಆಕಾಶ್ ಶ್ರೀವತ್ಸ ರವರ ನಿರ್ದೇಶನ ಹಾಗೂ ವಿಭಾ ಕಶ್ಯಪ್ ಪ್ರೊಡಕ್ಷನ್ಸ್ ನ ಅಡಿಯಲ್ಲಿ ನಿರ್ಮಿಸುತ್ತಿರುವ ನಿರ್ಮಾಪಕ ರವಿ ಕಶ್ಯಪ್ ರವರ ಈ ಸಿನಿಮಾ ದೈಜಿ ಯು ನೈಜ ಘಟನೆ ಆಧಾರಿತ ಚಿತ್ರವಾಗಿದ್ದು ಇದು ಮನುಷ್ಯ ಹಾಗೂ ಅಲೌಕಿಕ, ಅತೀಂದ್ರಿಯ, ಅಗೋಚರ ಶಕ್ತಿಗಳ ನಡುವಿನ ಸಂಕೀರ್ಣ ಸಂಬಂಧಗಳ ಅನ್ವೇಷಣೆಯೇ ಇದರ ತಿರುಳು.

ಚಿತ್ರತಂಡವು ಸತತವಾಗಿ ಮೂರು ದಿನಗಳ ಕಾಲ ರಾತ್ರಿಯಲ್ಲಿ ಚಿತ್ರೀಕರಣ ಮಾಡಿದ್ದು, ಇಲ್ಲಿಯ ಘಾಟ್ ಗಳು, ಸಣ್ಣ ಸಣ್ಣ ಓಣಿಗಳು, ಗಂಗಾ ಆರತಿ, ಅಧ್ಯಾತ್ಮಿಕತೆಯಿಂದ ಕೂಡಿದ ಭಕ್ತ ಸಮೂಹದ ಅನಿಯಂತ್ರಿತ ವಾತವರಣದಲ್ಲೇ, ಜನಜಂಗುಳಿಗಳ ಮಧ್ಯೆ ಸಿನಿಮಾದ ಮಹತ್ತರದ ದೃಶ್ಯಗಳನ್ನು ಚಿತ್ರೀಕರಿಸಲಾಗಿದೆ. ಈ ರೀತಿಯ ಚಿತ್ರೀಕರಣದಿಂದ ಸಿನಿಮಾಗೆ ಬೇಕಾದ ಕಚ್ಚಾ, ವೈವಿಧ್ಯಮಯ ಹಾಗೂ ರೋಮಾಂಚಕತೆಯ ದೃಶ್ಯಾವಳಿಗಳು ದೈಜಿ ಕಥೆಗೆ ಸರಿಯಾಗಿ ಹೊಂದುವ ವಾತಾವರಣ ಲಭ್ಯವಾಗಿಸಿತು. ಇದೇ ಸಂದರ್ಭದಲ್ಲಿ ದೈಜಿ ತಂಡಕ್ಕೆ ಮತ್ತೋರ್ವ ಕಲಾವಿದರಾದ, ಕನ್ನಡ ಸಿನೆಮಾದ ಹೆಸರಾಂತ ನಿರ್ದೇಶಕ ಗುರು ದೇಶಪಾಂಡೆ ಯವರು ಚಿತ್ರೀಕರಣದಲ್ಲಿ ಅತಿಥಿ ಪಾತ್ರದಲ್ಲಿ ಪಾಲ್ಗೊಂಡರು. ರಾಜಾ ಹುಲಿ, ರುದ್ರತಾಂಡವ ದಂತಹ ಅನೇಕ ಸಿನೆಮಾಗಳನ್ನು ನಿರ್ದೇಶಿಸಿರುವ ಗುರು ದೇಶಪಾಂಡೆ ಯವರು, ಈ ಚಿತ್ರದಲ್ಲಿ ಕಥಯ ಓಘಕ್ಕೆ ಹೊಂದುಕೊಂಡಂತೆ, ಅದಕ್ಕೆ ಮಹತ್ತರವಾದ ತಿರುವನ್ನು ತಂದುಕೊಡುವಂತಹ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಈ ಪಾತ್ರವು ಅಗೋಚರ, ಅಲೌಕಿಕ ಶಕ್ತಿಗಳ ವಿವಿಧ ತಿರುಳುಗಳನ್ನು ಪರಿಚಯಿಸುವ, ಜನರ ಮನಸ್ಸಿನಲ್ಲಿ ಗಟ್ಟಿಯಾಗಿ ಬೇರೂರುವ ಒಂದು ಪಾತ್ರವಾಗಿ ಹೊರಹೊಮ್ಮುವುದರಲ್ಲಿ ಅನುಮಾನವಿಲ್ಲ.

ದೈಜಿ ಸಿನಿಮಾವು ಜನರ ಮನಸ್ಸಿನಲ್ಲಿ ಅತೀ ಹೆಚ್ಚು ನಿರೀಕ್ಷೆ ಹುಟ್ಟಿಸಿರುವ ಕನ್ನಡದ ಸಿನಿಮಾಗಳಲ್ಲಿ ಒಂದು ಎಂಬುದು ಈಗಾಗಲೇ ಟೀಸರ್ ನಿಂದ ತಂಡ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,